ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೬

# ಪಟ್ಟಿ – ೧೭

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೆಯ ಮುಂದುವರೆದ ಅಧಿವೇಶನ**

**ಶುಕ್ರವಾರ, ದಿನಾಂಕ : ೨೭ನೇ ಮಾರ್ಚ್ ೨೦೨೬**

---

## ಸಮೂಹ – V

೧. ಸಮಾಜ ಕಲ್ಯಾಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

೩. ಕೃಷಿ ಸಚಿವರು

೪. ಕಾರ್ಮಿಕ ಸಚಿವರು

೫. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

---

# AI ತಂತ್ರಜ್ಞಾನದಿಂದ ಅಪಾಯ ಮತ್ತು ಯುವಕರ ಉದ್ಯೋಗ ರಕ್ಷಣೆ ಬಗ್ಗೆ

**ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೦ (೨೪೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೇಗವಾಗಿ ಬೆಳೆಯುತ್ತಿರುವ ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನದಿಂದ ಐಟಿ, ಬಿಟಿ ಹಾಗೂ ಇತರೆ ಕ್ಷೇತ್ರಗಳಲ್ಲಿ ಉದ್ಯೋಗಗಳು ಅಪಾಯದ ಸ್ಥಿತಿಗೆ ತಲುಪುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಉದ್ಯೋಗಗಳು ಅಪಾಯದಲ್ಲಿವೆ ; ಈ ಬಗ್ಗೆ ಸರ್ಕಾರ ಯಾವುದೇ ಸಮೀಕ್ಷೆ ನಡೆಸಿದೆಯೇ ; ನಡೆಸಿದ್ದಲ್ಲಿ, ವಿವರ ನೀಡುವುದು ;

(ಆ) AI ತಂತ್ರಜ್ಞಾನದಿಂದ ಉದ್ಯೋಗ ಕಳೆದುಕೊಳ್ಳುವ ಸಾಧ್ಯತೆ ಇರುವ ಯುವಕರಿಗೆ ಪುನರ್ ಪ್ರಶಿಕ್ಷಣ (Reskilling) ಹಾಗೂ ಹೊಸ ಉದ್ಯೋಗ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) AI ತಂತ್ರಜ್ಞಾನದಿಂದ ಉಂಟಾಗಬಹುದಾದ ಉದ್ಯೋಗ ನಷ್ಟದ ಪರಿಣಾಮವನ್ನು ಕಡಿಮೆ ಮಾಡಲು ರಾಜ್ಯ ಸರ್ಕಾರ ಯಾವುದೇ ವಿಶೇಷ ನೀತಿ ಅಥವಾ ಕಾರ್ಯಯೋಜನೆ ರೂಪಿಸಿರುವುದೇ ; ಇದ್ದರೆ, ಅದರ ವಿವರ ನೀಡುವುದು ;

(ಈ) ರಾಜ್ಯದ ಐಟಿ ಮತ್ತು ಸ್ಟಾರ್ಟ್‌ಅಪ್ ಕ್ಷೇತ್ರಗಳಲ್ಲಿ AI ಬಳಕೆಯನ್ನು ಉತ್ತೇಜಿಸುವುದರ ಜೊತೆಗೆ ಉದ್ಯೋಗಗಳನ್ನು ರಕ್ಷಿಸಲು ಸರ್ಕಾರ ಕೈಗೊಂಡಿರುವ ನಿರ್ದಿಷ್ಟ ಕ್ರಮಗಳೇನು ?

# ಗ್ರಾಮ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಸದೆ ಇರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೫೧ (೨೪೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸಂಸ್ಥೆಗಳ ಅವಧಿ ಮುಗಿದು ಎಷ್ಟು ಕಾಲ ಕಳೆದಿದೆ ; ಅವಧಿ ಮುಗಿದಿದ್ದರೂ ಸರ್ಕಾರವು ಮರುಚುನಾವಣೆಗಳನ್ನು ನಡೆಸದೇ ಇರುವುದಕ್ಕೆ ಕಾರಣಗಳೇನು ; ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ;

(ಆ) ಅವಧಿ ಮುಗಿದ ತ್ರಿಸ್ತರ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಕ್ಷೇತ್ರ ಪುನರ್‌ವಿಂಗಡಣೆ (Delimitation) ಪ್ರಕ್ರಿಯೆ ಕೈಗೊಳ್ಳಲಾಗಿದೆಯೇ ; ಕೈಗೊಳ್ಳಲಾಗಿದ್ದರೆ, ಅದರ ಪ್ರಸ್ತುತ ಸ್ಥಿತಿ ಏನು ; ಕ್ಷೇತ್ರ ಪುನರ್‌ವಿಂಗಡಣೆ ಪೂರ್ಣಗೊಂಡಿದೆಯೇ ಮತ್ತು ಈ ಸಂಸ್ಥೆಗಳಿಗೆ ಚುನಾವಣೆಗಳನ್ನು ಯಾವಾಗ ನಡೆಸುವ ಯೋಜನೆ ಸರ್ಕಾರದ ಮುಂದಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಚುನಾವಣೆ ವಿಳಂಬವಾಗಿರುವ ಅವಧಿಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಆಡಳಿತವನ್ನು ಯಾರು ನಿರ್ವಹಿಸುತ್ತಿದ್ದಾರೆ ; ಆಡಳಿತದ ಪಾರದರ್ಶಕತೆ ಮತ್ತು ಜವಾಬ್ದಾರಿತ್ವವನ್ನು ಖಚಿತಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಮುಂದಿನ ಚುನಾವಣೆಗಳು ನಡೆಯುವವರೆಗೆ ಅವಧಿ ಮುಗಿದ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಸದಸ್ಯರನ್ನು (ಸದಸ್ಯರು/ಸದಸ್ಯೆಯರು) ತಾತ್ಕಾಲಿಕವಾಗಿ

ಮುಂದುವರೆಸುವ ಬಗ್ಗೆ ಸರ್ಕಾರ ಪರಿಗಣನೆ ನಡೆಸಿದೆಯೇ ; ಇದ್ದರೆ, ಅದರ ಕುರಿತು ಸರ್ಕಾರದ ನಿರ್ಧಾರ ಮತ್ತು ಕಾನೂನುಬದ್ಧ ವ್ಯವಸ್ಥೆಗಳ ಮಾಹಿತಿ ನೀಡುವುದು ?

## ಯೋಜನೆಗಳು ಮತ್ತು ಅನುದಾನ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೨ (೨೪೦೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆವತಿಯಿಂದ ಜಾರಿಗೆ ತರಲಾಗುತ್ತಿರುವ ಪ್ರಮುಖ ಯೋಜನೆಗಳು ಯಾವುವು ; (ಯೋಜನಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಇಲಾಖೆಗೆ ಮೀಸಲಾದ ಅನುದಾನ ಎಷ್ಟು ; ಯಾವ ಯಾವ ಯೋಜನೆಗಳಿಗೆ ಅನುದಾನ ಬಳಕೆ ಮಾಡಲಾಗಿದೆ ; ಖರ್ಚಿನ ವಿವರವೇನು ;

(ಇ) ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ಕುಟುಂಬಗಳಿಗೆ ಉದ್ಯೋಗ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರೈತರಿಗೆ ಬೆಳೆ ಮಾರಾಟ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೩ (೨೪೦೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತ ಉತ್ಪಾದಕರ ಕಂಪನಿಗಳಿಗೆ (ಎಫ್.ಪಿ.ಓ) ಖರೀದಿ ಕೇಂದ್ರಗಳನ್ನು ನಡೆಸಲು ಪರವಾನಗಿ ನೀಡುವ ಸಂಬಂಧ ಸರ್ಕಾರದ ಪ್ರಸ್ತುತ ನೀತಿ ಏನು ; ರೈತರಿಗೆ ನೇರವಾಗಿ ಅನುಕೂಲವಾಗುವಂತಹ ಸಂಸ್ಥೆಗಳಿಗೆ ಆದ್ಯತೆ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯ ರೈತ ಉತ್ಪಾದಕ ಕೇಂದ್ರಗಳಿಗೆ (ಎಫ್.ಪಿ.ಓ) ೨೦೨೩–೨೪ ನೇ ಸಾಲಿನ ಸೇವಾ ಶುಲ್ಕವನ್ನು ಇದುವರೆಗೆ ನೀಡಿಲ್ಲವೆಂಬ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಕುರಿತು ಸರ್ಕಾರದ ಕ್ರಮವೇನು ;

(ಇ) ಸಣ್ಣ ಹಾಗೂ ಅತಿ ಸಣ್ಣ ರೈತರಿಗೆ ಸಮೀಪದಲ್ಲೇ ಬೆಳೆ ಮಾರಾಟ ಸೌಲಭ್ಯ ಒದಗಿಸುವ ಉದ್ದೇಶದಿಂದ ಭತ್ತ, ತೊಗರಿ, ಕಡಲೆ, ಜೋಳ ಸೇರಿದಂತೆ ವಿವಿಧ ಬೆಳೆಗಳ ಖರೀದಿ ಕೇಂದ್ರಗಳನ್ನು ರೈತ ಉತ್ಪಾದಕರ ಕಂಪನಿಗಳ ಮೂಲಕ ಆರಂಭಿಸಲು ಸರ್ಕಾರ ವಿಶೇಷ ಯೋಜನೆ ರೂಪಿಸುವ ಯೋಚನೆ ಹೊಂದಿದೆಯೇ ; ಹೊಂದಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಈ) ರಾಜ್ಯದಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವ ರೈತ ಉತ್ಪಾದಕರ ಕಂಪನಿಗಳಿಗೆ ಖರೀದಿ ಕೇಂದ್ರ ಪರವಾನಗಿ ನೀಡವ ಪ್ರಕ್ರಿಯೆಯನ್ನು ಸರಳೀಕರಿಸಲು ಹಾಗೂ ಅವುಗಳ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರವನ್ನು ನೀಡುವುದು)

## ಸಮೀಕ್ಷೆಗಳು ಮತ್ತು ಗಣತಿಗೆ ಸಂಬಂಧಿಸಿದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೪ (೨೪೦೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ನಡೆಸಿದ ಆರ್ಥಿಕ/ಸಾಮಾಜಿಕ ಸಮೀಕ್ಷೆಗಳ ವಿವರವೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ರಾಜ್ಯವು ಅಂಕಿ–ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ (Ministry of Statistics and Programme Implementation) ಜೊತೆ ಸಂಯೋಜನೆ ಮಾಡಿಕೊಂಡು ಯಾವ ಯಾವ ಸಮೀಕ್ಷೆಗಳನ್ನು ನಡೆಸುತ್ತಿದೆ ;

(ಇ) ಡಿಜಿಟಲ್ ಡೇಟಾ ಸಂಗ್ರಹಣೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಅಂಕಿ–ಅಂಶಗಳ ನಿಖರತೆ ಮತ್ತು ಪಾರದರ್ಶಕತೆ ಹೆಚ್ಚಿಸಲು ಕೈಗೊಂಡ ಕ್ರಮಗಳೇನು ?

## ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಸತಿ ಮತ್ತು ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೫ (೨೪೦೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ವಿದ್ಯಾರ್ಥಿ ನಿಲಯಗಳಲ್ಲಿ ನೀರು, ವಿದ್ಯುತ್, ಶೌಚಾಲಯ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾರ್ಯ ಹೇಗೆ ನಡೆಯುತ್ತಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಒದಗಿಸುತ್ತಿರುವ ಮೂಲಭೂತ ಸೌಕರ್ಯಗಳಲ್ಲಿ ಯಾವ ರೀತಿಯ ಬದಲಾವಣೆಗಳನ್ನು ತರಲಾಗಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹೊಸ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲಾಗಿದೆ ; ಮುಂದಿನ ದಿನಗಳಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕಾರ್ಮಿಕ ಇಲಾಖೆಯಡಿ ಬರುವ ಉದ್ಯೋಗ ವೇತನ ಮತ್ತು ಕಾರ್ಮಿಕ ಹಕ್ಕುಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೬ (೨೪೧೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ನಿರುದ್ಯೋಗದ ಪ್ರಮಾಣ ಎಷ್ಟು ; ಕಳೆದ ಮೂರು ವರ್ಷಗಳ ಅಂಕಿ–ಅಂಶಗಳನ್ನು ಒದಗಿಸುವುದು ;

(ಆ) ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಉದ್ಯೋಗ ಸೃಷ್ಟಿಗಾಗಿ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕನಿಷ್ಠ ವೇತನವನ್ನು ಕೊನೆಯದಾಗಿ ಯಾವಾಗ ಪರಿಷ್ಕರಿಸಲಾಗಿದೆ ; ಪ್ರಸ್ತುತ ಕನಿಷ್ಠ ವೇತನ ದರ ಎಷ್ಟು ;

(ಈ) ಮಹಿಳಾ ಕಾರ್ಮಿಕರ ಸುರಕ್ಷತೆ ಮತ್ತು ಸಮಾನ ವೇತನ ಜಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪೂರ್ಣ ಮಾಹಿತಿ ಒದಗಿಸುವುದು)

(ಉ) ಬಾಲಕಾರ್ಮಿಕರನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳ ಫಲಿತಾಂಶವೇನು ?

## ಜಲ ಜೀವನ್ ಮಿಷನ್ ಯೋಜನೆಯ ಉದ್ದೇಶದ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೫೭ (೨೪೬೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲ ಜೀವನ್ ಮಿಷನ್ ಹಾಗೂ ಹರ್‌ಘರ್ ಜಲ ಯೋಜನೆಯ ಉದ್ದೇಶವೇನು ; ಯೋಜನೆಯು ಯಾವ ವರ್ಷದಲ್ಲಿ ಪ್ರಾರಂಭಿಸಲಾಯಿತು ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಈ ಯೋಜನೆಗಾಗಿ ಪ್ರಾರಂಭದಿಂದ ಈವರೆಗೂ ಕೇಂದ್ರದಿಂದ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಗೊಳಿಸಿರುವ ಅನುದಾನವೆಷ್ಟು; (ವರ್ಷವಾರು, ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಜಲ ಜೀವನ್ ಮಿಷನ್ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನ ಮಾಡಲು ಸರ್ಕಾರವು ಎದುರಿಸುತ್ತಿರುವ ಸಮಸ್ಯೆಗಳು ಯಾವುವು ; ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಜಲ ಜೀವನ್ ಮಿಷನ್ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೮ (೨೩೨೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಜಲ ಜೀವನ್ ಮಿಷನ್ ಯೋಜನೆಗೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಘೋಷಿಸಿದ ಅನುದಾನವೆಷ್ಟು

ಮತ್ತು ಬಿಡುಗಡೆಗೊಳಿಸಿದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ರಾಜ್ಯದಾದ್ಯಂತ ಜಲ ಜೀವನ್ ಮಿಷನ್ ಯೋಜನೆಯ ಸಾಕಷ್ಟು ಕಾಮಗಾರಿಗಳು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಅದರಲ್ಲಿ ಮುಕ್ತಾಯಗೊಂಡಿರುವ ಕಾಮಗಾರಿಗಳು ಹಾಗೂ ಇನ್ನು ಬಾಕಿ ಇರುವ ಕಾಮಗಾರಿಗಳು ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಮಕ್ಕಳಲ್ಲಿ ಕಂಡು ಬರುವ ಅಸಹಜ ಬೆಳವಣಿಗೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೫೫ (೨೩೨೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೬ ವರ್ಷದೊಳಗಿನ ಅಸಹಜ ಬೆಳವಣಿಗೆ (ಕುಬ್ಜತೆ) ಸಮಸ್ಯೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮಕ್ಕಳಲ್ಲಿ ಅಸಹಜ ಬೆಳವಣಿಗೆ (ಕುಬ್ಜತೆ) ಬರಲು ಕಾರಣವೇನು ; ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಅಸಹಜ ಬೆಳವಣಿಗೆ (ಕುಬ್ಜತೆ)ಯನ್ನು ತಡೆಗಟ್ಟಲು ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿಯಲ್ಲಿ ಕೈಗೊಂಡಿರುವ ಕ್ರಮವೇನು ಹಾಗೂ ಅದಕ್ಕೆ ಮೀಸಲಿಟ್ಟಿರುವ ಅನುದಾನ ಎಷ್ಟು ; (ಕಳೆದ ಮೂರು ವರ್ಷದ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೦–೩ ವರ್ಷದ ಮಕ್ಕಳಿಗೆ ಸರ್ಕಾರವು ಅಂಗನವಾಡಿ ಕೇಂದ್ರಗಳ ಮೂಲಕ ಮನೆಗಳಿಗೆ ನೇರವಾಗಿ ಯಾವ ಯಾವ ಪೌಷ್ಠಿಕ ಆಹಾರಗಳನ್ನು ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತದೆ ; (ಒಂದು ತಿಂಗಳಿಗೆ ನೀಡುವ ಪೌಷ್ಠಿಕ ಆಹಾರದ ಮಾಹಿತಿ ನೀಡುವುದು)

(ಉ) ೩–೬ ವರ್ಷದೊಳಗಿನ ಮಕ್ಕಳಿಗೆ ಸರ್ಕಾರವು ಅಂಗನವಾಡಿ ಕೇಂದ್ರದಲ್ಲಿ ನೀಡುವ ಪೌಷ್ಠಿಕ ಆಹಾರದ ಪ್ರಮಾಣ ಎಷ್ಟು ? (ವಿವರ ನೀಡುವುದು)

## ರೈತ ಸಂಪರ್ಕ ಕೇಂದ್ರಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೦ (೨೩೨೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ರೈತ ಸಂಪರ್ಕ ಕೇಂದ್ರಗಳ ಸಂಖ್ಯೆ ಎಷ್ಟು; ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿಯಾಗಿರುವ ಹುದ್ದೆಗಳ ಸಂಖ್ಯೆ ಹಾಗೂ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ರೈತ ಸಂಪರ್ಕ ಕೇಂದ್ರಗಳಿಗೆ ಗುತ್ತಿಗೆ ಆಧಾರದಲ್ಲಿ ಎಜೆನ್ಸಿಯವರಿಂದ ಎಷ್ಟು ಅಕೌಂಟೆಂಟ್‌ಗಳನ್ನು ಪಡೆಯಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರೈತ ಸಂಪರ್ಕ ಕೇಂದ್ರಗಳಲ್ಲಿ ಗುತ್ತಿಗೆ ಆಧಾರದ ಅಕೌಂಟೆಂಟ್‌ಗಳನ್ನು ಯಾವ ಮಾನದಂಡಗಳ ಮೇಲೆ ಆಯ್ಕೆ ಮಾಡಲಾಗುತ್ತದೆ ;

(ಈ) ಶಿವಮೊಗ್ಗ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ಗುತ್ತಿಗೆ ಆಧಾರದಲ್ಲಿ ೫ ವರ್ಷ ಕರ್ತವ್ಯ ನಿರ್ವಹಿಸುತ್ತಿರುವ ಅಕೌಂಟೆಂಟ್‌ಗಳ ಮಾಹಿತಿ ನೀಡುವುದು ? (ತಾಲ್ಲೂಕುವಾರು ವಿವರ ನೀಡುವುದು)

## ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಾದ 'ಜಲ ಜೀವನ್ ಮಿಷನ್' ಕಾಮಗಾರಿಯ ಗುಣಮಟ್ಟದ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೧ (೨೪೧೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ೩೨ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಿಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಾದ 'ಜಲ ಜೀವನ್ ಮಿಷನ್' ಯೋಜನೆಯಡಿಯಲ್ಲಿ ಸಮರ್ಪಕವಾಗಿ ಶುದ್ಧ ಕುಡಿಯುವ ನೀರಿನ ಸರಬರಾಜು ಆಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರದಿಂದ ಯಾವ ಕ್ರಮವಹಿಸಲಾಗಿದೆ ;

(ಇ) ಯಾವ ಗುತ್ತಿಗೆದಾರರಿಂದ ಸದರಿ ಕಾಮಗಾರಿಯು ಅನುಷ್ಠಾನಗೊಂಡಿದೆ ಹಾಗೂ ಇದಕ್ಕೆ ತಗುಲಿರುವ ವೆಚ್ಚ ಎಷ್ಟು ;

(ಈ) ಯಾವ ಕಾಲಮಿತಿಯೊಳಗೆ ಸದರಿ ೩೨ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸಲಾಗುವುದು ?

## ಬಿ.ಪಿ.ಎಲ್ ಕುಟುಂಬದ ಎಲ್ಲಾ ಯೋಜನೆಯಡಿ ಮನೆಯ ಯಜಮಾನಿಯರಿಗೆ 'ಗೃಹಲಕ್ಷ್ಮಿ' ಹಣವನ್ನು ನೀಡುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೨ (೨೪೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ಗೃಹಲಕ್ಷ್ಮಿ ಯೋಜನೆಯಡಿ ಸಿಂಧನೂರು ತಾಲ್ಲೂಕಿನ ಎಲ್ಲಾ ಬಿ.ಪಿ.ಎಲ್ ಕುಟುಂಬದ ಮನೆಯ ಯಜಮಾನಿಯರಿಗೆ ರೂ.೨೦೦೦/–ಗಳನ್ನು ನೀಡಲಾಗುತ್ತಿದೆಯೇ ;

(ಆ) ಬಿ.ಪಿ.ಎಲ್ ಕುಟುಂಬಕ್ಕೆ ಸೇರಿದ ಕೆಲವರು ಜಿ.ಎಸ್.ಟಿ ಸಂಖ್ಯೆಯನ್ನು ಮಾತ್ರ ಪಡೆದಿದ್ದು, ಈವರೆಗೆ ಯಾವುದೇ ರಿಟರ್ನ್ ಫೈಲ್ ಮಾಡದಿದ್ದರೂ ಹಾಗೂ ಆದಾಯ ತೆರಿಗೆ ವ್ಯಾಪ್ತಿಗೆ ಒಳಪಡದಿದ್ದರೂ ಅವರು ಯೋಜನೆಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು; ಸಿಂಧನೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಇಂತಹ ಎಷ್ಟು ಪ್ರಕರಣಗಳು ಇವೆ ;

(ಈ) ಸದರಿ ಸಮಸ್ಯೆಯನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಿ, ಸಿಂಧನೂರು ತಾಲ್ಲೂಕಿನ ಎಲ್ಲಾ ಅರ್ಹ ಬಿ.ಪಿ.ಎಲ್ ಕುಟುಂಬದ ಯಜಮಾನಿಯರಿಗೆ ಗೃಹಲಕ್ಷ್ಮಿ ಹಣವನ್ನು ನೀಡಲಾಗುವುದು ?

## ವಿದ್ಯಾರ್ಥಿ ನಿಲಯಗಳನ್ನು ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೩ (೨೪೧೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳೆಷ್ಟು ;

(ಆ) ಸದರಿ ವಿದ್ಯಾರ್ಥಿ ನಿಲಯಗಳಿಗೆ ಸರ್ಕಾರದಿಂದ ಮಂಜೂರಾಗಿರುವ ವಿದ್ಯಾರ್ಥಿಗಳ ಸಾಮರ್ಥ್ಯಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಂಜೂರಾತಿ ಸಾಮರ್ಥ್ಯಕ್ಕಿಂತ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ದಾಖಲಾದಲ್ಲಿ ಸಮರ್ಪಕವಾಗಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಂಬಂಧ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ರಾಯಚೂರು ಇವರಿಂದ ವರದಿ ಪಡೆದು ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವ ಸಂಬಂಧ ಸರ್ಕಾರದ ನಿಲುವೇನು ;

(ಉ) ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿಗೆ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸಿ, ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗುವುದು ?

## ಸಿಂಧನೂರು ತಾಲ್ಲೂಕಿನ ರಾಮತ್ನಾಳ ಗ್ರಾಮದಲ್ಲಿ ಹೊಸ ಅಂಗನವಾಡಿ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೬೪ (೨೪೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ರಾಮತ್ನಾಳ ಗ್ರಾಮದಲ್ಲಿ ಹೊಸ ಅಂಗನವಾಡಿ ಕೇಂದ್ರ ಮಂಜೂರಾತಿಗಾಗಿ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಯಾವ ಕಾಲಮಿತಿಯೊಳಗೆ ಸದರಿ ಗ್ರಾಮದಲ್ಲಿ ನೂತನ ಅಂಗನವಾಡಿ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗುವುದು ?

# ಜಲ ಜೀವನ್ ಮಿಷನ್ ಯೋಜನೆಯ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೬೫ (೨೪೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಲ ಜೀವನ್ ಮಿಷನ್ ಹಾಗೂ ಹರ್ ಘರ್ ಜಲ ಯೋಜನೆಯ ಉದ್ದೇಶವೇನು ; ಯೋಜನೆಯು ಯಾವ ವರ್ಷದಲ್ಲಿ ಪ್ರಾರಂಭಿಸಲಾಯಿತು ; ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಾಗಿ ಪ್ರಾರಂಭದಿಂದ ಈವರೆಗೂ ಕೇಂದ್ರದಿಂದ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಗೊಳಿಸಿರುವ ಅನುದಾನವೆಷ್ಟು ; (ವರ್ಷವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಜಲ ಜೀವನ್ ಮಿಷನ್ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನ ಮಾಡಲು ಸರ್ಕಾರವು ಎದುರಿಸುತ್ತಿರುವ ಸಮಸ್ಯೆಗಳು ಯಾವುವು ; ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಜೆ.ಜೆ.ಎಂ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಉಪಗುತ್ತಿಗೆ ನೀಡಲು ಅವಕಾಶ ಕಲ್ಪಿಸಿರುವುದಿಲ್ಲವಾದರೂ, ಉಪಗುತ್ತಿಗೆ ನೀಡಿರುವುದು ಸರ್ಕಾರದ ಗಮನಕ್ಕಿದೆಯೇ ; ಇದ್ದಲ್ಲಿ,

ಉಪಗುತ್ತಿಗೆ ನೀಡಿರುವವರ ವಿರುದ್ಧ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಉ) ಜಲ ಜೀವನ್ ಮಿಷನ್ ಯೋಜನೆಯಡಿ ರಾಜ್ಯದ ಗ್ರಾಮೀಣ ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ ಕಲ್ಪಿಸುವ ಕಾಮಗಾರಿಯನ್ನು ಕೈಗೊಳ್ಳುವಾಗ ಅಗತ್ಯ ಅಂಶಗಳನ್ನು ಪಾಲಿಸಲು ಹಾಗೂ ಗುಣಮಟ್ಟವನ್ನು ಕಾಯ್ದುಕೊಳ್ಳುವ ಕುರಿತು ಸರ್ಕಾರ ಆದೇಶಿಸಿದ್ದರೂ ಸಹ ಅಗತ್ಯ ಅಂಶಗಳನ್ನು ಪಾಲಿಸದೇ ಮತ್ತು ಕಳಪೆ ಕಾಮಗಾರಿಯನ್ನು ಮಾಡಿರುವವರ ವಿರುದ್ಧ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ನೇಮಕಾತಿ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೬ (೨೩೫೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಅನುಚ್ಛೇದ ೩೭೧(ಜೆ) ಅಡಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಗ್ರೂಪ್–ಸಿ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಸಲುವಾಗಿ ದಿನಾಂಕ:೩೦.೧೨.೨೦೧೯ರಲ್ಲಿ ಎಷ್ಟು ಹುದ್ದೆಗಳಿಗೆ ನೇಮಕಾತಿ ಹೊರಡಿಸಲಾಗಿದೆ ; ನೇಮಕಾತಿ ಅಧಿಸೂಚನೆ ವಿವರ ನೀಡುವುದು ;

(ಆ) ಸದರಿ ನೇಮಕಾತಿ ಅಧಿಸೂಚನೆಯಲ್ಲಿರುವ ಹುದ್ದೆಗಳನ್ನು ಯಾವ ಆಧಾರದ ಮೇಲೆ ಭರ್ತಿ ಮಾಡಲಾಗುವುದು ; ಭರ್ತಿ ಮಾಡಲು ಅನುಸರಿಸಿದ ಕ್ರಮಗಳೇನು ;

(ಇ) ಪರೀಕ್ಷೆ ಮತ್ತು ಸಂದರ್ಶನಗಳನ್ನು ಮುಗಿಸಿ ಇಲ್ಲಿಯವರೆಗೆ ಎಷ್ಟು ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ ; ಸರ್ಕಾರದ ಅನುಮತಿ ಪಡೆಯಲಾಗಿದೆಯೇ ; ಅಧಿಸೂಚನೆಯಲ್ಲಿ ನಮೂದಾಗಿರುವ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ನೇಮಕಾತಿ ಆಗಿದೆಯೇ ; ಇಲ್ಲದಿದ್ದಲ್ಲಿ ಯಾವ ಕಾರಣಕ್ಕಾಗಿ ಕಡಿಮೆ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆ ; ಸಂಪೂರ್ಣ ಮಾಹಿತಿ ನೀಡುವುದು ; ನೇಮಕಾತಿ ಅಧಿಸೂಚನೆಯಲ್ಲಿರುವ ಎಲ್ಲಾ ಹುದ್ದೆಗಳಿಗೆ ನೇಮಕಾತಿ ಮಾಡದೆ ಇರಲು ಕಾರಣವೇನು ?

## RDPR ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೭ (೨೩೫೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಯೋಜನೆಯಡಿ ಮೀಸಲಿಟ್ಟ ಅನುದಾನ ಎಷ್ಟು ;

(ಆ) ಈ ಪೈಕಿ ಬಿಡುಗಡೆಯಾದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; ಅವ್ಯವಹಾರವಾದ ಅನುದಾನವೆಷ್ಟು ; (ಜಿಲ್ಲಾ ಮತ್ತು ತಾಲ್ಲೂಕುವಾರು ಆದೇಶದ ಪ್ರತಿ ಒಳಗೊಂಡಂತೆ ಮಾಹಿತಿ ನೀಡುವುದು)

(ಇ) ಅವ್ಯವಹಾರವಾದ ಅನುದಾನಕ್ಕೆ ಸರ್ಕಾರದಿಂದ ಕೈಗೊಂಡಿರುವ ಕ್ರಮಗಳೇನು ?

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೮ (೨೩೫೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದ ಜನಸಂಖ್ಯೆಯ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯ ಸ್ಥಿತಿಗಳನ್ನು ನಿಖರವಾದ ದಾಖಲಿಸುವ ಉದ್ದೇಶದಿಂದ ೨೦೨೫ರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಯಾವ ದಿನಾಂಕದಂದು ಪ್ರಾರಂಭಿಸಲಾಗಿದೆ ; ಮತ್ತು ಯಾವ ದಿನಾಂಕದಂದು ಮುಕ್ತಾಯಗೊಳಿಸಲಾಗಿದೆ ; ಸಮೀಕ್ಷೆಯ ಮೂಲ ಉದ್ದೇಶವೇನು ; ಮೂಲ ಉದ್ದೇಶ ಈಡೇರಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ರಾಜ್ಯ ಸರ್ಕಾರವು ಎಷ್ಟು ಮೊತ್ತವನ್ನು ಮೀಸಲಿರಿಸಿದೆ ಹಾಗೂ ಬಿಡುಗಡೆಗೊಳಿಸಿದೆ ;

ಎಷ್ಟು ಮೊತ್ತವನ್ನು ಯಾವ ಕಾರಣಕ್ಕಾಗಿ ಯಾವ ಉದ್ದೇಶಕ್ಕಾಗಿ ವೆಚ್ಚ ಮಾಡಲಾಗಿದೆ ; ಎಷ್ಟು ಮೊತ್ತವನ್ನು ಯಾವ ದಿನಾಂಕದಂದು ಯಾರಿಗೆ/ಸಂಸ್ಥೆ/ಕಂಪನಿ/ಇನ್ನಿತರರಿಗೆ ಪಾವತಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯ ಸರ್ಕಾರವು ನೂರಾರು ಕೋಟಿ ತೆರಿಗೆ ಹಣದಿಂದ ಸಮೀಕ್ಷೆಯನ್ನು ಕೈಗೊಂಡಿದೆ ಎಂಬ ವಿಷಯ ಪತ್ರಿಕೆಗಳಲ್ಲಿ ಪ್ರಕಟಗೊಂಡಿದೆ ಆದರೆ ಸಮೀಕ್ಷೆ ಪೂರ್ಣಗೊಳಿಸಿ ಹಲವು ತಿಂಗಳು ಕಳೆದರೂ ವರದಿಯನ್ನು ಒಪ್ಪಿಸದೇ ಇರುವುದು ಹಾಗೂ ಅದು ಜಾರಿಗೆ ಬರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ/ ತೆಗೆದುಕೊಳ್ಳುವ ಕ್ರಮಗಳೇನು; ಜಾರಿಗೊಳಿಸಲು ಯಾಕೆ ವಿಳಂಬ ನೀತಿಯನ್ನು ಅನುಸರಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಕಾರ್ಯನಿರ್ವಹಿಸಿದ ನೌಕರರಿಗೆ ಗೌರವ ಧನವನ್ನು ಪಾವತಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು ; ಸಮೀಕ್ಷೆಯಲ್ಲಿ ಭಾಗವಹಿಸಿದ ನೌಕರರಿಗೆ ಯಾವ ರೀತಿಯ ಗೌರವ ಧನವನ್ನು ಸರ್ಕಾರವು ನೀಡಲು ತೀರ್ಮಾನಿಸಿದೆ ; ನೀಡಿದ್ದರೆ ಮಾಹಿತಿ ನೀಡುವುದು ?

## ಪ್ರಗತಿ ಪಥ ರಸ್ತೆ ಯೋಜನೆಯ ಅನುಷ್ಠಾನದ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೯ (೨೩೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪-೨೫ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಗ್ರಾಮೀಣ ಭಾಗದ ರಸ್ತೆ ಸಂಪರ್ಕ ಜಾಲವನ್ನು ವ್ಯವಸ್ಥಿತವಾಗಿ ಹಾಗೂ ಗುಣಾತ್ಮಕವಾಗಿ ಅಭಿವೃದಿಪಡಿಸುವ ಉದ್ದೇಶದಿಂದ ಪ್ರಗತಿಪಥ ಯೋಜನೆಯನ್ನು ಜಾರಿಗೊಳಿಸುವುದಾಗಿ ಘೋಷಿಸಲಾಗಿದ್ದು, ಪ್ರಸ್ತುತ ಸಾಲಿನಲ್ಲಿ ಅದರ ಅನುಷ್ಠಾನ ಯಾವ ಹಂತದಲ್ಲಿದೆ ;

(ಆ) ಈ ಯೋಜನೆ ಅಡಿಯಲ್ಲಿ ಹಂಚಿಕೆಯಾದ ಅನುದಾನವೆಷ್ಟು ; ವಿಧಾನಸಭಾ ಕ್ಷೇತ್ರವಾರು ಆಯ್ಕೆ ಮಾಡಿರುವ ರಸ್ತೆಗಳು ಯಾವುವು ;

(ಇ) ಪ್ರಸ್ತುತ ಯೋಜನೆಯು ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ಒಳಗೆ ಪ್ರಾರಂಭಿಸಲಾಗುವುದು ? (ವಿವರ ಒದಗಿಸುವುದು)

## ಸಮಾಜ ಕಲ್ಯಾಣ ಇಲಾಖೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ವಸತಿ ಶಾಲೆ/ವಸತಿ ನಿಲಯಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೭೦ (೨೪೬೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸವಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ರೀತಿಯ ವಸತಿ ಶಾಲೆ/ವಸತಿ ನಿಲಯಗಳ ಸಂಖ್ಯೆ ಎಷ್ಟು ; ದಾಖಲಾತಿ ಹೊಂದಿರುವ ಮಕ್ಕಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ;

ಖಾಲಿ ಹುದ್ದೆಗಳ ಸಂಖ್ಯೆ ಮತ್ತು ಸಂಪೂರ್ಣ ವಿವರ ನೀಡುವುದು ; ವಸತಿ ನಿಲಯಗಳು ಮತ್ತು ಶಾಲೆಗಳಿಗೆ ಸರ್ಕಾರ ಮೀಸಲಿಟ್ಟ ಹಣವೆಷ್ಟು ; ಎಷ್ಟು ಬಿಡುಗಡೆ ಮಾಡಿದೆ ;

(ಆ) ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನಲ್ಲಿ ವಸತಿ ಶಾಲೆ/ವಸತಿ ನಿಲಯದ ಮಕ್ಕಳಿಗೆ ಶೂ. ಸಾಕ್ಸ್, ಶುಚಿತ್ವ ಕಿಟ್ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಯಾವ ತಿಂಗಳಿನಲ್ಲಿ ಒದಗಿಸಲಾಗಿದೆ: ಪ್ರತಿ ತಿಂಗಳವಾರ ಪ್ರತ್ಯೇಕ ಮಾಹಿತಿ ನೀಡುವುದು ; ಯಾವ ಸಂಸ್ಥೆಯಿಂದ/ಕಂಪನಿಯಿಂದ/ಇನ್ನಿತರ ಮೂಲದಿಂದ ಈ ವಸ್ತುಗಳನ್ನು ಖರೀದಿಸಿಸಲಾಗಿದೆ ; ಎಷ್ಟು ಮೊತ್ತ ಪಾವತಿಸಲಾಗಿದೆ ; (ಪಾವತಿಸಿದ ಮೊತ್ತದ ಸಂಪೂರ್ಣ ವಿವರ ನೀಡುವುದು)

(ಇ) ವಸತಿ ಶಾಲೆ/ವಸತಿ ನಿಲಯದ ಮಕ್ಕಳಿಗೆ ಸರಿಯಾದ ಸಮಯದಲ್ಲಿ ಶೂ, ಸಾಕ್ಸ್, ಶುಚಿತ್ವ ಕಿಟ್ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳನ್ನು ವಿತರಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವಸತಿ ಶಾಲೆ/ವಸತಿ ನಿಲಯಗಳಲ್ಲಿ ಕಳಪೆ ಗುಣಮಟ್ಟದ ಆಹಾರ ಸರಬರಾಜು, ತರಕಾರಿ ಇತ್ಯಾದಿಗಳ ಕುರಿತು ಹಲವು ಪ್ರಕರಣಗಳು ಬೆಳಕಿಗೆ ಬರುತ್ತಿದ್ದು, ಸರ್ಕಾರ ಯಾವ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ ; ಇಲ್ಲಿಯವರೆಗೆ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ?

## ಗ್ರಾಮ ಪಂಚಾಯಿತಿಗಳ ಅಧಿಕಾರ ಹಸ್ತಾಂತರದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೨೦೭೧ (೨೪೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಲವು ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಯಾಗಿ ಉನ್ನತೀಕರಿಸಲು (ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳನ್ನಾಗಿ) ಅಧಿಸೂಚನೆ ಹೊರಡಿಸಿದ ಐದಾರು ತಿಂಗಳುಗಳೇ ಕಳೆದರೂ ಅಧಿಕಾರ ಹಸ್ತಾಂತರ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವು ಗ್ರಾಮ ಪಂಚಾಯಿತಿಗಳು ಅಧಿಸೂಚನೆ ಹೊರಡಿಸಿದ ನಂತರ ಸಾರ್ವಜನಿಕರಿಂದ ಕಂದಾಯ ಪಾವತಿಸಿಕೊಳ್ಳದೆ, ಇ–ಖಾತಾ ನೀಡದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬೆಳಗಾವಿ ಜಿಲ್ಲೆಯ ಹಿಂಡಲಗ, ಬೆನಕನಹಳ್ಳಿ, ಹಿರೇಬಾಗೆವಾಡಿ ಪಂಚಾಯಿತಿಗಳಲ್ಲಿ ದಿನಾಂಕ:೦೭.೦೮.೨೦೨೫ ರಿಂದ ಇಲ್ಲಿಯವರೆಗೆ ವಿತರಿಸಿದ ಇ–ಖಾತಾಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು, ದಿನಾಂಕವಾರು ಸಂಪೂರ್ಣ ವಿವರ ನೀಡುವುದು)

(ಈ) ಅಧಿಸೂಚನೆ ಹೊರಡಿಸಿದ ನಂತರ ಕಂದಾಯ ಸ್ವೀಕರಿಸಲು, ಇ–ಖಾತಾ ವಿತರಿಸಲು ಗ್ರಾಮ ಪಂಚಾಯಿತಿಗಳಿಗೆ ಅಧಿಕಾರವಿದೆಯೇ ; ಇದ್ದರೆ, ಇದರ ಕುರಿತು ಇರುವ ಸುತ್ತೋಲೆ, ಆದೇಶದ ಪ್ರತಿಯನ್ನು ನೀಡುವುದು ;

(ಉ) ನಗರ ಸ್ಥಳೀಯ ಸಂಸ್ಥೆಗೆ ಅಧಿಸೂಚನೆ ಹೊರಡಿಸಿದ ನಂತರ ಗ್ರಾಮ ಪಂಚಾಯಿತಿಗಳು ವಿತರಿಸಿದ ಇ–ಖಾತಾಗಳು ಅಮಾನ್ಯವಾಗುವುದೇ ; ಹಾಗಿದ್ದಲ್ಲಿ, ಸದರಿ ಖಾತೆಗಳ ವಿತರಣೆಯನ್ನು ಸರ್ಕಾರ ತಡೆಯದೆ ಇರಲು ಕಾರಣವೇನು ;

(ಊ) ಅಧಿಸೂಚನೆ ಹೊರಡಿಸಿ ಆರು ತಿಂಗಳುಗಳೇ ಕಳೆದರೂ ಅಧಿಕಾರ ಹಸ್ತಾಂತರ ಮಾಡದೆ ಇದ್ದಲ್ಲಿ ಸಾರ್ವಜನಿಕರಿಗೆ ಸೇವೆಗಳನ್ನು ಪಡೆಯಲು ತೊಂದರೆಯಾಗುವುದಿಲ್ಲವೇ ?

## ಶುದ್ಧ ನೀರಿನ ಘಟಕ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೭೨ (೨೩೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಎಷ್ಟು ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ ;

(ಆ) ಶುದ್ಧ ನೀರಿನ ಪೂರೈಕೆಯಲ್ಲಿ ಆಡಳಿತ ವ್ಯವಸ್ಥೆಯ ವೈಫಲ್ಯ, ಕಲುಷಿತ ನೀರು ಕುಡಿದು ಸಾವು, ನೋವುಗಳಿಗೆ ಸಂಬಂಧಿಸಿದಂತೆ ಯಾವುದಾದರೂ ಪ್ರಕರಣಗಳು ದಾಖಲಾಗಿದೆಯೇ ;

(ಇ) ಸ್ಥಾಪಿಸಲಾಗಿರುವ ಶುದ್ಧ ನೀರಿನ ಘಟಕಗಳಲ್ಲಿ ಸ್ಥಗಿತಗೊಂಡಿರುವ ಘಟಕಗಳು ಎಷ್ಟು ಹಾಗೂ ಚಾಲ್ತಿಯಲ್ಲಿರುವ ಘಟಕಗಳು ಎಷ್ಟು;

(ಈ) ಪ್ರತಿ ಘಟಕಕ್ಕೆ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ ; ಇದರ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ಹಾಗೂ ಗುತ್ತಿಗೆದಾರರಿಗೆ ಇದರ ನಿರ್ವಹಣೆಯ ಬಗ್ಗೆ ನೀಡಿರುವ ನೀತಿ ನಿಯಮಗಳೇನು ;

(ಉ) ಏಜೆನ್ಸಿಗಳು (ಗುತ್ತಿಗೆದಾರ) ಶುದ್ಧ ನೀರಿನ ಘಟಕಗಳನ್ನು ಸ್ಥಾಪಿಸಲು ತೋರಿಸಿದ ಆಸಕ್ತಿಯನ್ನು ನಿರ್ವಹಣೆಯಲ್ಲಿ ತೋರಿಸುತ್ತಿಲ್ಲದಿರುವುದು ನಿಜವೇ ; ಹಾಗಿದ್ದಲ್ಲಿ, ಇದರ ಬಗ್ಗೆ ತೆಗೆದುಕೊಂಡ ಕ್ರಮವೇನು ಹಾಗೂ ಏಜೆನ್ಸಿಗಳಿಂದ ದಂಡವನ್ನು ವಸೂಲಿ ಮಾಡಲಾಗಿದೆಯೇ ?

## ಟೆಂಡರ್ ಕರೆಯದೆ ಟಿ.ವಿ.ಗಳನ್ನು ಖರೀದಿ ಮಾಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೭೩ (೨೩೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆಯೆಷ್ಟು; ಇರುವಂತ ಅಂಗನವಾಡಿ ಕೇಂದ್ರಗಳಿಗೆ ನೀಡಲಾಗಿರುವ ಸೌಲಭ್ಯಗಳೇನು ;

(ಆ) ಪ್ರತಿ ಅಂಗನವಾಡಿ ಕೇಂದ್ರಕ್ಕೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಎಷ್ಟು ಅನುದಾನವನ್ನು ಒದಗಿಸಲಾಗುವುದು ; (ಯೋಜನಾವಾರು ವಿವರಗಳನ್ನು ನೀಡುವುದು)

(ಇ) ಕಳೆದ ೫ ವರ್ಷದಿಂದ ಇಲ್ಲಿಯವರೆಗೂ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ; ಹಾಗೂ ಬಿಡುಗಡೆಯಾಗಿರುವ ಅನುದಾನವನ್ನು ಯಾವ ಯಾವ ಕಾರ್ಯಗಳಿಗೆ ಮತ್ತು ಖರೀದಿಗಳಿಗೆ ಬಳಸಿಕೊಳ್ಳಲಾಗಿದೆ ;

(ಈ) ಟೆಂಡರ್ ಕರೆಯದೆ ನಿಯಮಗಳಲ್ಲಿನ ನ್ಯೂನತೆಯನ್ನೇ ಬಳಸಿಕೊಂಡು ಕೊಟೇಶನ್ ಆಧಾರದಲ್ಲೆ ಟಿ.ವಿ ಗಳನ್ನು ಖರೀದಿ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ಎಷ್ಟು ಟಿ.ವಿ ಗಳನ್ನು ಖರೀದಿಸಲಾಗಿದೆ ; ಪ್ರತಿ ಟಿ.ವಿ ಖರೀದಿಗೆ ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು ; (ಪೂರ್ಣ ಮಾಹಿತಿ ಒದಗಿಸುವುದು)

(ಉ) ಖರೀದಿಸಲಾಗಿರುವ ಟಿ.ವಿ ಗಳನ್ನು ಎಷ್ಟು ಅಂಗನವಾಡಿ ಕೇಂದ್ರಗಳಿಗೆ ನೀಡಲಾಗಿದೆ ; ಇನ್ನೂ ಎಷ್ಟು ಟಿ.ವಿ ಯನ್ನು ನೀಡಬೇಕಾಗಿದೆ ಹಾಗೂ ಎಷ್ಟು ಟಿ.ವಿ ಗೋದಾಮುಗಳಲ್ಲಿ ಉಳಿದಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

# ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೭೪ (೨೩೬೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ನಡೆದಿರುವ ರೈತರ ಆತ್ಮಹತ್ಯೆ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಆತ್ಮಹತ್ಯೆಗೊಂಡ ರೈತರ ಕುಟುಂಬದವರಿಗೆ ಸರ್ಕಾರದಿಂದ ನೀಡಲಾಗಿರುವ ಪರಿಹಾರ ಏನು ಹಾಗೂ ರೈತರ ಆತ್ಮಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಕಳೆದ ೩ ವರ್ಷದ ಅವಧಿಯಲ್ಲಿ ೨೪೧೬ ಮಂದಿ ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ರೈತರು ಆತ್ಮಹತ್ಯೆಯನ್ನು ಯಾವ ಕಾರಣಗಳಿಂದ ಮಾಡಿ ಕೊಳ್ಳುತ್ತಿದ್ದಾರೆ ಎಂಬುದು ಸರ್ಕಾರ ಪರಿಶೀಲಿಸಿದೆಯೇ ;

(ಉ) ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ಸರ್ಕಾರ ಎಷ್ಟು ಮೊತ್ತದ ರೈತರ ಸಾಲ ಮನ್ನಾ ಮಾಡಲಾಗಿದೆ ಹಾಗೂ ಕೇಂದ್ರ ಸರ್ಕಾರದಿಂದ ಎಷ್ಟು ಫಲಾನುಭವಿಗಳಿಗೆ ಆರ್ಥಿಕ ನೆರವು ದೊರೆತಿದೆ ;

(ಊ) ರೈತರ ನೆರವಿಗೆ ರಾಜ್ಯ ಸರ್ಕಾರದಿಂದ ಹಾಗೂ ಕೇಂದ್ರ ಸರ್ಕಾರದಿಂದ ನೀಡಲಾಗುತ್ತಿರುವ ಯೋಜನೆಗಳು ಯಾವುವು ?

# ಕೋಲಾರ ನಗರದಲ್ಲಿ ಶ್ರೀ ಟಿ.ಚನ್ನಯ್ಯ ರಂಗಮಂದಿರ ಶಿಥಿಲಗೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೭೫ (೨೩೬೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ನಗರದಲ್ಲಿರುವ ಶ್ರೀ ಟಿ.ಚನ್ನಯ್ಯ ರಂಗಮಂದಿರವನ್ನು ೧೯೯೦ ರಲ್ಲಿ ಸ್ಥಾಪಿಸಲಾಗಿದ್ದು, ಕೋಲಾರ ಜಿಲ್ಲೆಯಲ್ಲಿ ಇದೊಂದೆ ರಂಗಮಂದಿರವಿದ್ದು, ಜಿಲ್ಲೆಯಾದ್ಯಂತ ಎಲ್ಲಾ ಸರ್ಕಾರಿ ಕಾರ್ಯಕ್ರಮಗಳನ್ನು ಇಲ್ಲಿಯೇ ನಡೆಸಲಾಗುತ್ತಿದ್ದು, ಕೋಲಾರ ಜಿಲ್ಲೆಯಲ್ಲಿ ಅತಿ ಹೆಚ್ಚು ವಿವಿಧ ಸಾಂಸ್ಕೃತಿಕ ಕಲಾವಿದರಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಪ್ರಸ್ತುತ ಈ ಕಟ್ಟಡವು ಶಿಥಿಲಗೊಂಡಿದ್ದು, ಸದರಿ ರಂಗಮಂದಿರವನ್ನು ದುರಸ್ತಿಪಡಿಸಲು ರೂ.೨.೨೧ ಕೋಟಿ ಅನುದಾನದ ಬೇಡಿಕೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಶ್ರೀ ಟಿ.ಚನ್ನಯ್ಯ ರಂಗಮಂದಿರವನ್ನು ದುರಸ್ತಿಪಡಿಸಲು ಯಾವ ಕಾಲಮಿತಿಯೊಳಗೆ ಅನುದಾನವನ್ನು ಬಿಡುಗಡೆ ಮಾಡಲಾಗುವುದು ;

(ಈ) ಒಂದು ವೇಳೆ ಅನುದಾನ ಬಿಡುಗಡೆ ಮಾಡಲು ಸರ್ಕಾರಕ್ಕೆ ತೊಂದರೆಗಳಿದ್ದರೆ, ಈ ಕಟ್ಟಡವನ್ನು ದುರಸ್ತಿಪಡಿಸಲು ಕೋಲಾರ ಜಿಲ್ಲೆಯಲ್ಲಿನ ಖಾಸಗಿ ಕಂಪನಿಗಳ ಸಿಎಸ್‌ಆರ್ ಅನುದಾನವನ್ನು ಒದಗಿಸಲು ಕ್ರಮವಹಿಸಲಾಗುವುದೇ ?

# ಕೆಸಿಸಿ ಯೋಜನೆಯಡಿ ರೈತರು ಸಕಾಲಕ್ಕೆ ಮರುಪಾವತಿಸಿದ ಬಡ್ಡಿಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೭೬ (೨೩೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕ್ರಿಯ ಕ್ರೆಡಿಟ್ ಕಾರ್ಡ್ (ಕೆಸಿಸಿ) ಯೋಜನೆಯಡಿಯಲ್ಲಿ ಬೆಳೆ ಸಾಲ ಪಡೆದ ಸಣ್ಣ–ಅತೀ ಸಣ್ಣ ರೈತರ ಸಂಖ್ಯೆಯೆಷ್ಟು ; (ಜಿಲ್ಲಾವಾರು ವಿವರ ನೀಡುವುದು) ಈ ಯೋಜನೆಯಡಿಯಲ್ಲಿ ಕನಿಷ್ಠ ಪ್ರಮಾಣದಿಂದ ಗರಿಷ್ಠ ಪ್ರಮಾಣ ಎಷ್ಟು ಸಾಲ ನೀಡಬಹುದು ;

(ಆ) ಸಕಾಲಕ್ಕೆ ಮರುಪಾವತಿಸಿದ ರೈತರಿಗೆ ಬಡ್ಡಿ ವಿನಾಯಿತಿ ನೀಡಿದ ಬ್ಯಾಂಕ್‌ಗಳಗೆ ಹಣ ಭರ್ತಿ ಮಾಡದೆ ರಾಜ್ಯ ಸರ್ಕಾರ ಕಳೆದ ೩ ವರ್ಷದಿಂದ ಒಟ್ಟು ರೂ. ೨೫.೬೧ ಕೋಟಿ ಬಾಕಿ ಉಳಿಸಿಕೊಂಡಿದೆಯೇ ; ಹಾಗಿದ್ದಲ್ಲಿ, ಬ್ಯಾಂಕ್‌ಗಳ ವಿವರ ಮತ್ತು ಬಾಕಿ ಹಣದ ಮೊತ್ತದ ಮಾಹಿತಿ ಒದಗಿಸುವುದು ;

(ಇ) ರೈತರು ಸಾಲ ಪಡೆದ ಉದ್ದೇಶಕ್ಕೆ ಬಳಸದೇ ಬೇರೆ ಬೇರೆ ಉದ್ದೇಶಗಳಿಗೆ ಸಾಲದ ಹಣವನ್ನು ಬಳಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹೊಣೆ ಹೊತ್ತ ಬ್ಯಾಂಕ್‌ಗಳ ಕ್ಷೇತ್ರ ಕಾರ್ಯ, ತಪಾಸಣೆ, ಪರಿಶೀಲನೆಯ ದಕ್ಷ ನಿರ್ವಹಣೆ ಅಗತ್ಯವೆಂದು ಆರ್‌ಬಿಐನಿಂದ ವರದಿ ಸಲ್ಲಿಕೆ ಆಗಿದೆಯೇ ?

## ಕಾರ್ಮಿಕ ಇಲಾಖೆಯ ಪೌರಕಾರ್ಮಿಕರ ಸೌಲಭ್ಯಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೭ (೨೪೨೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಇಲಾಖೆಯ ಕಟ್ಟಡ ಕಾರ್ಮಿಕ ಮತ್ತು ಇತರೆ ನಿರ್ಮಾಣ ಮಂಡಳಿಯಡಿ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಸದರಿ ಕಾರ್ಮಿಕರಿಗೆ ಯಾವ ಯಾವ ರೀತಿ ಪಿಂಚಣಿ ಸೌಲಭ್ಯ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಪಿಂಚಣಿ ಮತ್ತು ಇತರೆ ಸೌಲಭ್ಯಗಳಿಗಾಗಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನದಡಿ ಸ್ವೀಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

# ಬೆಂಗಳೂರು ನಗರ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಹಾಸ್ಟೆಲ್‌ಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೮ (೨೪೨೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಒಟ್ಟು ಹಾಸ್ಟೆಲ್‌ಗಳು ಎಷ್ಟು ; ಅವುಗಳಲ್ಲಿ ಬಾಲಕ ಮತ್ತು ಬಾಲಕಿಯರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಹಾಸ್ಟೆಲ್‌ಗಳ ನಿರ್ವಹಣೆ ಹೇಗೆ ನಡೆಯುತ್ತದೆ ; ನಿರ್ವಹಣೆ ನಡೆಸಲು ಇರುವ ಮಾನದಂಡಗಳಾವುವು ;

(ಇ) ಇರುವಂತಹ ಹಾಸ್ಟೆಲ್‌ಗಳಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಸ್ಟೆಲ್‌ಗಳೆಷ್ಟು ; ಬಾಡಿಗೆ ಕಟ್ಟಡದಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ;

(ಈ) ಪ್ರಸ್ತುತ ಬಾಡಿಗೆ ಕಟ್ಟಡಗಳಲ್ಲಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್‌ಗಳಿಗೆ ಯಾವ ಕಾಲಮಿತಿಯೊಳಗೆ ಸ್ವಂತ ಕಟ್ಟಡ ಮಂಜೂರು ಮಾಡಿ ನಿರ್ಮಾಣ ಮಾಡಲಾಗುತ್ತದೆ ? (ವಿವರ ನೀಡುವುದು)

# ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಥಿ ವೇತನದ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೯ (೨೪೨೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಇಲ್ಲಿಯವರೆಗೂ ಪದವಿ ಮತ್ತು ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ಎಷ್ಟು ವಿದ್ಯಾರ್ಥಿಗಳಿಗೆ ವೇತನವನ್ನು ನೀಡಲಾಗಿದೆ; (ವಿವರ ನೀಡುವುದು)

(ಆ) ವಿದ್ಯಾರ್ಥಿ ವೇತನಕ್ಕಾಗಿ ರಾಜ್ಯದಲ್ಲಿ ಮತ್ತು ವಿಶೇಷವಾಗಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳಿಂದ ಅರ್ಜಿಗಳು ಸಂಗ್ರಹವಾಗಿದೆ ಮತ್ತು ವಿದ್ಯಾರ್ಥಿ ವೇತನ ನೀಡಬೇಕಾದರೆ ಸರ್ಕಾರ ನಿಗದಿಪಡಿಸಿರುವ ಮಾನದಂಡವೇನು; (ವಿವರ ನೀಡುವುದು)

(ಇ) ೨೦೨೩, ೨೦೨೪, ೨೦೨೫ನೇ ಸಾಲಿನಲ್ಲಿ ವಿದ್ಯಾರ್ಥಿಗಳು ಅರ್ಜಿಸಲ್ಲಿಸಿ ಒಂದು ವರ್ಷವಾದರೂ ವಿದ್ಯಾರ್ಥಿವೇತನ ನೀಡದಿರುವುದರಿಂದ ವಿದ್ಯಾರ್ಥಿಗಳಿಗೆ ಮುಂದಿನ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ? (ವಿವರ ನೀಡುವುದು)

# ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಸ್ತುತ ವಾಸಿಸುವ ಮಾಜಿ ದೇವದಾಸಿ ಮಹಿಳೆಯರಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೦ (೨೩೯೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಪ್ರಸ್ತುತ ವಾಸಿಸುವ ಮಾಜಿ ದೇವದಾಸಿ ಮಹಿಳೆಯರ ಒಟ್ಟು ಸಂಖ್ಯೆ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಈ ಸಂಖ್ಯೆಯಲ್ಲಿ ಎರಿಳಿತವಾಗಿದೆಯೇ ; (ವಿವರ ಒದಗಿಸುವುದು)

(ಆ) ಮಾಜಿ ದೇವದಾಸಿ ಮಹಿಳೆಯರಿಗೆ ಪ್ರಸ್ತುತ ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳು ಮತ್ತು ಯೋಜನೆಗಳು ಯಾವುವು; ಪ್ರತಿ ಯೋಜನೆಗೆ ನಿಗದಿಪಡಿಸಿರುವ ವಾರ್ಷಿಕ ಅನುದಾನ ಮೊತ್ತ ಹಾಗೂ ಜಿಲ್ಲಾವಾರು ಬಿಡುಗಡೆಯಾದ ಅನುದಾನ ವಿವರ ಒದಗಿಸುವುದು ; (೨೦೨೩–೨೪ ರಿಂದ ೨೦೨೫–೨೬ರವರೆಗೆ)

(ಇ) ಕಳೆದ ಮೂರು ವರ್ಷಗಳಲ್ಲಿ ಮಾಜಿ ದೇವದಾಸಿ ಮಹಿಳೆಯರಿಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; ಜಿಲ್ಲಾವಾರು ವಿವರ ಒದಗಿಸುವುದು ; ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳ ನಿರ್ಮಾಣ ಪೂರ್ಣಗೊಂಡಿದೆ; ಎಷ್ಟು ಮನೆಗಳು ನಿರ್ಮಾಣ ಹಂತದಲ್ಲಿವೆ ;

(ಈ) ಎಷ್ಟು ಪ್ರಕರಣಗಳಲ್ಲಿ ಅನುದಾನ ಪಾವತಿ ಬಾಕಿ ಇದೆ; ಬಾಕಿ ಇರುವ ಅನುದಾನದ ಒಟ್ಟು ಮೊತ್ತ ಎಷ್ಟು ;

(ಉ) ಬಾಕಿ ಇರುವ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳು ಯಾವುವು ?

## ರಾಜ್ಯದ ಅಂಗನವಾಡಿ ಕೇಂದ್ರಗಳ ಮೂಲಕ ನೀಡಲಾಗುತ್ತಿರುವ ಪೌಷ್ಠಿಕ ಆಹಾರ ಪದಾರ್ಥಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೧ (೨೩೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅಂಗನವಾಡಿ ಕೇಂದ್ರಗಳ ಮೂಲಕ ಮಕ್ಕಳಿಗೆ, ಗರ್ಭಿಣಿ ಮಹಿಳೆಯರಿಗೆ ಹಾಗೂ ಬಾಣಂತಿಯರಿಗೆ ಪ್ರಸ್ತುತ ನೀಡಲಾಗುತ್ತಿರುವ ಪೌಷ್ಠಿಕ ಆಹಾರ ಪದಾರ್ಥಗಳು ಯಾವುವು; ಪ್ರತಿ ವರ್ಗಕ್ಕೆ ನೀಡಲಾಗುವ ಆಹಾರದ ಪ್ರಮಾಣ ಎಷ್ಟು; ವಾರದಲ್ಲಿ/ತಿಂಗಳಲ್ಲಿ ಎಷ್ಟು ದಿನ ಪೂರೈಕೆ ಮಾಡಲಾಗುತ್ತದೆ ; (ವಿವರ ಒದಗಿಸುವುದು)

(ಆ) ಪೌಷ್ಠಿಕ ಆಹಾರ ಪೂರೈಕೆಗಾಗಿ ರಾಜ್ಯ ಸರ್ಕಾರವು ವರ್ಷಕ್ಕೆ ಖಚು ಮಾಡುತ್ತಿರುವ ಒಟ್ಟು ವೆಚ್ಚ ಎಷ್ಟು; ಕಳೆದ ಮೂರು ವರ್ಷಗಳ(೨೦೨೩–೨೪ ರಿಂದ ೨೦೨೫–೨೬)ವೆಚ್ಚದ ವಿವರ ಒದಗಿಸುವುದು ;

(ಇ) ರಾಜ್ಯದ ಕೆಲ ಪ್ರದೇಶಗಳಲ್ಲಿ ಕಳೆಪ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಆಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಜಿಲ್ಲಾವಾರು ವಿವರ ಒದಗಿಸುವುದು ;

(ಈ) ಪೌಷ್ಠಿಕ ಆಹಾರ ಗುಣಮಟ್ಟ ಕಳಪೆಯಾಗಿರುವ ಕುರಿತು ರಾಜ್ಯ ಸರ್ಕಾರಕ್ಕೆ ಇದುವರೆಗೆ ಎಷ್ಟು ದೂರುಗಳು ಸ್ವೀಕರಿಸಲಾಗಿದೆ ; ದೂರುಗಳ ಆಧಾರದ ಮೇಲೆ ಯಾವ ತನಿಖೆ ನಡೆಸಲಾಗಿದೆ ;

(ಉ) ಕಳಪೆ ಗುಣಮಟ್ಟದ ಆಹಾರ ಪೂರೈಕೆ ಮಾಡಿದ ಗುತ್ತಿಗೆದಾರರು/ ಸಂಸ್ಥೆಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಊ) ಮುಂದಿನ ದಿನಗಳಲ್ಲಿ ಗುಣಮಟ್ಟದ ಆಹಾರ ಪೂರೈಕೆ ಖಚಿತಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ?

## ಕರಾವಳಿ ಭಾಗದಲ್ಲಿನ ಕೊಂಕಣಿ ಭಾಷೆಯ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೨ (೨೩೩೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಭಾಗದಲ್ಲಿ ಕೊಂಕಣಿ ಭಾಷಾ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ; ಕೊಂಕಣಿ ಭಾಷೆಯ ಅಭಿವೃದ್ಧಿಗೆ ಇರುವ ಅಕಾಡೆಮಿ ಕಟ್ಟಡವು ಇನ್ನೂ ಪೂರ್ತಿಯಾಗದೇ ಇರಲು ಕಾರಣವೇನು ; (ವಿವರ ನೀಡುವುದು)

(ಆ) ಕೊಂಕಣಿ ಭಾಷಾ ಎಂ.ಎ ಪದವಿ ಶಿಕ್ಷಣ ಪಡೆಯಲು ಮಂಗಳೂರು ವಿಶ್ವವಿದ್ಯಾಲಯದಲ್ಲಿ ಅವಕಾಶ ನೀಡಲಾಗಿದ್ದು, ಆ ಮೂಲಕ ಅನೇಕ ಉದ್ಯೋಗ ಗಳಿಸಿ, ಪ್ರಸುತ ಎಂ ಎ ಇನ್ ಕೊಂಕಣಿ ಅಧ್ಯಯನವನ್ನು ವಿಶ್ವವಿದ್ಯಾನಿಲಯ ರದ್ದು ಪಡಿಸಿದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಮಂಗಳೂರು ವಿಶ್ವವಿದ್ಯಾಲಯ ಮಟ್ಟದಲ್ಲಿ ಕೊಂಕಣಿ ಚೇರ್ ಇನ್ ಕ್ರಿಶ್ಚಿಯಾನಿಟಿ (Konkani Chair In Christyanity) ಸ್ಥಾಪನೆಯಾಗಿದ್ದು, ಈ ಮೂಲಕ ೨೦೨೪-೨೫ ಮತ್ತು ೨೦೨೫-೨೬ ರಲ್ಲಿ ಕೈಗೊಂಡ ಕಾರ್ಯಕ್ರಮಗಳೇನು; ಪ್ರಸ್ತುತ ಇರುವ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಕೊಂಕಣಿ ಸಮುದಾಯದವರಿಗೆ ಶಾಲೆಗಳಲ್ಲಿ ಕೊಂಕಣಿ ಕಲಿಸಲು ಸರ್ಕಾರ ಕೈಗೊಂಡ ಕ್ರಮವೇನು; ಪ್ರಸ್ತುತ ಎಷ್ಟು ವಿದ್ಯಾರ್ಥಿಗಳು ಯಾವ ತರಗತಿಗಳಲ್ಲಿ ಕೊಂಕಣಿ ಭಾಷೆ ಕಲಿಯುತ್ತಿದ್ದಾರೆ ? (ವಿವರ ನೀಡುವುದು)

## ಹಿರಿಯ ಮಹಿಳಾ ನಾಗರೀಕರಿಗೆ ಸಹಾಯ ಮಾಡುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೮೩ (೨೩೩೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಿರಿಯ ಮಹಿಳಾ ನಾಗರೀಕರಿಗೆ ಸಹಾಯ ಮಾಡಲು ಸರ್ಕಾರದಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಯಾವ ರೀತಿಯ ಆರ್ಥಿಕ ಸಹಾಯ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹಿರಿಯ ಮಹಿಳಾ ನಾಗರೀಕರಿಗೆ ಸರ್ಕಾರ ಎಷ್ಟು ಹಿರಿಯ ಮಹಿಳೆಯರಿಗೆ ಸಹಾಯ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಹಿರಿಯ ಮಹಿಳಾ ನಾಗರೀಕರಿಗೆ ಇನ್ನೂ ಹೆಚ್ಚಿನ ರೀತಿಯಲ್ಲಿ ಸಹಾಯ ಮಾಡಲು ಸರ್ಕಾರ ವಿಶೇಷ ಯೋಜನೆ ಹಮ್ಮಿಕೊಂಡಿದೆಯೇ ; ಇದ್ದರೆ, ವಿವರ ನೀಡುವುದು ;

(ಈ) ವಿಕಲಚೇತನರ ಮತ್ತು ಹಿರಿಯ ಮಹಿಳಾ ನಾಗರೀಕರಿಗೆ ನೀಡುತ್ತಿರುವ ಗೌರವ ಧನ ಎಷ್ಟು; ಗೌರವ ಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ, ಯಾವ ಕಾಲಮಿತಿಯೊಳಗಾಗಿ ಕ್ರಮ ಕೈಗೊಳ್ಳಲಾಗುವುದು ?

## ದಕ್ಷಿಣ ಕನ್ನಡ ಜಿಲ್ಲೆಯ ಬೆಳೆ ವಿಮೆ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೪ (೨೩೩೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬೆಳೆ ವಿಮೆ ಯೋಜನೆಯಿಂದ ಎಷ್ಟು ರೈತರು ಪ್ರಯೋಜನ ಪಡೆದುಕೊಂಡಿದ್ದಾರೆ: ತಾಲ್ಲೂಕುವಾರು ವಿವರ ನೀಡುವುದು ;

(ಆ) ಈ ಬೆಳೆ ವಿಮೆ ಯೋಜನೆ ಅನುಕೂಲ ಪಡೆಯಲು ರೈತರು ಯಾವ ರೀತಿ ನೋಂದಾಯಿಸಬೇಕು ; ಅದರ ಮಾರ್ಗಸೂಚಿಗಳ ವಿವರ ನೀಡುವುದು ;

(ಇ) ಈ ಬೆಳೆ ವಿಮೆ ಯೋಜನೆಯನ್ನು ಪಡೆಯಲು ಸಣ್ಣ ರೈತರಿಗೆ ಮಾತ್ರ ಅವಕಾಶವಿದೆಯೇ ಅಥವಾ ದೊಡ್ಡ ಪ್ರಮಾಣದ ರೈತರಿಗೂ ಅವಕಾಶ ಇದೆಯೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕನ್ನಡ ಭವನ ನಿರ್ಮಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೫ (೨೩೩೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕನ್ನಡ ಭವನಗಳನ್ನು ನಿರ್ಮಿಸಲಾಗಿದೆ ; ಅದರ ನಿರ್ವಹಣೆ ಯಾರು ಮಾಡುತ್ತಿದ್ದಾರೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ಕನ್ನಡ ಭವನ ನಿರ್ಮಾಣ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಕಟ್ಟಡ ನಿರ್ಮಾಣ ಮಾಡಲು ಅನುದಾನ ಮಂಜೂರು ಮಾಡಲಾಗುವುದೇ ;

(ಇ) ಈ ಕನ್ನಡ ಭವನವನ್ನು ಯಾವ ಯಾವ ಕಾರ್ಯಕ್ರಮಕ್ಕಾಗಿ ನೀಡಲಾಗುವುದು ; ಇದುವರೆಗೂ ಸರ್ಕಾರದ ಆದೇಶದಂತೆಯೇ ಕಾರ್ಯಕ್ರಮಗಳಿಗೆ ಅವಕಾಶ ನೀಡಲಾಗಿದೆಯೇ ? (ವಿವರ ನೀಡುವುದು)

## ಜಲ ಜೀವನ್ ಮಿಷನ್ ಕಾಮಗಾರಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೬ (೨೩೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಎಷ್ಟು ಗ್ರಾಮಗಳಲ್ಲಿ ಜಲ ಜೀವನ್ ಮಿಷನ್ ಕಾಮಗಾರಿಗಳು ನಡೆಯುತ್ತಿವೆ ; ಎಷ್ಟು ಪೂರ್ಣಗೊಂಡಿದೆ ; ಎಷ್ಟು ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಲಾಗಿದೆ ; (ಗ್ರಾಮವಾರು ವಿವರ ನೀಡುವುದು)

(ಆ) ಸದರಿ ಜಲ ಜೀವನ್ ಮಿಷನ್ ಕಾಮಗಾರಿಯೂ ಅತ್ಯಂತ ಕಳಪೆ ಗುಣಮಟ್ಟದ್ದಾಗಿದೆ ಎಂಬ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ;

(ಇ) ಇಂತಹ ಜನಪರ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಗುತ್ತಿಗೆದಾರರು ಮತ್ತು ಅಧಿಕಾರಿಗಳು ಸರಿಯಾಗಿ ಸಿದ್ಧತೆ ಮಾಡಿಕೊಳ್ಳದೇ ಕಾಮಗಾರಿಯನ್ನು ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯವಾಗಿರುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೭ (೨೩೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಒಟ್ಟು ಸಂಖ್ಯೆ ಎಷ್ಟು ; ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳ ಅಂಕಿ ಸಂಖ್ಯೆಗಳ ಜಿಲ್ಲಾವಾರು ಮಾಹಿತಿ ಒದಗಿಸುವುದು ;

(ಆ) ಈ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳ ಅಧಿಕಾರವಧಿಯು ಯಾವಾಗ ಮುಕ್ತಾಯಗೊಳ್ಳಲಿದೆ ; (ಮಾಹಿತಿಯನ್ನು ಒದಗಿಸುವುದು)

(ಇ) ಅವಧಿ ಮುಗಿದ ಗ್ರಾಮ ಪಂಚಾಯಿತಿಗಳಿಗೆ ಚುನಾವಣೆ ನಡೆಸಲು ಸರ್ಕಾರ ಸಿದ್ಧತೆ ಮಾಡಿಕೊಳ್ಳುತ್ತಿದೆಯೇ: ಹಾಗಿದ್ದಲ್ಲಿ, ಮೀಸಲಾತಿ ಅಧಿಸೂಚನೆ ಇತರೆ ಮುಂಜಾಗ್ರತೆ ಸಿದ್ಧತೆಗಳ ಬಗ್ಗೆ ಮಾಹಿತಿ ಒದಗಿಸುವುದು ;

(ಈ) ಬೆಂಗಳೂರು ನಗರ ಜಿಲ್ಲೆಗೆ ಸೇರಿದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಇದರಲ್ಲಿ ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಈ ಎಲ್ಲಾ ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳ ಅಧಿಕಾರಾವಧಿಯು ಯಾವಾಗ ಮುಕ್ತಾಯಗೊಳ್ಳುವುದು ; (ಮಾಹಿತಿ ಒದಗಿಸುವುದು)

(ಉ) ಏಕಕಾಲಕ್ಕೆ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ನಡೆಸಲು ಸರ್ಕಾರ ನಿರ್ಧರಿಸಿದೆಯೇ ; ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ ? (ವಿವರ ಒದಗಿಸುವುದು)

## ಪಿ.ಎಂ ಕಿಸಾನ್ ಯೋಜನೆಯಡಿ ರಾಜ್ಯದ ರೈತರ ಖಾತೆಗೆ ಹಣ ಜಮೆ ಮಾಡುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೮ (೨೩೬೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಎಂ ಕಿಸಾನ್ ಯೋಜನೆಯಡಿ ರಾಜ್ಯದ ಅರ್ಹ ರೈತರುಗಳು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಜ್ಯದ ರೈತರುಗಳಿಗೆ ಬರಬೇಕಾಗಿರುವ ಬಾಕಿ ಮೊತ್ತವೆಷ್ಟು ; ಯಾವ ವರ್ಷದ ಕಂತುಗಳು ಬಾಕಿ ಉಳಿದಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಕೃಷಿ ಇಲಾಖೆಯ ಅಧಿಕಾರಿಗಳು ಮಾಡಿರುವ ತಪ್ಪಿಗೆ ಇಡೀ ರಾಜ್ಯದ ರೈತರು ಈ ಯೋಜನೆಯಿಂದ ವಂಚಿತರಾಗಿರುವುದು ಸರಿಯೇ ; ಆಗಿರುವ ತಪ್ಪನ್ನು ಸರಿಪಡಿಸಿ, ಬಾಕಿ ಉಳಿದಿರುವ ಮೊತ್ತವನ್ನು ರೈತರ ಖಾತೆಗೆ ಯಾವ ಕಾಲಮಿತಿಯೊಳಗೆ ಜಮೆ ಮಾಡಲಾಗುವುದು ?

## ಕಾರ್ಮಿಕ ಮಂಡಳಿಯ ಕಲ್ಯಾಣ ಕಾರ್ಯಕ್ರಮಗಳ ಯೋಜನೆಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೯ (೨೩೬೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿರುವ ಕಲ್ಯಾಣ ಯೋಜನೆಗಳ ಕಾರ್ಯಕ್ರಮಗಳು ಯಾವುವು ; (ಮಾಹಿತಿ ಒದಗಿಸುವುದು)

(ಆ) ಈ ಯೋಜನೆಗಳನ್ನು ಕೇವಲ ಕಟ್ಟಡ ಕಾರ್ಮಿಕರಿಗೆ ಮಾತ್ರ ನೀಡಲಾಗುತ್ತಿದೆಯೋ ಅಥವಾ ಇತರೆ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರಿಗೂ ಈ ಯೋಜನೆಯನ್ನು ನೀಡಲಾಗುತ್ತಿದೆಯೋ ಎಂಬ ಬಗ್ಗೆ ಮಾಹಿತಿ ಒದಗಿಸುವುದು ;

(ಇ) ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ಗಾರ್ಮೆಂಟ್ಸ್ ಕೆಲಸ ಮಾಡುವ ನೌಕರರಿಗೂ ಕಲ್ಯಾಣ ಕಾರ್ಯಕ್ರಮದ ಪ್ರಯೋಜನ ನೀಡಲಾಗುತ್ತಿದೆಯೇ ;

(ಈ) ಕಾರ್ಮಿಕ ಕಲ್ಯಾಣ ಮಂಡಳಿಗೆ ಯಾವ ಯಾವ ಮೂಲಗಳಿಂದ ಸಂಪನ್ಮೂಲವನ್ನು ಕ್ರೋಢಿಕರಿಸಲಾಗಿದೆ ; (ಮಾಹಿತಿ ಒದಗಿಸುವುದು)

(ಉ) ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ ಇರುವ ಮೊತ್ತವೆಷ್ಟು ? (ಮಾಹಿತಿ ಒದಗಿಸುವುದು)

## ಗೃಹಲಕ್ಷ್ಮಿ ಫಲಾನುಭವಿಗಳು ನಿಧನರಾದರೂ ಕೂಡ ಅವರ ಖಾತೆಗೆ ಹಣ ಜಮೆ ಮಾಡುತ್ತಿರುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯೦ (೨೩೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗೃಹಲಕ್ಷ್ಮಿ ಫಲಾನುಭವಿಗಳ ಸಂಖ್ಯೆ ಎಷ್ಟು; ಈ ಫಲಾನುಭವಿಗಳಿಗೆ ವಾರ್ಷಿಕವಾಗಿ ನೀಡುತ್ತಿರುವ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರದ ಯಶವಂತಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಗೃಹಲಕ್ಷ್ಮಿ ಫಲಾನುಭವಿಗಳ ಸಂಖ್ಯೆ ಎಷ್ಟು ; ಇವರಿಗಾಗಿ ವಾರ್ಷಿಕವಾಗಿ ವಿನಿಯೋಗಿಸುತ್ತಿರುವ ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಇ) ಈ ಯಶವಂತಪುರ ವಿಧಾನಸಭಾ ಕ್ಷೇತ್ರದ ಅರ್ಹ ಫಲಾನುಭವಿಗಳನ್ನು ಈ ಯೋಜನೆ ವ್ಯಾಪ್ತಿಗೆ ತರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹವರ ಸಂಖ್ಯೆ ಎಷ್ಟು ; ಇವರನ್ನು ಯಾವ ಕಾಲಮಿತಿಯೊಳಗೆ ಯೋಜನೆ ವ್ಯಾಪ್ತಿಗೆ ಸೇರ್ಪಡಿಸಲಾಗುವುದು;

(ಈ) ರಾಜ್ಯಾದ್ಯಂತ ಲಕ್ಷಾಂತರ ಗೃಹಲಕ್ಷ್ಮಿ ಫಲಾನುಭವಿಗಳು ನಿಧನರಾದರೂ ಸಹ ಗೃಹಲಕ್ಷ್ಮಿ ಹಣವನ್ನು ಪಡೆದು ದುರುಪಯೋಗಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ನಿಧನರಾದವರ ಖಾತೆಗೆ ಎಷ್ಟು ವರ್ಷಗಳಿಂದ ಹಣವನ್ನು ತುಂಬಲಾಗುತ್ತಿದೆ ಹಾಗೂ ಆ ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಊ) ಸರ್ಕಾರಿ ನೌಕರಿ ಹೊಂದಿದ ಮಹಿಳೆಯರು, ಸರ್ಕಾರ ನೌಕರರ ಕುಟುಂಬದವರು, ತೆರಿಗೆ ವ್ಯಾಪ್ತಿಗೆ ಬರುವವರು, ಆಸ್ತಿ ಅಂತಸ್ತುಗಳನ್ನು ಹೊಂದಿದವರೂ ಸಹ ಈ ಗೃಹಲಕ್ಷ್ಮಿ ಹಣವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಬಂದಿದ್ದಲ್ಲಿ, ಅಂತಹವರ ಸಂಖ್ಯೆ ಎಷ್ಟು; ಅಂತಹವರ ಖಾತೆಗೆ ಹಣ ಜಮೆ ಮಾಡುತ್ತಿರುವ ಒಟ್ಟು ಮೊತ್ತವೆಷ್ಟು ಹಾಗೂ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

# ಬೇಸಿಗೆಯಲ್ಲಿ ಕುಡಿಯುವ ನೀರಿನ ಅಭಾವ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯೧ (೨೪೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಬೇಸಿಗೆ ಅವಧಿಯಲ್ಲಿ ಎಷ್ಟು ಗ್ರಾಮಗಳು ಕುಡಿಯುವ ನೀರಿನ ಕೊರತೆಯಿಂದ ಬಾಧಿತವಾಗಿವೆ ; ಸದರಿ ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲು ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು ; (ಜಿಲ್ಲಾವಾರು ವಿವರವನ್ನು ನೀಡುವುದು)

(ಆ) ೨೦೨೩–೨೪ನೇ ಸಾಲಿನಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಹೊಸ ಬೋರ್‌ವೆಲ್ ಕೊರೆಯುವಿಕೆ, ಪೈಪ್‌ಲೈನ್ ವಿಸ್ತರಣೆ ಹಾಗೂ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲು ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆವಾರು, ವರ್ಷವಾರು ವಿವರ ನೀಡುವುದು)

(ಇ) ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸುವ ಗ್ರಾಮೀಣ ಮತ್ತು ನಗರ ಪ್ರದೇಶಗಳಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆಗಳನ್ನು ಜಾರಿಗೆ ತರಲು ವಿಶೇಷ ಕಾರ್ಯಯೋಜನೆ ರೂಪಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

# ರಾಜ್ಯದ ವಿವಿಧ ವಸತಿ ಶಾಲೆಗಳ ಮೂಲ ಸೌಕರ್ಯಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೯೨ (೨೪೪೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (KRIES) ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಅಂಬೇಡ್ಕರ್, ಇಂದಿರಾ ಗಾಂಧಿ ಹಾಗೂ ಇತರೆ ವಸತಿ ಶಾಲೆಗಳು ಮೂಲಭೂತ ಸೌಲಭ್ಯಗಳ ಕೊರತೆ, ಶಿಕ್ಷಕರ ಹಾಗೂ ಬೋಧಕೇತರ ಸಿಬ್ಬಂದಿ ಹುದ್ದೆಗಳು ಖಾಲಿ ಉಳಿದಿರುವುದು ಹಾಗೂ ಇನ್ನೂ ಹಲವು ಸಮಸ್ಯೆಗಳು ಉಂಟಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ KRIES ಅಧೀನದಲ್ಲಿರುವ ಒಟ್ಟು ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಮಂಜೂರುಗೊಳಿಸಲಾದ ಶಿಕ್ಷಕರ ಸಂಖ್ಯೆ ಎಷ್ಟು ; ಪ್ರಸ್ತುತ ಭರ್ತಿಯಾದ ಮತ್ತು ಖಾಲಿ ಉಳಿದಿರುವ ಹುದ್ದೆಗಳ ವಿಷಯವಾರು ಹಾಗೂ ವರ್ಗವಾರು ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಅತಿಥಿ ಶಿಕ್ಷಕರು/ಹೊರಗುತ್ತಿಗೆ ಮೂಲಕ ನೇಮಕಾತಿ ಮಾಡಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವರಿಗೆ ನೀಡಲಾಗುತ್ತಿರುವ ವೇತನ, ಸೇವಾ ಭದ್ರತೆ ಬಗ್ಗೆ ಸರ್ಕಾರದ ನೀತಿ ಏನು ; ವಸತಿ ಶಾಲೆಗಳಲ್ಲಿ ವಿದ್ಯಾರ್ಥಿ–ಶಿಕ್ಷಕ ಅನುಪಾತ ಎಷ್ಟು; ಅದು ರಾಷ್ಟ್ರೀಯ ಶಿಕ್ಷಣ ನೀತಿ (NEP) ಹಾಗೂ RTE ನಿಯಮಾವಳಿಗಳ ಮಾನದಂಡಗಳಿಗೆ ಅನುಗುಣವಾಗಿದೆಯೇ ;

(ಈ) ವಿದ್ಯಾರ್ಥಿಗಳ ವಸತಿ ಗೃಹಗಳಲ್ಲಿ ಕುಡಿಯುವ ನೀರು, ಶೌಚಾಲಯ, ಸ್ನಾನಗೃಹ, ವಿದ್ಯುತ್, ಅಗ್ನಿ ನಿರೋಧಕ ಉಪಕರಣಗಳು, CCTV, ಆವರಣ ಗೋಡೆ ಹಾಗೂ ಆರೋಗ್ಯ ತಪಾಸಣೆ ಸೌಲಭ್ಯಗಳ ಸ್ಥಿತಿ ಏನು; ಇವುಗಳಿಗೆ ಸಂಬಂಧಿಸಿದಂತೆ ನಿಯಮಿತವಾಗಿ ತಪಾಸಣೆ ನಡೆಸಲಾಗಿದೆಯೇ ;

(ಉ) ಕಳೆದ ಮೂರು ವರ್ಷಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಮಂಜೂರಾದ ಅನುದಾನ ಬಿಡುಗಡೆಗೊಂಡ ಮೊತ್ತ ಹಾಗೂ ಖರ್ಚಾದ ಮೊತ್ತವೆಷ್ಟು; ಅನುದಾನ ಬಳಕೆಯ ಶೇಕಡವಾರು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಊ) ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಫಲಿತಾಂಶದ ವಿವರ ನೀಡುವುದು ; ಶಿಕ್ಷಕರ ಕೊರತೆ ಮತ್ತು ಮೂಲಸೌಕರ್ಯ ಸಮಸ್ಯೆಗಳು ಫಲಿತಾಂಶದ ಮೇಲೆ ಪರಿಣಾಮ ಬೀರಿದೆಯೇ ಎಂಬುದರ ಕುರಿತು ಸರ್ಕಾರ ಪರಿಶೀಲನೆ ನಡೆಸಿದೆಯೇ ?

## ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ ೨೦೦೬ರ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೩ (೨೪೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳ ಹಣಕಾಸು ನಿರ್ವಹಣೆಗೆ ಆಧಾರವಾಗಿರುವ “ಕರ್ನಾಟಕ ಪಂಚಾಯತ್ ರಾಜ್ (ಆಯವ್ಯಯ ಮತ್ತು ಲೆಕ್ಕಪತ್ರ) ನಿಯಮಗಳು ೨೦೦೬” ಜಾರಿಗೆ ಬಂದು, ೨೦ ವರ್ಷವಾಗಿದ್ದು ಇಂದಿನ ಡಿಜಿಟಲ್ ಆಡಳಿತ,

ಇ–ಗವರ್ನೆನ್ಸ್ ವ್ಯವಸ್ಥೆ, DBT, PFMS ಹಾಗೂ ಆನ್‌ಲೈನ್ ಲೆಕ್ಕಪತ್ರ ವ್ಯವಸ್ಥೆಗಳ ಹಿನ್ನೆಲೆಯಲ್ಲಿಯೇ ತಾಂತ್ರಿಕವಾಗಿ ಹಳೆಯದಾಗಿವೆ ಎಂಬುದನ್ನು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೦೬ರ ನಿಯಮಗಳಲ್ಲಿ ಇನ್ನೂ ಕೈಬರಹ ಆಧಾರಿತ ಹಳೆಯ ವಿಧಾನಗಳೇ ಚಾಲ್ತಿಯಲ್ಲಿದ್ದು, ಇಂದಿನ ಇ–ಗ್ರಾಮಸ್ವರಾಜ್, ಆನ್‌ಲೈನ್ ಲೆಕ್ಕಪತ್ರ ಸಂಯೋಜನೆ (IFMS), ಆಸ್ತಿ ನೋಂದಣಿ ಡಿಜಿಟಲೀಕರಣ ಮುಂತಾದ ವ್ಯವಸ್ಥೆಗಳೊಂದಿಗೆ ಪೂರ್ಣ ಸಂಯೋಜನೆ ಕಾಣಿಸಿಕೊಳ್ಳುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೧೫ನೇ ಹಣಕಾಸು ಆಯೋಗ ಹಾಗೂ ಇತರೆ ಕೇಂದ್ರ ಅನುದಾನಗಳ ಹಿನ್ನಲೆಯಲ್ಲಿ ಪಾರದರ್ಶಕತೆ, Performance Audit, Social Audit, Internal Audit, ಹಾಗೂ Real-time Expenditure Monitoring ವ್ಯವಸ್ಥೆಗಳನ್ನು ಕಡ್ಡಾಯಗೊಳಿಸುವಂತೆ ನಿಯಮಗಳಲ್ಲಿ ತಿದ್ದುಪಡಿ ಮಾಡುವ ಬಗ್ಗೆ ಪ್ರಸ್ತಾವನೆ ಇದೆಯೇ ;

(ಈ) ಪ್ರಸ್ತುತ ನಿಯಮಗಳಲ್ಲಿ ಗ್ರಾಮ ಪಂಚಾಯಿತಿಗಳ ಸ್ವಂತ ಆದಾಯ, ತೆರಿಗೆ ಸಂಗ್ರಹಣೆ, ಬಳಕೆದಾರ ಶುಲ್ಕ, ಆಸ್ತಿ ತೆರಿಗೆ ಮಾಲ್ಯಮಾಪನ, ಡಿಜಿಟಲ್ ಪಾವತಿ ವ್ಯವಸ್ಥೆ ಕುರಿತು ಸ್ಪಷ್ಟ ಮಾರ್ಗಸೂಚಿಗಳು ಇಲ್ಲದಿರುವುದರಿಂದ ಆದಾಯ ಸೋರಿಕೆ ಹಾಗೂ ಲೆಕ್ಕಪತ್ರ ನಿರ್ವಹಣಾ ಸಮಸ್ಯೆ ಉಂಟಾಗುತ್ತಿರುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸಿದೆಯೇ ;

(ಉ) ೨೦೦೬ರ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ, ಇಂದಿನ ಹಣಕಾಸು ಶಿಸ್ತಿನ ಮಾನದಂಡಗಳು, ಸಾರ್ವಜನಿಕ ಹಣಕಾಸು

ನಿರ್ವಹಣಾ ವ್ಯವಸ್ಥೆ (PFMA Reforms), ಹಾಗೂ CAG ಸೂಚನೆಗಳಿಗೆ ಅನುಗುಣವಾಗಿ ತಾಂತ್ರಿಕ, ಡಿಜಿಟಲ್ ಹಾಗೂ ಪಾರದರ್ಶಕವಾಗಿ ಹೊಸ ಲೆಕ್ಕ ಪತ್ರ ನಿಯಮವನ್ನು ರೂಪಿಸುವ ಬಗ್ಗೆ ಕಾರ್ಯಯೋಜನೆ ರೂಪಿಸುವುದೇ ?

## ರಾಜ್ಯದಲ್ಲಿ ಗ್ರಾಮಿಣ ಪ್ರದೇಶಗಳಲ್ಲಿ ಮಲ ತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೪ (೨೪೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ತಾಲ್ಲೂಕು ಪಂಚಾಯಿತಿಗಳಿಗೆ ಮಲ ತ್ಯಾಜ್ಯ (Fecal Sludge) ಸಾಗಾಟ ಮತ್ತು ನಿರ್ವಹಣೆ ಉದ್ದೇಶಕ್ಕಾಗಿ ೨೦೧೪ ರಿಂದ ಇಂದಿನವರೆಗೆ ಎಷ್ಟು ವಾಹನಗಳನ್ನು ಖರೀದಿಸಲಾಗಿದೆ; ಅವುಗಳ ಖರೀದಿ ವೆಚ್ಚ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಖರೀದಿಸಲಾದ ವಾಹನಗಳು ಪ್ರಸ್ತುತ ಯಾವ ಸ್ಥಿತಿಯಲ್ಲಿವೆ; ಕಾರ್ಯನಿರ್ವಹಿಸುತ್ತಿರುವ ವಾಹನಗಳ ಸಂಖ್ಯೆ ಹಾಗೂ ನಿಷ್ಕ್ರಿಯಗೊಂಡಿರುವ ವಾಹನಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ವಾಹನಗಳನ್ನು ನಿಯಮಿತವಾಗಿ ಉಪಯೋಗಿಸಲು ಪ್ರಾಮಾಣಿತ ಕಾರ್ಯಾಚರಣೆ ಮಾರ್ಗಸೂಚಿ (SOP) ರೂಪಿಸಲಾಗಿದೆಯೇ ; ಚಾಲಕರ ನೇಮಕಾತಿ, ಇಂಧನ ವೆಚ್ಚ,

ನಿರ್ವಹಣೆ ಮತ್ತು ದುರಸ್ತಿ ವೆಚ್ಚಗಳಿಗೆ ಪ್ರತ್ಯೇಕ ಅನುದಾನ ನೀಡಲಾಗಿದೆಯೇ ; ಸದರಿ ವಾಹನ ಖರೀದಿಯ ನಂತರ ಬಂದ ಆದಾಯ ಎಷ್ಟು; ಸದರಿ ವಾಹನದ ನಿರ್ವಹಣೆಗೆ ಇಲ್ಲಿಯವರೆಗೆ ಮಾಡಿದ ಖರ್ಚು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜ್ಯದ ಎಷ್ಟು ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಮಲ ತ್ಯಾಜ್ಯ ನಿರ್ವಹಣಾ ಘಟಕಗಳು (FSTP/SLWM Units) ನಿರ್ಮಾಣಗೊಂಡಿದೆ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು ; ಘಟಕಗಳ ನಿರ್ಮಾಣಕ್ಕೆ ಒಟ್ಟು ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ ; ನಿರ್ಮಾಣವಾದರೂ ಕಾರ್ಯಾಚರಣೆ ಆರಂಭವಾಗದ ಘಟಕಗಳ ಸಂಖ್ಯೆ ಎಷ್ಟು;

(ಉ) ಮಲ ತ್ಯಾಜ್ಯವನ್ನು ವೈಜ್ಞಾನಿಕ ವಿಧಾನದಲ್ಲಿ ಸಂಸ್ಕರಿಸಿ ಮರುಬಳಕೆ (compost/manure/biogas) ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆಯೇ ; ಸಂಸ್ಕರಣೆಯ ನಂತರದ ಉತ್ಪನ್ನಗಳ ವಾಣಿಜ್ಯೀಕರಣ ಕುರಿತು ಯಾವುದೇ ಯೋಜನೆ ರೂಪಿಸಿದೆಯೇ ?

## "ಸ್ವಚ್ಛ ವಾಹಿನಿಯ" ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯೫ (೨೪೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯಾದ್ಯಂತ "ಸ್ವಚ್ಛ ವಾಹಿನಿ" ಯೋಜನೆಯಡಿ ತ್ಯಾಜ್ಯ ಸಂಗ್ರಹಣೆಗಾಗಿ ಒಟ್ಟು ಎಷ್ಟು ವಾಹನಗಳನ್ನು

ನಿಯೋಜಿಸಲಾಗಿದೆ ಮತ್ತು ಪ್ರಸ್ತುತ ಅವುಗಳಲ್ಲಿ ಎಷ್ಟು ವಾಹನಗಳು ಕಾರ್ಯನಿರ್ವಹಿಸುತ್ತಿವೆ ; (ಗ್ರಾಮ ಪಂಚಾಯತ್, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯ ಅನೇಕ ಗ್ರಾಮ ಪಂಚಾಯಿತಿಗಳಲ್ಲಿ ಡೀಸೆಲ್ ವೆಚ್ಚ ಭರಿಸಲಾಗದೆ ಮತ್ತು ವಾಹನಗಳ ದುರಸ್ತಿಯಾಗದ ಕಾರಣ ತ್ಯಾಜ್ಯ ಸಂಗ್ರಹಣೆ ಸಂಪೂರ್ಣ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸಂಪೂರ್ಣ ಮಾಹಿತಿ ನೀಡುವುದು ;

(ಇ) "ಸ್ವಚ್ಛ ವಾಹಿನಿ" ಯೋಜನೆಯಡಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಕಳೆದ ಹಲವು ತಿಂಗಳಿಂದ ವೇತನ ಪಾವತಿಯಾಗದಿರುವುದು ಮತ್ತು ಅವರಿಗೆ ಯಾವುದೇ ಸಾಮಾಜಿಕ ಭದ್ರತೆ ಇಲ್ಲದಿರುವುದು ನಿಜವೇ; ಬಾಕಿ ಇರುವ ವೇತನದ ಒಟ್ಟು ಮೊತ್ತ ಎಷ್ಟು ; ಸಂಪೂರ್ಣ ಮಾಹಿತಿ ನೀಡುವುದು ?

## ಬಿಯಾಂಡ್ ಬೆಂಗಳೂರು ಯೋಜನೆಯಡಿ ಮೈಸೂರಿನಲ್ಲಿ ಜಿ.ಸಿ.ಸಿ ಸ್ಥಾಪಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೬ (೨೩೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯ ಸರ್ಕಾರವು ಜಾಗತಿಕ ಸಾಮರ್ಥ್ಯ ಕೇಂದ್ರಗಳ (GCC) ನೀತಿ ೨೦೨೪–೨೦೨೯ನ್ನು ಬಿಡುಗಡೆ ಮಾಡಿದ್ದು, ಸದರಿ ನೀತಿಯಡಿ Beyond Bengaluru Initiative ಅಡಿ

ಮೈಸೂರಿನಲ್ಲಿ GCC ಗಳ ಸ್ಥಾಪನೆಗೆ ವಿಶೇಷ ಪ್ರೋತ್ಸಾಹ ನೀಡಲು ಉದ್ದೇಶಿಸಿದ್ದು ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ (SCSP) ಅಡಿಯಲ್ಲಿನ ಅನುದಾನ ಬಿಡುಗಡೆ, ಬಳಕೆ ಮತ್ತು ಪಾರದರ್ಶಕತೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯೭ (೨೩೭೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ಹಣಕಾಸು ವರ್ಷಗಳಲ್ಲಿ (೨೦೨೩–೨೪ ರಿಂದ ೨೦೨೫–೨೬ ರವರೆಗೆ) ಬೀದರ್ ಜಿಲ್ಲೆಗೆ Scheduled Caste Sub Plan (SCSP) ಅಡಿಯಲ್ಲಿ ಬಿಡುಗಡೆಗೊಂಡ ಒಟ್ಟು ಅನುದಾನದ ಮೊತ್ತ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಜಿಲ್ಲೆಯ ವಿವಿಧ ಇಲಾಖೆಗಳಾದ ಲೋಕೋಪಯೋಗಿ, ಸಮಾಜ ಕಲ್ಯಾಣ, ಶಿಕ್ಷಣ ಇತ್ಯಾದಿಗಳಿಗೆ ಹಂಚಿಕೆಯಾದ ಈ ಅನುದಾನದಲ್ಲಿ ವಾಸ್ತವವಾಗಿ ವೆಚ್ಚಮಾಡಲಾದ ಶೇಕಡಾವಾರು (Percentage of Utilization) ಎಷ್ಟು ; (ಇಲಾಖೆವಾರು ಹಾಗೂ ವರ್ಷವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ SCSP ಅನುದಾನ ಸಂಪೂರ್ಣವಾಗಿ ಬಳಕೆಯಾಗದೆ ಉಳಿದಿರುವ (Unspent Balance) ಮೊತ್ತ ಎಷ್ಟು ; ಈ

ಅನುದಾನವನ್ನು ಮುಂದಿನ ಹಣಕಾಸು ವರ್ಷಕ್ಕೆ ಮುಂದುವರಿಸಲಾಗುತ್ತದೆಯೇ ಅಥವಾ ಆಯಾ ವರ್ಷದಲ್ಲೇ ಲ್ಯಾಪ್ಸ್ (Lapse) ಆಗುತ್ತಿದೆಯೇ ;

(ಈ) SCSP ಅಡಿಯಲ್ಲಿ ಕಾಮಗಾರಿಗಳು ಅಥವಾ ಯೋಜನೆಗಳನ್ನು ಆಯ್ಕೆಮಾಡುವ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಅಥವಾ ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸುವಿಕೆ ಇದೆಯೇ ; ಈ ಕುರಿತು ಜಿಲ್ಲಾಮಟ್ಟದ ಸಮಿತಿಗಳಲ್ಲಿ ತೆಗೆದುಕೊಳ್ಳಲಾದ ತೀರ್ಮಾನಗಳ ವಿವರವೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ SCSP ಅನುದಾನದ ದುರುಪಯೋಗ (Misappropriation) ಅಥವಾ ನಿಯಮಬಾಹಿರ ಬಳಕೆ ಕುರಿತು ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಅಂತಹ ಅಧಿಕಾರಿಗಳು ಅಥವಾ ಗುತ್ತಿಗೆದಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕಟ್ಟುನಿಟ್ಟಿನ ಕ್ರಮಗಳೇನು?

## ಬೀದರ್ ಜಿಲ್ಲೆಯಲ್ಲಿನ ಮಣ್ಣು ಪರೀಕ್ಷೆ, ಮಣ್ಣಿನ ಆರೋಗ್ಯ ಕಾರ್ಡ್ ಮತ್ತು ಸಾವಯವ ಕೃಷಿ ಉತ್ತೇಜನ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೯೮ (೨೩೭೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಬೀದರ್ ಜಿಲ್ಲೆಯಲ್ಲಿನ ಎಷ್ಟು ರೈತರ ಜಮೀನಿನ ಮಣ್ಣಿನ ಮಾದರಿಗಳನ್ನು ಪರೀಕ್ಷೆಗೊಳಪಡಿಸಲಾಗಿದೆ ; ಜಿಲ್ಲೆಯಾದ್ಯಂತ ಸಂಗ್ರಹಿಸಲಾದ ಮಣ್ಣಿನ ಮಾದರಿಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಣ್ಣು ಪರೀಕ್ಷೆಯ ನಂತರ ಪೋಷಕಾಂಶಗಳ ಕೊರತೆಯನ್ನು ನಿವಾರಿಸಲು ಎಷ್ಟು ರೈತರಿಗೆ Soil Health Card Scheme ಅಡಿಯಲ್ಲಿ 'ಮಣ್ಣಿನ ಆರೋಗ್ಯ ಕಾರ್ಡ್' ವಿತರಿಸಲಾಗಿದೆ ; ಈ ಕಾರ್ಡ್‌ಗಳ ಆಧಾರದ ಮೇಲೆ ಸಮತೋಲಿತ ರಸಗೊಬ್ಬರ ಬಳಕೆಯ ಕುರಿತು ರೈತರಿಗೆ ತಾಂತ್ರಿಕ ಮಾರ್ಗದರ್ಶನ ನೀಡಲಾಗಿದೆಯೇ ;

(ಇ) ಬೀದರ್ ಜಿಲ್ಲೆಯಲ್ಲಿನ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಖಾಸಗಿ ಮಣ್ಣು ಪರೀಕ್ಷಾ ಪ್ರಯೋಗಾಲಯಗಳ (Soil Testing Laboratories) ಸಂಖ್ಯೆ ಎಷ್ಟು ; ದೂರದ ಹಳ್ಳಿಗಳ ರೈತರಿಗೆ ಅನುಕೂಲವಾಗುವಂತೆ ಸಂಚಾರಿ ಮಣ್ಣು ಪರೀಕ್ಷಾ ವಾಹನಗಳ (Mobile Soil Testing Labs) ಸೌಲಭ್ಯ ಲಭ್ಯವಿದೆಯೇ ;

(ಈ) ಅತಿಯಾದ ರಾಸಾಯನಿಕ ರಸಗೊಬ್ಬರಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ಸಮತೋಲಿತ ಗೊಬ್ಬರ ಬಳಕೆಯನ್ನು ಉತ್ತೇಜಿಸಲು ಮತ್ತು ಮಣ್ಣಿನ ಗುಣಮಟ್ಟ ಕಾಪಾಡಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಜಾಗೃತಿ ಕಾರ್ಯಕ್ರಮಗಳು ಹಾಗೂ ತರಬೇತಿ ಶಿಬಿರಗಳ ವಿವರವೇನು ;

(ಉ) ಬೀದರ್ ಜಿಲ್ಲೆಯಲ್ಲಿನ ಜೈವಿಕ ಕೃಷಿ (Biological Farming) ಮತ್ತು ಸಾವಯವ ಕೃಷಿಯನ್ನು ಉತ್ತೇಜಿಸಲು, ಸರ್ಕಾರದಿಂದ ಯಾವುದೇ ವಿಶೇಷ ಯೋಜನೆಗಳು ಅಥವಾ 'ಸಾವಯವ ಗ್ರಾಮ'ಗಳ ಪರಿಕಲ್ಪನೆ ಜಾರಿಯಲ್ಲಿದೆಯೇ ; ಇದ್ದಲ್ಲಿ ಕಳೆದ ಹಣಕಾಸು ವರ್ಷದಲ್ಲಿ ಈ ಯೋಜನೆಗೆ ಬಿಡುಗಡೆಗೊಂಡ ಅನುದಾನದ ಮೊತ್ತ ಎಷ್ಟು ?

# ಬೀದರ್ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಮತ್ತು ಪರಿಸರ ಜಾಗೃತಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮೯ (೨೩೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಪೈಕಿ ಪ್ರಸ್ತುತ ಎಷ್ಟು ಪಂಚಾಯಿತಿಗಳಲ್ಲಿ ವೈಜ್ಞಾನಿಕ ಘನತ್ಯಾಜ್ಯ ನಿರ್ವಹಣಾ ಘಟಕಗಳು (Solid Waste Management-SWM Units) ಅಥವಾ ಸ್ವಚ್ಛ ಸಂಕೀರ್ಣಗಳನ್ನು ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಗ್ರಾಮಗಳಲ್ಲಿ ಕಸವನ್ನು ಎಲ್ಲೆಂದರಲ್ಲಿ ಎಸೆಯುವುದನ್ನು ತಡೆಯಲು ನಗರ ಪ್ರದೇಶಗಳ ಮಾದರಿಯಲ್ಲಿ 'ಮನೆ–ಮನೆ ಕಸ' ಸಂಗ್ರಹ (Door-to-Door Collection) ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆಯೇ ; ಇದಕ್ಕಾಗಿ ಬಳಸಲಾಗುತ್ತಿರುವ ಸ್ವಚ್ಛತಾ ವಾಹನಗಳ (Auto Tippers) ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ಮಾಹಿತಿ ನೀಡುವುದು)

(ಇ) ಸಂಗ್ರಹವಾದ ತ್ಯಾಜ್ಯದಲ್ಲಿನ ಪ್ಲಾಸ್ಟಿಕ್ ತ್ಯಾಜ್ಯವನ್ನು ವಿಂಗಡಿಸಿ ಮರುಬಳಕೆಗೊಳಿಸಲು ಜಿಲ್ಲೆ ಅಥವಾ ತಾಲ್ಲೂಕು ಮಟ್ಟದಲ್ಲಿ ಪ್ರತ್ಯೇಕ ಸಂಸ್ಕರಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ ; ಈ ಸಂಬಂಧ Plastic Waste Management Rules ಅನುಸರಣೆ ಯಾವ ರೀತಿ ಇದೆ ;

(ಈ) ಗ್ರಾಮೀಣ ಜನರಲ್ಲಿ ತ್ಯಾಜ್ಯ ವಿಂಗಡಣೆ (ಹಸಿಕಸ ಮತ್ತು ಒಣಕಸ) ಹಾಗೂ ಪ್ಲಾಸ್ಟಿಕ್ ಮುಕ್ತ ಗ್ರಾಮಗಳ ಕುರಿತು ಪರಿಸರ ಜಾಗೃತಿ ಮೂಡಿಸಲು ಕಳೆದ ಒಂದು ವರ್ಷದಲ್ಲಿ ಹಮ್ಮಿಕೊಂಡಿರುವ ಜಾಗೃತಿ ಕಾರ್ಯಕ್ರಮಗಳ ವಿವರವೇನು ; (ಗ್ರಾಮವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ Swachh Bharat Mission Gramina ಅಡಿಯಲ್ಲಿ ಘನತ್ಯಾಜ್ಯ ನಿರ್ವಹಣಾ ಯೋಜನೆಗಾಗಿ ಜಿಲ್ಲೆಗೆ ಮೀಸಲಾದ ಮತ್ತು ಬಿಡುಗಡೆಗೊಂಡ ಒಟ್ಟು ಅನುದಾನದ ಮೊತ್ತ ಎಷ್ಟು ; ಈ ಪೈಕಿ ಬಳಕೆಯಾಗದೆ ಉಳಿದಿರುವ ಮೊತ್ತ ಎಷ್ಟು ?

## ಬೀದರ್ ಜಿಲ್ಲೆಯಲ್ಲಿನ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ, ರಕ್ಷಣೆ ಮತ್ತು ಪುನರ್ವಸತಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೦೦ (೨೩೭೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯು ನಡೆಸಿದ ದಾಳಿಗಳಲ್ಲಿ ಪತ್ತೆಯಾದ ಒಟ್ಟು ಬಾಲ ಕಾರ್ಮಿಕ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಪೈಕಿ ಎಷ್ಟು ಉದ್ದಿಮೆದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಾಗಿದೆ ; (ವರ್ಷವಾರು ವಿವರ ನೀಡುವುದು)

(ಆ) ವಿವಿಧ ಹೋಟೆಲ್, ಗ್ಯಾರೇಜ್ ಹಾಗೂ ಇತರೆ ಉದ್ದಿಮೆಗಳಿಂದ ರಕ್ಷಿಸಲ್ಪಟ್ಟ ಮಕ್ಕಳ ಪುನರ್ವಸತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಅವರನ್ನು ಮರುಶಿಕ್ಷಣದ ಮುಖ್ಯವಾಹಿನಿಗೆ ತರಲು ವಿಶೇಷ ಸೇತುವೆ ಶಾಲೆಗಳ (Bridge Schools) ವ್ಯವಸ್ಥೆ ಜಾರಿಯಲ್ಲಿದೆಯೇ ; ಇದ್ದಲ್ಲಿ ಅದರ ವಿವರವೇನು ;

(ಇ) ಅಪಾಯಕಾರಿಯಾದ ಉದ್ದಿಮೆಗಳು ಮತ್ತು ವಾಣಿಜ್ಯ ಸಂಕೀರ್ಣಗಳಲ್ಲಿ ಬಾಲಕರ್ಮಿಕರನ್ನು ಬಳಸಿಕೊಳ್ಳದಂತೆ ನಿಯಂತ್ರಿಸಲು ಕಳೆದ ಒಂದು ವರ್ಷದಲ್ಲಿ ಇಲಾಖೆಯ ವತಿಯಿಂದ ಎಷ್ಟು ಕಾರ್ಮಿಕ ತಪಾಸಣೆಗಳು (Inspections) ನಡೆಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಸಾರ್ವಜನಿಕರು ಹಾಗೂ ಉದ್ಯಮ ಮಾಲೀಕರಲ್ಲಿ ಅರಿವು ಮೂಡಿಸಲು ಜಿಲ್ಲೆಯ ಕೈಗಾರಿಕಾ ಪ್ರದೇಶಗಳು ಮತ್ತು ಗ್ರಾಮೀಣ ಭಾಗಗಳಲ್ಲಿ ಎಷ್ಟು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಈ ಕಾರ್ಯಕ್ರಮಗಳಿಗಾಗಿ ಬಿಡುಗಡೆಗೊಂಡ ಅನುದಾನದ ಮೊತ್ತ ಎಷ್ಟು ;

(ಉ) ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ತಡೆಗಟ್ಟಲು Child and Adolescent Labour (Prohibitiion and Regulation) Act, ೧೯೮೬, ಅನ್ವಯವಾಗಿ ಪೊಲೀಸ್, ಕಾಂದಾಯ ಮತ್ತು ಶಿಕ್ಷಣ ಇಲಾಖೆಗಳ ಸಮನ್ವಯದೊಂದಿಗೆ ಜಿಲ್ಲೆಯಲ್ಲಿ ವಿಶೇಷ ಕಾರ್ಯಪಡೆ (Special Task Force/ Anti-Child Labour Cell) ರಚಿಸಲಾಗಿದೆಯೇ ; ಇದ್ದಲ್ಲಿ ಈ ಕಾರ್ಯಪಡೆಯು ಎಷ್ಟು ಅವಧಿಗೊಮ್ಮೆ ಸಭೆ ನಡೆಸಿ ಪುಗತಿ ಪರಿಶೀಲನೆ ಮಾಡುತ್ತದೆ ?

# ಬೀದರ್ ಜಿಲ್ಲೆಯಲ್ಲಿನ ಹಿಂದುಳಿದ ವರ್ಗಗಳ ಯುವಕರಿಗೆ ಉದ್ಯಮಶೀಲತೆ ತರಬೇತಿ ಮತ್ತು ಸಾಲ ಸೌಲಭ್ಯ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೦೧ (೨೩೭೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ವತಿಯಿಂದ ಎಷ್ಟು ಹಿಂದುಳಿದ ವರ್ಗಗಳ ಯುವಕರಿಗೆ ಉದ್ಯಮಶೀಲತೆ ತರಬೇತಿ (Enterpreneurship Training) ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತರಬೇತಿ ಪಡೆದ ಯುವಕರಲ್ಲಿ ಸ್ವಯಂ ಉದ್ಯೋಗ ಆರಂಭಿಸಲು ಎಷ್ಟು ಮಂದಿಗೆ ಸಾಲ ಮತ್ತು ಸಬ್ಸಿಡಿ (Loan and Subsidy) ಮಂಜೂರು ಮಾಡಲಾಗಿದೆ ; ಈ ಉದ್ದೇಶಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಗೊಂಡ ಒಟ್ಟು ಅನುದಾನದ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ನಿಗಮದಿಂದ ಸಬ್ಸಿಡಿ ಮಂಜೂರಾದರೂ ಸಹ ಬ್ಯಾಂಕುಗಳು ವಿವಿಧ ತಾಂತ್ರಿಕ ಕಾರಣಗಳನ್ನು ನೀಡಿ ಸಾಲ ನಿರಾಕರಿಸುತ್ತಿರುವ (Bank Laon Rejection) ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಜಿಲ್ಲೆಯಲ್ಲಿನ ಇಂತಹ ಬಾಕಿ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಇಲಾಖೆಯಿಂದ ತರಬೇತಿ ಪಡೆದ ನಂತರ ವಾಸ್ತವವಾಗಿ ಸ್ವಂತ ಉದ್ಯೋಗ ಅಥವಾ ಉದ್ಯಮ ಆರಂಭಿಸಿದವರ ಶೇಕಡವಾರು

ಪ್ರಮಾಣ (Success Rate) ಎಷ್ಟು; ಉದ್ಯಮ ಆರಂಭಿಸಿದವರಿಗೆ ಮಾರುಕಟ್ಟೆ ಸೌಲಭ್ಯ ಪ್ರದರ್ಶನ–ಮಾರಾಟ ಮೇಳಗಳಲ್ಲಿ ಭಾಗವಹಿಸುವ ಅವಕಾಶ ಮುಂತಾದ ಬೆಂಬಲ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಉದ್ಯಮ ಆರಂಭಿಸಲು ಇಚ್ಛಿಸುವ ಹಿಂದುಳಿದ ವರ್ಗಗಳ ಯುವಕರಿಗೆ ಯೋಜನಾ ವರದಿ (DPR) ಸಿದ್ಧಪಡಿಸುವುದು ಹಾಗೂ ಕಾನೂನು ಪ್ರಕ್ರಿಯೆಗಳ ಕುರಿತು ಮಾರ್ಗದರ್ಶನ ನೀಡಲು ಜಿಲ್ಲಾಮಟ್ಟದಲ್ಲಿ ಪ್ರತ್ಯೇಕ ವಿಶೇಷ ಉದ್ಯಮ ಮಾರ್ಗದರ್ಶನ ಕೇಂದ್ರ (Enterpreneurship Guidance Centre) ಸ್ಥಾಪಿಸಲಾಗಿದೆಯೇ ಇದ್ದಲ್ಲಿ ಅದರ ಕಾರ್ಯವ್ಯಾಪ್ತಿ ಏನು ?

## ತೆಂಗಿನ ಮರಗಳಿಗೆ ತಗುಲಿರುವ ಸುಳಿ ರೋಗ ಮತ್ತು ಕಪ್ಪುತಲೆ ಹುಳು ಬಾಧೆಯನ್ನು ತಡೆಗಟ್ಟುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦೨ (೨೩೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಭಾಗಗಳಲ್ಲಿ ತೆಂಗಿನ ಮರಗಳಿಗೆ ತಗುಲಿರುವ ಸುಳಿ ರೋಗ ಮತ್ತು ಕಪ್ಪುತಲೆ ಹುಳು ಬಾಧೆಯನ್ನು ತಡೆಗಟ್ಟಲು ಕೃಷಿ ಮತ್ತು ತೋಟಗಾರಿಕೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಆ) ಮಾರುಕಟ್ಟೆಯಲ್ಲಿ ತೆಂಗಿನಕಾಯಿ ಬೆಲೆ ಗಗನಕ್ಕೇರಿದ್ದರೂ ರೈತರ ತೋಟಗಳಲ್ಲಿ ಇಳುವರಿ ಇಲ್ಲದೆ ರೈತರು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ತೆಂಗು ಬೆಳೆಗಾರರ ಆದಾಯ ಹೆಚ್ಚಿಸಲು ಮತ್ತು ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು ; ಈ ಯೋಜನೆಗಳು ಬೆಳೆಗಾರರಿಗೆ ಸಮರ್ಪಕವಾಗಿ ತಲುಪುತ್ತಿವೆಯೇ ;

(ಈ) ರೋಗಬಾಧೆಯಿಂದ ಒಣಗುತ್ತಿರುವ ತೆಂಗಿನ ಮರಗಳಿಂದ ನಷ್ಟ ಅನುಭವಿಸುತ್ತಿರುವ ರೈತರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ತೆಂಗು ಬೆಳೆಗಾರರಲ್ಲಿ ಆತ್ಮಸ್ಥೈರ್ಯ ತುಂಬಲು ಮತ್ತು ವೈಜ್ಞಾನಿಕವಾಗಿ ರೋಗ ನಿಯಂತ್ರಣ ಮಾಡಲು ಅಧಿಕಾರಿಗಳ ತಂಡವು ತೋಟಗಳಿಗೆ ಭೇಟಿ ನೀಡಿ ಮಾರ್ಗದರ್ಶನ ನೀಡುವ ವ್ಯವಸ್ಥೆ ಮಾಡಲಾಗಿದೆಯೇ ?

## ಮೈಸೂರು ಜಿಲ್ಲೆಯಲ್ಲಿನ ವಿದ್ಯಾರ್ಥಿನಿಲಯಗಳ ಆಧುನೀಕರಣ ಮತ್ತು ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦೩ (೨೩೭೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಹಾಸ್ಟೆಲ್‌ಗಳು ಸ್ವಂತ ಕಟ್ಟಡದಲ್ಲಿವೆ ಮತ್ತು ಎಷ್ಟು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮೈಸೂರು ಜಿಲ್ಲೆಯಲ್ಲಿ ಸರ್ಕಾರವು ಎಷ್ಟು ಹೈಟೆಕ್ ಹಾಸ್ಟೆಲ್‌ಗಳನ್ನು ನಿರ್ಮಿಸಲು ಯೋಜಿಸಿದೆ; ಪ್ರಸ್ತುತ ಡಿಜಿಟಲ್ ಲೈಬ್ರರಿ, ಕಂಪ್ಯೂಟರ್ ಶಿಕ್ಷಣ ಮತ್ತು ಸಿಸಿಟಿವಿ ಭದ್ರತೆಯನ್ನು ಜಿಲ್ಲೆಯ ಎಲ್ಲಾ ಹಾಸ್ಟೆಲ್‌ಗಳಲ್ಲಿ ಕಡ್ಡಾಯವಾಗಿ ಅಳವಡಿಸಲಾಗಿದೆಯೇ ;

(ಇ) ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಪ್ರತಿ ೩ ತಿಂಗಳಿಗೊಮ್ಮೆ ಉಚಿತ ಆರೋಗ್ಯ ತಪಾಸಣೆ ನಡೆಸುವ ಯೋಜನೆ ಮೈಸೂರು ಜಿಲ್ಲೆಯಲ್ಲಿ ಸಮರ್ಪಕವಾಗಿ ಜಾರಿಯಲ್ಲಿದೆಯೇ ; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಬಾರಿ ತಪಾಸಣೆ ನಡೆಸಲಾಗಿದೆ ;

(ಈ) ಜಿಲ್ಲೆಯ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳನ್ನು ಸ್ವಂತ ಕಟ್ಟಡಗಳಿಗೆ ಸ್ಥಳಾಂತರಿಸಲು ಸರ್ಕಾರ ಹಮ್ಮಿಕೊಂಡಿರುವ ಕ್ರಿಯಾ ಯೋಜನೆ ಏನು ; ಇದಕ್ಕಾಗಿ ೨೦೨೪-೨೫ ಮತ್ತು ೨೦೨೫-೨೬ನೇ ಸಾಲಿನಲ್ಲಿ ಮೈಸೂರು ಜಿಲ್ಲೆಗೆ ಮೀಸಲಿಟ್ಟಿರುವ ಅನುದಾನ ಎಷ್ಟು ?

## ಮೈಸೂರು ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೪ (೨೩೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ೮,೩೫೫ ಬಾಲ್ಯವಿವಾಹ ಪ್ರಕರಣಗಳ ವಿರುದ್ಧ ದೂರುಗಳು ದಾಖಲಾಗಿದ್ದು, ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿ, ಕ್ರಮ ಕೈಗೊಳ್ಳಲಾಗಿದೆ ;

(ಆ) ಮೈಸೂರು ಜಿಲ್ಲಾಡಳಿತವು ಬಾಲ್ಯವಿವಾಹ ತಡೆದ ಗ್ರಾಮ ಪಂಚಾಯಿತಿಗಳಿಗೆ ರೂ. ೨೫ ಸಾವಿರ ಗಳ ಬಹುಮಾನ ಘೋಷಿಸಿರುವ ಮಾದರಿಯನ್ನು ರಾಜ್ಯಾದ್ಯಂತ ಜಾರಿಗೆ ತರುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಬಾಲ್ಯವಿವಾಹಕ್ಕೆ ಸಹಕರಿಸುವ ಪುರೋಹಿತರು ಮತ್ತು ಕುಟುಂಬದವರ ವಿರುದ್ಧ ಕನಿಷ್ಠ ೨ ವರ್ಷ ಶಿಕ್ಷೆ ಹಾಗೂ ರೂ. ೨ ಲಕ್ಷ ದಂಡ ವಿಧಿಸುವ ಕಾನೂನನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಕುಡಿಯುವ ನೀರಿನ ಮಾದರಿಗಳ ಪರೀಕ್ಷೆ ಮತ್ತು ಕಲುಷಿತಗೊಂಡಿರುವ ಪ್ರದೇಶಗಳ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦೫ (೨೩೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ವಿವಿಧ ಯೋಜನೆಗಳಡಿ ಕುಡಿಯುವ ನೀರಿನ ಮಾದರಿಗಳ ಪರೀಕ್ಷೆಯನ್ನು ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಜಿಲ್ಲಾವಾರು ಮತ್ತು ವರ್ಷವಾರು ಪರೀಕ್ಷಿಸಲಾದ ಮಾದರಿಗಳ ಸಂಖ್ಯೆ ಎಷ್ಟು ;

(ಆ) ಪರೀಕ್ಷಿಸಲಾದ ಮಾದರಿಗಳಲ್ಲಿ ಎಷ್ಟು ಮಾದರಿಗಳು ಕಲುಷಿತಗೊಂಡಿರುವುದು ಕಂಡುಬಂದಿದೆ; ಇವುಗಳಲ್ಲಿ ಫ್ಲೋರೈಡ್ (Fluoride) ಆರ್ಸೆನಿಕ್ (Arsenic), ಕಬ್ಬಿಣ (Iron), ನೈಟ್ರೇಟ್ (Nitrate) ಮತ್ತು ಲವಣಾಂಶಗಳು (Salinity) ನಿಗದಿತ ಪ್ರಮಾಣಕ್ಕಿಂತ ಹೆಚ್ಚಾಗಿರುವುದು ಕಂಡುಬಂದಿದೆಯೇ ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕುಡಿಯವ ನೀರು ಅತಿ ಹೆಚ್ಚು ಕಲುಷಿತಗೊಂಡಿದೆ ಎಂದು ಗುರುತಿಸಲಾಗಿದೆ ; ಈ ಪೈಕಿ ಎಷ್ಟು ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲಾಗಿದೆ ;

(ಈ) ಕಲುಷಿತ ನೀರು ಸರಬರಾಜು ಆಗುತ್ತಿರುವ ಪ್ರದೇಶಗಳಲ್ಲಿ ಸರ್ಕಾರವು ಕೈಗೊಂಡಿರುವ ಪರ್ಯಾಯ ಕ್ರಮಗಳೇನು ; ನೀರಿನ ಗುಣಮಟ್ಟವನ್ನು ಸುಧಾರಿಸಲು ಬಳಸಲಾದ ವಿಶೇಷ ಅನುದಾನದ ವಿವರಗಳೇನು ;

(ಉ) ಕೇಂದ್ರ ಸರ್ಕಾರದ 'ಜಲ ಜೀವನ್ ಮಿಷನ್' ಅಡಿಯಲ್ಲಿ ರಾಜ್ಯಕ್ಕೆ ಬಿಡುಗಡೆಯಾದ ಅನುದಾನದಲ್ಲಿ ನೀರಿನ ಗುಣಮಟ್ಟ ಪರೀಕ್ಷೆಗಾಗಿ (Water Quality Monitoring and Survellance) ಮೀಸಲಿಟ್ಟ ಹಣ ಎಷ್ಟು?

## ಗ್ರಾಮ ಪಂಚಾಯಿತಿಗಳಲ್ಲಿ ಮಹಿಳೆಯರಿಂದ ಕಸ ವಿಂಗಡಣೆಯ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೦೬ (೭೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಪೌರಕಾರ್ಮಿಕರ ಬದಲಾಗಿ ಸ್ವಸಹಾಯ ಸಂಘಗಳ ಮಹಿಳೆಯರನ್ನು ಬಳಸಿಕೊಂಡು, ಯಾವುದೇ ರಕ್ಷಣಾ ಕವಚಗಳಿಲ್ಲದೆ ಬರಿಗೈಲಿ ಹಸಿ ಮತ್ತು ಒಣ ಕಸ ವಿಂಗಡಿಸುವ ಅಮಾನವೀಯ ಕೆಲಸ ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನಿಯಮದ ಪ್ರಕಾರ ಕಸ ವಿಂಗಡಣೆಗೆ ಯಂತ್ರಗಳನ್ನು ಬಳಸಬೇಕಿದ್ದರೂ, ಮಹಿಳೆಯರಿಂದ ಕೈಯಲ್ಲೇ ಮಾಡಿಸುತ್ತಿರುವುದು ಕಾನೂನು ಬಾಹಿರವಲ್ಲವೇ ; ಈ ರೀತಿ ಮಾಡುತ್ತಿರುವ ಪಂಚಾಯಿತಿಗಳ ವಿರುದ್ಧ ಕೈಗೊಂಡಿರುವ ಶಿಸ್ತು ಕ್ರಮಗಳೇನು ;

(ಇ) ಈ ಮಹಿಳೆಯರಿಗೆ ಕನಿಷ್ಠ ವೇತನ, ಆರೋಗ್ಯ ವಿಮೆ ಮತ್ತು ಸುರಕ್ಷತಾ ಉಪಕರಣಗಳನ್ನು ನೀಡದಿರಲು ಕಾರಣಗಳೇನು ?

## ರಾಜ್ಯದಲ್ಲಿ ಭಿಕ್ಷಾಟನೆ ಹೆಚ್ಚುತ್ತಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೧೦೭ (೨೩೮೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷಾಟನೆಯನ್ನು ಸಂಪೂರ್ಣವಾಗಿ ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಭಿಕ್ಷುಕರಿಗಾಗಿ ತೆರೆದಿರುವ ನಿರಾಶ್ರಿತರ ಪರಿಹಾರ ಕೇಂದ್ರಗಳ ಸಂಖ್ಯೆ ಎಷ್ಟು ; ಈ ಕೇಂದ್ರಗಳಲ್ಲಿರುವ ಭಿಕ್ಷುಕರ ಸಂಖ್ಯೆ ಎಷ್ಟು ; (ಕೇಂದ್ರವಾರು ಭಿಕ್ಷುಕರ ಸಂಖ್ಯೆಯ ವಿವರ ನೀಡುವುದು)

(ಇ) ಉಳಿದ ಜಿಲ್ಲೆಗಳಲ್ಲೂ ನಿರಾಶ್ರಿತರ ಕೇಂದ್ರಗಳನ್ನು ಆರಂಭಿಸದೇ ಇರುವುದಕ್ಕೆ ಕಾರಣಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ನಿರಾಶ್ರಿತರ ಪರಿಹಾರ ಕೇಂದ್ರಗಳ ರಕ್ಷಣೆಯಲ್ಲಿರುವ ಭಿಕ್ಷುಕರಿಗೆ ಒದಗಿಸಲಾಗುತ್ತಿರುವ ಸೌಲಭ್ಯಗಳೇನು ;

(ಉ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಪರಿಹಾರ ಸಮಿತಿಗೆ ವಿವಿಧ ಸ್ಥಳೀಯ ಸಂಸ್ಥೆಗಳಿಂದ ಪಾವತಿಸಲಾಗಿರುವ ಭಿಕ್ಷುಕರ ಉಪಕರದ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಊ) ಅಪ್ರಾಪ್ತರನ್ನು ಭಿಕ್ಷಾಟನೆಗೆ ದೂಡುವ ಮಾಫಿಯಾ/ಜಾಲ ಇದೆ ಎನ್ನುವ ಆರೋಪಗಳಿರುವುದು ನಿಜವೇ; ಇದ್ದಲ್ಲಿ ಈ ಮಾಫಿಯವನ್ನು ಭೇದಿಸಲು ಸರ್ಕಾರದ ಕ್ರಮಗಳೇನು ; ಈ ಸಂಬಂಧ ಪ್ರಕರಣಗಳು ದಾಖಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## 'ಗೃಹಲಕ್ಷ್ಮಿ' ಯೋಜನೆ ಸೌಲಭ್ಯ ನಿರಾಕರಿಸಿರುವವರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೧೦೮ (೨೩೮೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಗೃಹಲಕ್ಷ್ಮಿ' ಯೋಜನೆ ಜಾರಿಗೊಂಡ ದಿನದಿಂದ ಈವರೆವಿಗೂ ಈ ಯೋಜನೆಯು ಸೌಲಭ್ಯವನ್ನು ನಿರಾಕರಿಸಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಫಲಾನುಭವಿಗಳ ಖಾತೆಗಳಿಗೆ ಈಗಾಗಲೇ ಜಮೆಯಾಗಿರುವ ಧನಸಹಾಯದ ಮೊತ್ತದ ಪೈಕಿ ಎಷ್ಟು ಹಣವನ್ನು ಸರ್ಕಾರಕ್ಕೆ ಹಿಂದಿರುಗಿಸಲಾಗಿದೆ ಹಾಗೂ ಸರ್ಕಾರದ ಖಾತೆಗೆ ಜಮೆ ಮಾಡಲು ಬಾಕಿ ಇರುವ ಮೊತ್ತವೆಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) 'ಗೃಹಲಕ್ಷ್ಮಿ' ಯೋಜನೆಯಡಿ ನೋಂದಣಿ ಮಾಡಿಸಿಕೊಂಡು ತದನಂತರ ಮರಣ ಹೊಂದಿರುವ ಫಲನುಭವಿಗಳ ಒಟ್ಟು ಸಂಖ್ಯೆ ಎಷ್ಟು ; ಹಾಗೂ ಇವರಲ್ಲಿ ಎಷ್ಟು ಫಲಾನುಭವಿಗಳ ಖಾತೆಗಳಿಗೆ ಹಣ ಜಮೆಯಾಗಿದೆ ; ಜಮೆ ಯಾಗಿರುವ ಮೊತ್ತ ಎಷ್ಟು ;

(ಈ) ಈಗಾಗಲೇ ಜಮೆಯಾಗಿರುವ ಧನಸಹಾಯದ ಮೊತ್ತದ ಪೈಕಿ ಎಷ್ಟು ಹಣವನ್ನು ಸರ್ಕಾರಕ್ಕೆ ಹಿಂದಿರುಗಿಸಲಾಗಿದೆ ; ಹಾಗೂ ಸರ್ಕಾರದ ಖಾತೆಗೆ ಜಮೆ ಮಾಡಲು ಬಾಕಿಯಿರುವ ಹಣವೆಷ್ಟು; (ಜಿಲ್ಲಾವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಫಲಾನುಭವಿಗಳು ಮೃತಪಟ್ಟ ಹಾಗೂ ಧನಸಹಾಯ ನಿರಾಕರಿಸಿದ ಬಳಿಕ ಅವರ ಖಾತೆಗೆ ಜಮೆ ಆಗಿರುವ ಹಣ ಹಿಂಪಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಊ) 'ಗೃಹಲಕ್ಷ್ಮಿ' ಯೋಜನೆಯ ಸೌಲಭ್ಯವನ್ನು ಪ್ರಸ್ತುತ ಪಡೆಯುತ್ತಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ಹಾಗೂ ಈ ಯೋಜನೆ ಜಾರಿಗೊಂಡ ದಿನದಿಂದ ಈವರೆಗೂ ಪಾವತಿಸಿರುವ ಧನಸಹಾಯದ ಮೊತ್ತ ಎಷ್ಟು ? (ಜಿಲ್ಲಾವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ಮಕ್ಕಳ ಸಹಾಯವಾಣಿಗೆ ಬರುತ್ತಿರುವ ದೂರುಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೧೧೯ (೨೩೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಮಕ್ಕಳ ಸಹಾಯವಾಣಿಗೆ ಬಂದಂತಹ ಒಟ್ಟು ಕರೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಅವಧಿಯಲ್ಲಿ ಸಹಾಯವಾಣಿಗೆ ಬಂದಿದ್ದ ಕರೆಗಳನ್ನು ಆಧರಿಸಿ ಒಟ್ಟು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಈ ಪೈಕಿ ಮಾಹಿತಿ ನೀಡಿ ವಿಲೇವಾರಿ ಮಾಡಲಾದ ಮತ್ತು ಬಾಕಿಯಿರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲೆ ವರ್ಷ, ಸ್ವೀಕರಿಸಿದ, ದಾಖಲಿಸಿದ, ವಿಲೇಯಾದ, ಬಾಕಿ ವರ್ಷಾವಾರು ಪ್ರಕರಣಗಳ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಇ) ದಾಖಲಿಸಲ್ಪಟ್ಟ ದೂರು ಪ್ರಕರಣಗಳು ಯಾವ ಯಾವ ಸ್ವರೂಪದ್ದಾಗಿವೆ ; (ಬಾಲ್ಯವಿವಾಹ, ಭಿಕ್ಷಾಟನೆ, ಮಕ್ಕಳ ಪತ್ತೆ ದೂರಿನ ಸ್ವರೂಪ, ದಾಖಲಿಸಲ್ಪಟ್ಟ ಪ್ರಕರಣಗಳ ಸಂಖ್ಯೆಯೊಂದಿಗೆ ವರ್ಷವಾರು ಮಾಹಿತಿ ನೀಡುವುದು)

(ಈ) ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಸರ್ಕಾರ ತೆಗೆದುಕೊಂಡಿರುವ ರಕ್ಷಣಾ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳ ಭರ್ತಿ ಮಾಡುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೧೧೦ (೨೩೮೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಒಟ್ಟು ಸಂಖ್ಯೆ ಎಷ್ಟು , (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಾಕಷ್ಟು ಹುದ್ದೆಗಳು ಖಾಲಿ ಇದ್ದರೂ ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್–೧ ವೃಂದದಿಂದ PDO ಹುದ್ದೆಗೆ ಬಡ್ತಿ ನೀಡದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಇ) ರಾಜ್ಯ ಮಟ್ಟದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ (ಗ್ರೇಡ್–೧) ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆಯೇ ;

(ಈ) ಪ್ರಕಟಿಸಿದ್ದಲ್ಲಿ ಕಾರ್ಯದರ್ಶಿ (ಗ್ರೇಡ್–೧) ಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತ್ವರಿತಗೊಳಿಸಿ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ಈ ನಿಟ್ಟಿನಲ್ಲಿ ಈವರೆಗೂ ಆಗಿರುವ ಕ್ರಮಗಳ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಉ) ಗ್ರಾಮ ಪಂಚಾಯಿತಿಗಳಲ್ಲಿ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಸೃಜಿಸಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ ಪದೋನ್ನತಿ ನೀಡುವ ಕುರಿತು ಇದುವರೆಗೂ ಆಗಿರುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಕೃಷಿ ಕಾಲೇಜುಗಳನ್ನು ಮರು ಸಂಘಟಿಸಲು ನೇಮಿಸಿದ್ದ ತಜ್ಞರ ಸಮಿತಿ ವರದಿ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೨೧೧೧ (೨೩೮೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಾದ್ಯಂತ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳ ಮರುಸಂಘಟಿಸಲು ರಚಿಸಲಾಗಿದ್ದ ತಜ್ಞರ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ಸಲ್ಲಿಸಿದ್ದಲ್ಲಿ, ಯಾವ ದಿನಾಂಕದಂದು ವರದಿ ಸಲ್ಲಿಸಲಾಗಿದೆ ; (ವಿವರ ನೀಡುವುದು)

(ಆ) ಸಮಿತಿಯು ನೀಡಿರುವ ವರದಿಯಲ್ಲಿನ ಶಿಫಾರಸ್ಸುಗಳೇನು ; (ವರದಿ ಪ್ರತಿಯನ್ನು ಒದಗಿಸುವುದು)

(ಇ) ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧೀನದ ಮೈಸೂರಿನ ತೋಟಗಾರಿಕೆ ಮಹಾವಿದ್ಯಾಲಯವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಕುರಿತು ಸರ್ಕಾರದ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಕರ್ನಾಟಕ ರಾಜ್ಯದ ವಿವಿಧ ಅಭಿವೃದ್ಧಿ ನಿಗಮ ಹಾಗೂ ಮಂಡಳಿಗಳ ಅನುದಾನ ಹಂಚಿಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೨ (೨೪೨೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಒಟ್ಟು ನಿಗಮಗಳು/ಮಂಡಳಿಗಳು ಪ್ರಾಧಿಕಾರಗಳೆಷ್ಟು: ಅವುಗಳ ಕಾರ್ಯವ್ಯಾಪ್ತಿಯೇನು ; ಇವುಗಳಿಗೆ ಕಂತುವಾರು ನಿಗಧಿಪಡಿಸಿದ/ಮಂಜೂರಾದ, ಬಿಡುಗಡೆಯಾದ ಮತ್ತು ಬಾಕಿಯಿರುವ ಅನುದಾನವೆಷ್ಟು ; ಈ ಬಗ್ಗೆ ಅನುಸರಿಸುತ್ತಿರುವ ಮಾರ್ಗಸೂಚಿಗಳಾವುವು ;

(ಆ) ಈ ನಿಗಮಗಳು/ಮಂಡಳಿಗಳು/ಪ್ರಾಧಿಕಾರಗಳಿಂದ ಕರಾವಳಿ, ಮಲೆನಾಡು ಹಾಗೂ ಬಯಲುಸೀಮೆ ಪ್ರದೇಶಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; ಈ ಮೂರು ಪ್ರದೇಶಗಳಿಗೆ ಅನುದಾನವನ್ನು ಯಾವ ಮಾನದಂಡಗಳ ಆಧಾರದಲ್ಲಿ ಮಂಜೂರು ಮಾಡಿ ಬಿಡುಗಡೆಗೊಳಿಸಲಾಗುತ್ತಿದೆ ; ಈ ಅನುದಾನದ ಕ್ರಿಯಾ ಯೋಜನೆಯಲ್ಲಿ ಒಟ್ಟು ಎಷ್ಟು ಕೆಲಸಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ; ಅವು ಯಾವುವು ; ಈಗಾಗಲೇ ಎಷ್ಟು ಹಣ ಖರ್ಚಾಗಿದೆ ; ಇನ್ನು ಎಷ್ಟು ಹಣ ನೀಡಲು ಬಾಕಿ ಇದೆ ; ಅದನ್ನು ಯಾವಾಗ ನೀಡಲಾಗುತ್ತಿದೆ ; ಈ ಕೆಲಸಗಳನ್ನು ಯಾವ ಸಂಸ್ಥೆಗಳ ಮೂಲಕ ಯಾರು ನಿರ್ವಹಿಸುತ್ತಿದ್ದಾರೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಯಾವ ನಿಗಮಗಳು/ಮಂಡಳಿಗಳು/ಪ್ರಾಧಿಕಾರಗಳಿಂದ ಕರಾವಳಿ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಹಾಗೂ ಎಲ್ಲಾ ಇಲಾಖೆಗಳು ಸೇರಿದಂತೆ ಈ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನದಲ್ಲಿ ಹಿಂದಿರುಗಿಸಲ್ಪಟ್ಟ ಮೊತ್ತವೆಷ್ಟು ; ಅದಕ್ಕೆ ಕಾರಣಗಳೇನು ;

(ಈ) ಅನುದಾನ ಮೊತ್ತದಲ್ಲಿ ಕಡಿತ ಮತ್ತು ಬಿಡುಗಡೆಯಲ್ಲಿ ವಿಳಂಬವು ವೈಯಕ್ತಿಕ ಹಾಗೂ ಸಾಮುದಾಯಿಕ ಫಲಾನುಭವಿ ಗುರಿಗಳನ್ನು (Reduced Targets) ಮರುನಿಗಧೀಕರಿಸಬೇಕಾದ ಅನಿವಾರ್ಯತೆಯಿಂದಾಗಿ ಸರ್ಕಾರಿ ಯೋಜನೆಗಳು ಕಡಿಮೆ ಜನರಿಗೆ ಸೌಲಭ್ಯಗಳು ತಲುಪುವ ಬಗ್ಗೆ ಸರ್ಕಾರದ ಪರಿಹಾರ ಕ್ರಮಗಳೇನು ;

(ಉ) ದಕ್ಷಿಣ ಕನ್ನಡ/ಉಡುಪಿ ಜಿಲ್ಲೆಗಳ ಭೌಗೋಳಿಕ ವ್ಯಾಪ್ತಿ ಮತ್ತು ಅಭಿವೃದ್ಧಿ ಅಗತ್ಯಗಳನ್ನು ಪರಿಗಣಿಸಿ ಬಿಡುಗಡೆಯಾಗುತ್ತಿರುವ ಅನುದಾನವನ್ನು ತರ್ಕಬದ್ಧವಾಗಿ ಹೆಚ್ಚಿಸುವ ಹಾಗೂ ಭವಿಷ್ಯದಲ್ಲಿ ಅನುದಾನ ಹಂಚಿಕೆಯಲ್ಲಿ ಸಮನ್ವಯ ಸಾಧಿಸಲು ಮತ್ತು ಕ್ಲಪ್ತ ಸಮಯಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಸರ್ಕಾರ ಕೈಗೊಳ್ಳುವ ಕಾಲಮಿತಿಯ ಕ್ರಮಗಳೇನು ?

## ಹಣಕಾಸು ಯೋಜನೆಯಡಿ ಅನುದಾನ ಬಿಡುಗಡೆ ಹಾಗೂ ಬಳಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೩ (೨೪೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ೧೫ನೇ ಹಣಕಾಸು ಯೋಜನೆಯಡಿ ಮಂಜೂರಾದ ಅನುದಾನವೆಷ್ಟು ; ಬಿಡುಗಡೆಯಾದದ್ದೆಷ್ಟು ; ಬಿಡುಗಡೆಗೆ ಬಾಕಿಯಿರುವ ಮೊತ್ತವೆಷ್ಟು ; ಅನುದಾನ ಮಂಜೂರಾತಿ ಮತ್ತು ಬಿಡುಗಡೆಗೆ ಅನುಸರಿಸಿದ ಮಾರ್ಗಸೂಚಿ ಹಾಗೂ ಮಾನದಂಡಗಳಾವುವು ;

(ಆ) ವಾರ್ಷಿಕವಾಗಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾದ ಮೊತ್ತ. ರಾಜ್ಯ ಸರ್ಕಾರದಿಂದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಬಿಡುಗಡೆಗೊಂಡ ಮೊತ್ತ ಹಾಗೂ ಆಯಾಯ ವೆಚ್ಚದ ಬಾಬು

ವಾಸ್ತವವಾಗಿ ಪಾವತಿಸಲಾದ ಮೊತ್ತದ ವಿವರಗಳೇನು: ವರ್ಷವಾರು, ಒಟ್ಟು ಹಾಗೂ ಪಂಚಾಯತ್ ರಾಜ್ ಸಂಸ್ಥೆವಾರು ಕ್ರೂಢೀಕೃತ ವಿವರಗಳೇನು ;

(ಇ) ಅನುದಾನಕ್ಕೆ ಸಂಬಂಧಿಸಿದಂತೆ ಇ-ಗ್ರಾಮ ಸ್ವರಾಜ್ ಪೋರ್ಟಲ್‌ನಲ್ಲಿ ದಾಖಲಾಗಿರುವ ಅನುದಾನ, ಬಿಡುಗಡೆ, ಅನುಮೋದಿತ ಕ್ರಿಯಾ ಯೋಜನೆ ಮೊತ್ತ, ಮತ್ತು ವಾಸ್ತವಿಕ ಭರಿಸಿದ ವೆಚ್ಚ ಇತ್ಯಾದಿಗಳ ನಡುವೆ ವ್ಯತ್ಯಾಸವಿದೆಯೇ ; ಇದ್ದಲ್ಲಿ, ಆ ವ್ಯತ್ಯಾಸದ ನಿಖರ ಪ್ರಮಾಣ ಹಾಗೂ ಕಾರಣಗಳನ್ನು ಪ್ರಚುರಪಡಿಸುವ ವರ್ಷವಾರು, ಪಂಚಾಯತ್ ರಾಜ್ ಸಂಸ್ಥೆವಾರು ಮಟ್ಟದ ಸಮಯ ಸರಣಿ ದತ್ತಾಂಶ (time series data) ವಿವರಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳಲ್ಲಿ ಇ-ಗ್ರಾಮ ಸ್ವರಾಜ್ ಪೋರ್ಟಲ್‌ನಲ್ಲಿ ದಾಖಲಾಗಿರುವ ಅನುದಾನ, ಬಿಡುಗಡೆ, ಅನುಮೋದಿತ ಕ್ರಿಯಾ ಯೋಜನೆ ಮೊತ್ತ, ಮತ್ತು ವಾಸ್ತವಿಕ ಭರಿಸಿದ ವೆಚ್ಚ ಇತ್ಯಾದಿಗಳ ನಡುವೆ ವ್ಯತ್ಯಾಸವಿದೆಯೇ ; ಇದ್ದರೆ ವ್ಯತ್ಯಾಸವೆಷ್ಟು ; ಮತ್ತು ಅದಕ್ಕೆ ಕಾರಣವೇನು ;

(ಉ) ಸದರಿ ೧೫ನೇ ಹಣಕಾಸು ಯೋಜನೆಯಡಿ ಅನುದಾನವು ಬಿಡುಗಡೆಗೆ ಕೇಂದ್ರ ಅಥವಾ ರಾಜ್ಯ ಹಂತದಲ್ಲಿ ಕಡಿತ ಮತ್ತು ಬಾಕಿಯಾಗಿದೆಯೇ ; ಕಾಮಗಾರಿಗಳು ಪೂರ್ಣಗೊಂಡಿದ್ದರೂ ಬಿಲ್ಲು ಪಾವತಿ ಆಗದಿರುವ ಪ್ರಕರಣಗಳ ಸಮಸ್ಯೆಗಳನ್ನು ಯಾವಾಗ ಹೇಗೆ ಪರಿಹರಿಸಲಾಗುವುದು ?

# ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೪ (೨೪೨೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇನತರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಯಾವುವು ; ಅವುಗಳಿಗೆ ವಾರ್ಷಿಕವಾಗಿ ನಿಗಧಿಪಡಿಸಿದ ಮತ್ತು ಬಿಡುಗಡೆಯಾಗುವ ಅನುದಾನ ಎಷ್ಟು : ಅದನ್ನು ಯಾವ ಅವಧಿಗೆ ಯಾವ ಪ್ರಮಾಣದಲ್ಲಿ ಬಿಡುಗಡೆಮಾಡಲಾಗುತ್ತಿದೆ ;

(ಆ) ಇಲಾಖೆಯ ಒಟ್ಟು ಯೋಜನೆಗಳ ಪೈಕಿ ಪ್ರಸ್ತುತ ಯಾವೆಲ್ಲಾ ಯೋಜನೆಗಳ ಅನುದಾನ ಬಿಡುಗಡೆ ವಿಳಂಭವಾಗಿದೆ: ರಾಜ್ಯದಲ್ಲಿ ಸುಮಾರು ೧೬೬ ಶಿಶು ಕೇಂದ್ರಿತ/ವಸತಿಯುತ ಶಾಲೆಗಳು ಸುಮಾರು ೯,೦೦೦ ಕ್ಕೂ ಹೆಚ್ಚು ವಿವಿಧ ಆರೋಗ್ಯ ಸಮಸ್ಯೆಯಿರುವ ದಿವ್ಯಾಂಗ ಮಕ್ಕಳಿಗೆ ವಸತಿ ಶಿಕ್ಷಣದೊಂದಿಗೆ ಆರೈಕೆ ಮಾಡುತ್ತಿದ್ದು IEDC ಸೇರಿದಂತೆ ಸಂಬಂಧಿತ ಯೋಜನೆಗಳಡಿ ಸರ್ಕಾರದ ಅನುದಾನವನ್ನು ಅವಲಂಬಿಸಿದೆಯೇ ; ಈ ಸಂಸ್ಥೆಗಳಿಗೆ ನೀಡುತ್ತಿರುವ ಅನುದಾನವೆಷ್ಟು ;

(ಇ) ವರ್ಷ ೨೦೨೫–೨೬ರಲ್ಲಿ ಮೂರನೇ ಕಂತಿನ (ಅಕ್ಟೋಬರ್–ಡಿಸೆಂಬರ್) ಅನುದಾನ ಹಲವಾರು ಸಂಸ್ಥೆಗಳಿಗೆ ಬಿಡುಗಡೆಯಾಗಿಲ್ಲದಿರುವುದು ಸರ್ಕಾರ ಗಮನಿಸಿದೆಯೇ ; ಕಂತುವಾರು ನಿಗಧಿಪಡಿಸಿದ/ಮಂಜೂರಾದ, ಬಿಡುಗಡೆಯಾದ ಮತ್ತು ಬಾಕಿಯಿರುವ ಅನುದಾನವೆಷ್ಟು ; ಈ ಬಗ್ಗೆ ಅನುಸರಿಸುತ್ತಿರುವ ಮಾರ್ಗಸೂಚಿಗಳಾವುವು ;

(ಈ) ಅನುದಾನ ಬಿಡುಗಡೆ ವಿಳಂಬವಾಗಲು ನಿಖರ ಆಡಳಿತಾತ್ಮಕ, ತಾಂತ್ರಿಕ ಅಥವಾ ಹಣಕಾಸು ಸಂಬಂಧಿತ ಕಾರಣಗಳೇನು ; ಮಕ್ಕಳ ಸಂಖ್ಯೆ ಹೆಚ್ಚಾದರು ಹಿಂದಿನ ಅಂಕಿ–ಅಂಶಗಳನ್ನು ಆಧರಸಿ ಅನುದಾನ ನಿಗಧಿಪಡಿಸಲು ಕಾರಣಗಳೇನು ;

(ಉ) ಅನುದಾನ ವಿಳಂಬದಿಂದ ಶಿಕ್ಷಕರ ವೇತನ. ಆಹಾರ, ಹಾಸ್ಟೆಲ್ ಹಾಗೂ ವೈದ್ಯಕೀಯ ವೆಚ್ಚಗಳಿಗೆ ಸದರಿ ಸಂಸ್ಥೆಗಳು ದಾನಿಗಳನ್ನು ಹುಡುಕಬೇಕಾದ ಅನಿವಾರ್ಯತೆ ಉಂಟಾದ ಹಿನ್ನೆಲೆಯಲ್ಲಿ ಸರ್ಕಾರ ಬಾಕಿ ಉಳಿದಿರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ; ಭವಿಷ್ಯದಲ್ಲಿ ಇಂತಹ ವಿಳಂಬಗಳು ಮರುಕಳಿಸದಂತೆ ಶಾಶ್ವತ ವ್ಯವಸ್ಥೆ ರೂಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೫ (೨೪೩೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲೆಗಳಲ್ಲಿರುವ ವಿವಿಧ ಪರಿಶಿಷ್ಟ ಜಾತಿಯ ಸರ್ಕಾರದ ಅನುಸೂಚಿತ ಜಾತಿ ಪಟ್ಟಿಯಲ್ಲಿರುವ ಸಮುದಾಯದ ಕುಟುಂಬಗಳು, ಜನಸಂಖ್ಯೆ, ಜನವಸತಿ ಪ್ರದೇಶಗಳು, ಹೊಂದಿರುವ ಸೌಲಭ್ಯಗಳು, ಶೈಕ್ಷಣಿಕ ಮಟ್ಟ ಮತ್ತಿತರ ಕುಲಶಾಸ್ತ್ರೀಯ ಮಾಹಿತಿಗಳೇನು: ಸಮುದಾಯಗಳ ಕುಟುಂಬಗಳ ಮತ್ತು ಜನಸಂಖ್ಯೆ ಜಿಲ್ಲಾವಾರು ವಿವರಗಳೇನು ; ಮುಂದಿನ ದಿನಗಳಲ್ಲಿ ಪರಿಶಿಷ್ಟ ಜಾತಿಯ ಕುಟುಂಬಗಳ ನವೀಕೃತ ಡಿಜಿಟಲ್ ಡೇಟಾಬೇಸ್ ಸಿದ್ಧಪಡಿಸಲು ಸರ್ಕಾರದ ಕ್ರಮಗಳೇನು ;

(ಆ) ಸಮಾಜ ಕಲ್ಯಾಣ ಇಲಾಖೆಯ ಅಭಿವೃದ್ಧಿ ನಿಗಮಗಳ ಮೂಲಕ ಪರಿಶಿಷ್ಟ ಜಾತಿಯ ಜನರಿಗೆ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿದ್ದರೂ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ನಿಗಧಿಪಡಿಸುವ ಸಂದರ್ಭದಲ್ಲಿ ಯಾವುದೇ ಸ್ಪಷ್ಟ ಮತ್ತು ಏಕೀಕೃತ ಮಾನದಂಡಗಳಿಲ್ಲದೆ ಯೋಜನೆಗಳು ನಿರೀಕ್ಷಿತ ಗುರಿ ತಲುಪದಿರುವುದು ಸರ್ಕಾರ ಗಮನಿಸಿದೆಯೇ ;

(ಇ) ರಾಜ್ಯದಲ್ಲಿರುವ (SCSP) ಪ.ಜಾ.ಉ.ಯೋಜನೆಯೂ ಸೇರಿದಂತೆ ವಿವಿಧ ಯೋಜನೆಗಳಡಿ ಪರಿಶಿಷ್ಟ ಜಾತಿ ಸಮುದಾಯದ ಜನರಿಗೆ ನೀಡಲಾಗುತ್ತಿರುವ ಕಲ್ಯಾಣ ಕಾರ್ಯಕ್ರಮಗಳ ಭೌತಿಕ ಮತ್ತು ಆರ್ಥಿಕ ಗುರಿಗಳ ಪೈಕಿ ಸಮುದಾಯಿಕ ಮತ್ತು ವೈಯಕ್ತಿಕ ಫಲಾನುಭವಿ ಆಧಾರಿತ ಕಾರ್ಯಕ್ರಮಗಳ ಅನುಪಾತವನ್ನು ಸ್ಪಷ್ಟ ಮಾನದಂಡಗಳ ಮೂಲಕ ನಿಗಧಿಪಡಿಸಲು ಸರ್ಕಾರದ ಕ್ರಮಗಳೇನು ;

(ಈ) ಯೋಜನೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾದರೂ ಕಡಿಮೆ ಟಾರ್ಗೆಟ್ ಇರುವ ಕಾರಣ ಫಲಾನುಭವಿಗಳು

ಅನಗತ್ಯವಾಗಿ ಅಲೆದಾಡುವ ಪರಿಸ್ಥಿತಿ ಸೃಷ್ಟಿಯಾಗುತ್ತಿದ್ದು ಗುರಿಯನ್ನು ಆದ್ಯತೀಕರಿಸಿ ಹೆಚ್ಚಿಸುವ ಬಗ್ಗೆ ಹಾಗೂ ಶಾಸಕರ ಅನುದಾನ ಮತ್ತು ಇತರ ಯೋಜನಾ ಅನುದಾನಗಳನ್ನು ಪರಿಶಿಷ್ಟ ಜಾತಿ ಸಮುದಾಯಕ್ಕೆ ಪರಿಣಾಮಕಾರಿಯಾಗಿ ತಲುಪಿಸಲು ಗ್ರಾಮವಾರು ಜನಸಂಖ್ಯೆ, ಬೇಡಿಕೆ, ಇತ್ಯಾದಿಗಳ ಸಮಗ್ರ ಮಾಹಿತಿಯನ್ನು ಸಂಗ್ರಹಿಸಿ ಅದರ ಆಧಾರದಲ್ಲಿ ತರ್ಕಬದ್ಧ ಯೋಜನೆ ರೂಪಿಸುವ ಕುರಿತು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ?

## ಕರ್ನಾಟಕ ರಾಜ್ಯದಲ್ಲಿ ಕೃಷಿ ವಲಯವನ್ನು ಬಲಪಡಿಸುವ ಕಾರ್ಯಕ್ರಮಗಳ ಅನುಷ್ಠಾನ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧೬ (೨೪೩೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಹುಸಂಖ್ಯಾತ ಜನರು ಅವಲಂಬಿಸಿರುವ ಕೃಷಿ ವಲಯವನ್ನು ಬಲಪಡಿಸಲು ರಾಜ್ಯ ಯೋಜನಾ ಆಯೋಗ ನೀಡಿರುವ ಶಿಫಾರಸ್ಸುಗಳಾವುವು: ಆಯೋಗದ ಶಿಫಾರಸ್ಸುಗಳನ್ನು ಸರ್ಕಾರ ಯಾವ ಅವಧಿಯೊಳಗೆ ಜಾರಿಗೊಳಿಸಲು ಉದ್ದೇಶಿಸಿದೆ ;

(ಆ) ಕೃಷಿ, ತೋಟಗಾರಿಕೆ. ಕೃಷಿ ಮಾರುಕಟ್ಟೆ. ಜಲಾನಯನ ಅಭಿವೃದ್ಧಿ ಹಾಗೂ ಸಂಬಂಧಿತ ಇಲಾಖೆಗಳ ನಡುವೆ ಸಮನ್ವಯ ಸಾಧಿಸಲು 'ಕೃಷಿ ಕ್ಯಾಬಿನೆಟ್' ಕೃಷಿ ವಲಯದಲ್ಲಿ ಸಂಶೋಧನೆ ಮತ್ತು ಉನ್ನತ ಶಿಕ್ಷಣವನ್ನು ಬಲಪಡಿಸಲು ಕರ್ನಾಟಕ ಕೃಷಿ ಸಂಶೋಧನೆ ಮತ್ತು ಅಭಿವೃದ್ಧಿ ಉನ್ನತ ಪರಿಷತ್ ರೈತರ ಆದಾಯ ಹೆಚ್ಚಿಸಲು

'ರೈತ ಆದಾಯ ಆಯೋಗ' ಕೃಷಿ ಭೂಮಿಯ ಸಂರಕ್ಷಣೆ ಮತ್ತು ಸದ್ಬಳಕೆಗೆ ಕೃಷಿ ಭೂಮಿ ಸದ್ಬಳಕೆ ಮಂಡಳಿ ಇತ್ಯಾದಿಗಳನ್ನು ರಚಿಸುವ ಬಗ್ಗೆ ಆಯೋಗ ನೀಡಿರುವ ಶಿಫಾರಸ್ಸನ್ನು ಅನುಷ್ಠಾನಿಸುವ ಬಗ್ಗೆ ಸರ್ಕಾರದ ನಿಲುವೇನು ; ಇವುಗಳ ರಚನೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ;

(ಇ) ಜಿಲ್ಲಾವಾರು ಬೆಳೆ ವಿಮೆ ಯೋಜನೆ ಜಾರಿ ಹಾಗೂ ಸಮಗ್ರ ಭೂಸ್ವಾಧೀನ ನೀತಿ ರೂಪಿಸುವ ಕುರಿತು ಸರ್ಕಾರದ ನಿಲುವೇನು ; ಒಣಭೂಮಿ ಕೃಷಿ, ಕೃಷಿ ನವೋದ್ಯಮ ಮತ್ತು ಕೃಷಿ ಅರಣ್ಯ (Agro-forestry) ವಿಸ್ತರಣೆಗಾಗಿ ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು ;

(ಈ) ಕರಾವಳಿ ಜಿಲ್ಲೆಗಳಲ್ಲಿ ಕುಸಿಯುತ್ತಿರುವ ಭತ್ತದ ಕೃಷಿಯನ್ನು ಉತ್ತೇಜಿಸಿ ಯುವಜನರನ್ನು ಪ್ರೋತ್ಸಹಿಸಲು, ಕೃಷಿಯ ವಿಸ್ತರಣೆ ಹಾಗೂ ವೈವಿಧ್ಯಕರಣ ಮಾಡವ ಬಗ್ಗೆ ಇಲಾಖೆಯ ಕಾಲ ಮಿತಿಯ ಕ್ರಮಗಳೇನು ;

(ಉ) ರೈತರ ಆದಾಯ ಹೆಚ್ಚಿಸಲು ಯುವಕರು ಮತ್ತು ಮಹಿಳೆಯರನ್ನು ಕೃಷಿ ವಲಯಕ್ಕೆ ಆಕರ್ಷಿಸುವ ಉದ್ದೇಶದಿಂದ ಕೇರಳದ Kudumbashree ಮಾದರಿಯಲ್ಲಿ ಮಹಿಳಾ ಸ್ವಸಹಾಯ ಗುಂಪುಗಳನ್ನು ಕೃಷಿ ಚಟುವಟಿಕೆಗಳಲ್ಲಿ ಹೆಚ್ಚು ತೊಡಗಿಸುವ ಕುರಿತು ಸರ್ಕಾರದ ಯೋಜನೆಗಳೇನು ?

## ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳು ಮತ್ತು ಅನುದಾನದ ಕುರಿತು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೧೭ (೨೩೩೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪ್ರಮುಖ ಯೋಜನೆಗಳ (SC/ST)

ವಿದ್ಯಾರ್ಥಿವೇತನ, ಉದ್ಯೋಗ ತರಬೇತಿ ಇನ್ನಿತರೆ ಪ್ರಯೋಜನೆ ಪಡೆದಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಶಾಲೆಗಳಿಂದ Dropout ಆಗುವ ಸಂಖ್ಯೆಯನ್ನು ಕಡಿಮೆ ಮಾಡಲು ಯಾವ ವಿಶೇಷ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ ; ಮತ್ತು ಕಳೆದ ಮೂರು ವರ್ಷದ Dropout rate ಶೇಕಡವಾರು ನೀಡುವಿರಾ ;

(ಇ) ಕಳೆದ ಮೂರು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರಾದ ಒಟ್ಟು ಅನುದಾನ ಎಷ್ಟು ; ಅದರಲ್ಲಿ ಖರ್ಚಾಗಿರುವ ಅನುದಾನವೆಷ್ಟು ಮತ್ತು ಉಳಿಕೆ ಆಗಿರುವ ಅನುದಾನ ಎಷ್ಟು ? (ವರ್ಷವಾರು ಪ್ರತ್ಯೇಕ ಮಾಹಿತಿ ನೀಡುವುದು)

## ಸೌರಶಕ್ತಿ ಚಾಲಿತ ನೀರಾವರಿ ಮತ್ತು ಕೃಷಿ ನವೋದ್ಯಮಗಳ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೧೮ (೨೩೩೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ನೇ ಸಾಲಿನಲ್ಲಿ ರಾಜ್ಯದ ವಿವಿಧ ಪ್ರದೇಶಗಳಲ್ಲಿ ಬರ ಮತ್ತು ಅತಿಯಾದ ಮಳೆಯ ಅನಿಯಮಿತೆಯನ್ನು ಕಂಡಿದ್ದು, ಉತ್ತರ ಕರ್ನಾಟಕದಲ್ಲಿ ಪ್ರವಾಹ ಮತ್ತು ಮಧ್ಯ ಕರ್ನಾಟಕದಲ್ಲಿ ಬರವನ್ನು ನಿರ್ವಹಿಸಲು ಸರ್ಕಾರ ಯಾವ ರೀತಿ ಯೋಜನೆಗಳನ್ನು ರೈತರಿಗೆ ಅನುಕೂಲವಾಗುವಂತೆ ರೂಪಿಸಿಕೊಂಡಿದೆ ;

(ಆ) ಯಾದಗಿರಿಯಂತಹ ಜಿಲ್ಲೆಗಳಲ್ಲಿ ವಿದ್ಯುತ್ ಕೊರತೆ ಮತ್ತು ಪಂಪ್‌ಸೆಟ್‌ಗಳಿಗೆ ಹೆಚ್ಚುತ್ತಿರುವ ಡೀಸೆಲ್ ವೆಚ್ಚವನ್ನು ನೀಗಿಸಲು, ಸೌರಶಕ್ತಿ ಚಾಲಿತ ನೀರಾವರಿಯನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮ ಮತ್ತು ಯೋಜನೆಗಳೇನು ;

(ಇ) ರಾಷ್ಟ್ರೀಯ ಮಟ್ಟದಲ್ಲಿ ರಸಗೊಬ್ಬರ ಸಬ್ಸಿಡಿಯನ್ನು ೩,೪೦೦ ಕೋಟಿ ರೂ.ಗಳಿಗೂ ಹೆಚ್ಚು ಕಡಿತಗೊಳಿಸಿದ್ದು, ಸಣ್ಣ ರೈತರಿಗೆ ಗುಣಮಟ್ಟದ ಬೀಜಗಳು, ಜೈವಿಕ ಗೊಬ್ಬರ ಮತ್ತು ಕೀಟನಾಶಕಗಳು ಕೈಗೆಟಕುವ ದರದಲ್ಲಿ ಲಭ್ಯವಾಗುವಂತೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳ ಏನು ;

(ಈ) ಕರ್ನಾಟಕದಲ್ಲಿ ಶೇ. ೨೦ ರಷ್ಟು ಕೃಷಿ-ನವೋದ್ಯಮಗಳು ವಿಫಲವಗುತ್ತಿರುವುದರಿಂದ, ಅವುಗಳನ್ನು ಬೆಂಬಲಿಸಲು ವರ್ಧಿತ ಬೀಜ ನಿಧಿ (Enhanced Seed Funding) ಅಥವಾ ಮಾರುಕಟ್ಟೆ ಮಾರ್ಗದರ್ಶನದಂತಹ ಯಾವ ಹೊಸ ಕ್ರಮಗಳನ್ನು ಈ ವರ್ಷ ಪರಿಚಯಿಸಲಾಗುವುದು ?

## ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯಿಂದ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೧೯ (೨೩೪೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೩೦ರ ವೇಳೆಗೆ ರಾಜ್ಯವು ೧ ಟ್ರಿಲಿಯನ್ ಡಾಲರ್ ಆರ್ಥಿಕತೆಯ ಗುರಿಯನ್ನು ಹೊಂದಿದೆ ಎಂದು ವಿವಿಧ ಮಾಧ್ಯಮಗಳಿಂದ

ತಿಳಿದುಬಂದಿದ್ದು, ೨೦೨೬-೨೭ಕ್ಕೆ ಸರ್ಕಾರ ಯಾವ ವಲಯ-ನಿರ್ದಿಷ್ಟ (Sector-Specific) ಮೈಲಿಗಲ್ಲುಗಳನ್ನು ರೂಪಿಸಿಕೊಂಡಿದೆ; ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ನಡೆದ ಆರ್ಥಿಕ ಸಮೀಕ್ಷೆ ಪ್ರಕಾರ ಯಾವ ವಲಯಗಳು ಕಳಪೆ ಪ್ರದರ್ಶನ ನೀಡುತ್ತಿವೆ ;

(ಆ) ೧೮೦೦ ಕ್ಕಿಂತ ಹೆಚ್ಚು ಯೋಜನೆಗಳಿಗೆ ಮಧ್ಯ-ವರ್ಷದಲ್ಲಿ ತಿದ್ದುಪಡಿಗಳನ್ನು ಮಾಡಲು 'ಅವಲೋಕನ' ವೇದಿಕೆಯಿಂದ ಡೇಟಾವನ್ನು ಹೇಗೆ ಮೇಲ್ವಿಚಾರಣೆಯನ್ನು ಸರ್ಕಾರದಿಂದ ಮಾಡಲಾಗುತ್ತಿದೆ ಈ ವೇದಿಕೆಯಲ್ಲಿ ತೋರಿಸಿರುವ ಕಳಪೆ ಕಾರ್ಯಕ್ಷಮತೆಯಿಂದಾಗಿ ಸ್ಥಗಿತಗೊಂಡ ಯೋಜನೆಗಳ ಕುರಿತು ಸರ್ಕಾರ ಮಾಹಿತಿ ನೀಡುವುದು ;

(ಇ) ಕಳೆದ ಹಣಕಾಸು ವರ್ಷದಲ್ಲಿ ಸರ್ಕಾರಿ ಉಪಕ್ರಮಗಳಿಗಾಗಿ 'ಆಕಾಂಕ್ಷಾ' ಪೋರ್ಟಲ್ ಮೂಲಕ ವಾಸ್ತವವಾಗಿ ಸಂಗ್ರಹಿಸಲಾದ ಒಟ್ಟು ಸಿಎಸ್‌ಆರ್ ನಿಧಿ ಎಷ್ಟು ? (ಮಾಹಿತಿ ನೀಡುವುದು)

## ಮಕ್ಕಳ ಸುರಕ್ಷತೆ ಮತ್ತು ಮಹಿಳಾ ಉದ್ಯಮಿಗಳಿಗೆ ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೨೦ (೨೩೪೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಆನ್ ಲೈನ್ (ಡಿಜಿಟಲ್) ಬೆದರಿಕೆಗಳ ಹಿನ್ನಲೆಯಲ್ಲಿ, ಮಕ್ಕಳ ರಕ್ಷಣಾ ಸೇವೆಗಳನ್ನು ಬಲಪಡಿಸಲು ಮತ್ತು

ಮಕ್ಕಳಿಗೆ ಇಂಟರ್‌ನೆಟ್ ಸುರಕ್ಷತೆಯ ಕುರಿತು ಉತ್ತೇಜಿಸಲು ಸರ್ಕಾರ ಯಾವ ಹೊಸ ಕ್ರಮಗಳನ್ನು ಕೈಗೊಂಡಿದೆ ;

(ಆ) ಇತ್ತೀಚಿನ ದಿನಗಳಲ್ಲಿ ಶಾಲೆಗೆ ಹೋಗುವ ಮಕ್ಕಳಲ್ಲಿ ಮೊಬೈಲ್ ಮತ್ತು ಇಂಟರ್‌ನೆಟ್ ಬಳಕೆ ಹೆಚ್ಚಾಗುತ್ತಿದ್ದು, ಇದರಿದಾಗಿ ಕಣ್ಣು ಸಮಸ್ಯೆ ಆಗುವುದಲ್ಲದೇ ಆರೋಗ್ಯದಲ್ಲೂ ಸಹ ಸಮಸ್ಯೆಗಳು ಉಂಟಾಗುತ್ತಿರುವುದರಿಂದ ಸರ್ಕಾರದ ವತಿಯಿಂದ ಶಾಲೆಗಳಲ್ಲಿ ಸಂಪೂರ್ಣವಾಗಿ ಮೊಬೈಲ್ ನಿಷೇಧ ಕಾನೂನು ಜಾರಿಗೆ ತರಲು ಯೋಜಿಸಿದೆಯೇ ; ಇದ್ದಲ್ಲಿ, ಯಾವಾಗ ಈ ಕಾನೂನು ಜಾರಿಗೆ ಬರುವುದು ; ಮಾಹಿತಿ ನೀಡುವುದು ;

(ಇ) ಮಹಿಳಾ ಉದ್ಯಮಿಗಳಿಗೆ, ವಿಶೇಷವಾಗಿ ಗ್ರಾಮೀಣ, ಸ್ವಸಹಾಯ ಗುಂಪು ವಲಯಗಳಲ್ಲಿ ಆರ್ಥಿಕ ನೆರವು, ತರಬೇತಿ ಮತ್ತು ಮಾರುಕಟ್ಟೆ ಪ್ರವೇಶವನ್ನು ಒದಗಿಸಲು "ಉದ್ಯೋಗಿನಿ" ಯೋಜನೆಯಡಿಯಲ್ಲಿ ಯಾವ ಹೊಸ/ವಿಸ್ತರಿಸಬಹುದಾದ ಯೋಜನೆಗಳನ್ನು ಸರ್ಕಾರದ ವತಿಯಿಂದ ಪರಿಚಯಿಸಲಾಗುವುದು ?

## ಕರ್ನಾಟಕದ ಗಿಗ್ ಕಾರ್ಮಿಕರಿಗೆ ಪ್ರಯೋಜನಗಳು ಮತ್ತು ಕಲ್ಯಾಣ ಯೋಜನೆಗಳು

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೨೧ (೨೪೬೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪ್ಲಾಟ್ ಫಾರ್ಮ್ ಆಧಾರಿತ ಗಿಗ್ ವರ್ಕರ್ಸ್ (ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ಕಾಯ್ದೆ, ೨೦೨೫ ಜಾರಿಗೆ

ಬಂದ ನಂತರ ೨೦೨೬-೨೦೨೭ ಕ್ಕೆ ಹೊಸದಾಗಿ ಸ್ಥಾಪಿಸಲಾದ ಗಿಗ್ ವರ್ಕರ್ಸ್ ವೆಲ್ ಫೇರ್ ಬೋರ್ಡ್‌ಗೆ ಯಾವ ನಿರ್ದಿಷ್ಟ ಬಜೆಟ್ ಹಂಚಿಕೆಯನ್ನು ಮಾಡಲಾಗುತ್ತಿದೆ ;

(ಆ) ಡಿಜಿಟಲ್ ಸಂಗ್ರಾಹಕರಿಂದ (ಉದಾ. ಸ್ವಿಗ್ಗಿ, ಜೊಮಾಟೊ, ಓಲಾ, ಊಬರ್) ೧% ರಿಂದ ೫% ಗಿಗ್ ವರ್ಕರ್ ವೆಲ್ಫೇರ್ ಶುಲ್ಕವನ್ನು ಸಕಾಲಿಕವಾಗಿ ಸಂಗ್ರಹಿಸುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಹೇಗೆ ಯೋಜಿಸಿದೆ ; ರಾಜ್ಯ ಪೋರ್ಟಲ್‌ನಲ್ಲಿ ನೋಂದಾಯಿಸಲಾದ ಒಟ್ಟು ಗಿಗ್ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಸಣ್ಣ ಸಂಸ್ಥೆಗಳ ಉದ್ಯೋಗದಾತರು LWF (ಕಾರ್ಮಿಕ ಕಲ್ಯಾಣ ನಿಧಿ) ಕೊಡುಗೆಗಳಿಗಾಗಿ ಹೊಸ ಕಡ್ಡಾಯ ಡಿಜಿಟಲ್ ಪಾವತಿ ವಿಧಾನಗಳನ್ನು (UPI, NEFT, RTGS) ಅನುಸರಿಸುತ್ತಾರೆ ಎಂದು ಖಚಿತಪಡಿಸಿಕೊಳ್ಳಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ;

(ಈ) LWF ಕೊಡುಗೆಗಳ ಹೆಚ್ಚಳದೊಂದಿಗೆ (೧೦೦-೨೦೦), ೨೦೨೬ರಲ್ಲಿ ಕಾರ್ಮಿಕರಿಗೆ ಯಾವ ಹೊಸ ಕಲ್ಯಾಣ ಪ್ರಯೋಜನೆಗಳನ್ನು (ಶೈಕ್ಷಣಿಕ ನೆರವು, ಮಾತೃತ್ವ, ವೈದ್ಯಕೀಯ) ಪರಿಚಯಿಸಲಾಗುತ್ತಿದೆ ?

## ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೨೧೨೨ (೨೪೫೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೂಡಲ ಸಂಗಮ ಅಭಿವೃದ್ಧಿ ಮಂಡಳಿಯು ಎಷ್ಟು ಜಮೀನು ಹೊಂದಿದೆ ; ಈಗ ಅದರಲ್ಲಿ ಯಾವ ಯಾವ ಯೋಜನೆಗೆ ಎಷ್ಟು ಜಮೀನು ಉಪಯೋಗಿಸಲಾಗಿದೆ ;

(ಆ) ಬಸವ ಅಂತರಾಷ್ಟ್ರೀಯ ಮ್ಯೂಸಿಯಂ ನಿರ್ಮಾಣ ಮಾಡಲು ಶ್ರೀ ಸಿದ್ದೇಶ್ವರ ಸ್ವಾಮೀಜಿಗಳ ಅಧ್ಯಕ್ಷತೆಯಲ್ಲಿ ಯಾವ ವರ್ಷ ಸಭೆ ಕರೆಯಲಾಗಿತ್ತು ; ಈ ಬಗ್ಗೆ ಕ್ರಮ ತೆಗೆದುಕೊಂಡ ವಿವರವನ್ನು ನೀಡುವುದು ;

(ಇ) ಕೂಡಲ ಸಂಗಮದಲ್ಲಿ ಬಸವ ಅಂತರಾಷ್ಟ್ರೀಯ ಮ್ಯೂಸಿಯಂ ನಿರ್ಮಾಣದ ಕಾಮಗಾರಿ ಈಗ ಯಾವ ಹಂತದಲ್ಲಿದೆ ; ಈ ಕಾಮಗಾರಿಯು ಸಂಪೂರ್ಣವಾಗಿ ಸ್ಥಗಿತವಾಗಿದ್ದರೆ, ಕಾರಣ ಸಮೇತ ವಿವರ ನೀಡುವುದು ;

(ಈ) ಈ ಕಾಮಗಾರಿಗೆ ಇಲ್ಲಿಯವರೆಗೆ ಎಷ್ಟು ಅನುದಾನ ಯಾವ ಯಾವ ವರ್ಷದಲ್ಲಿ ಬಿಡುಗಡೆಯಾಗಿರುತ್ತದೆ ; ಇದರಲ್ಲಿ, ಬಳಕೆಯಾದ ಹಣ ಎಷ್ಟು ; ಉಳಿದ ಹಣ ಎಷ್ಟು ;

(ಉ) ಬಸವ ಅಂತರಾಷ್ಟ್ರೀಯ ಮ್ಯೂಸಿಯಂ ನಿರ್ಮಾಣ ಮಾಡಲು ಎಷ್ಟು ಅನುದಾನದ ಅವಶ್ಯಕತೆಯಿದೆ ; ಈ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಸ್ತುತ ಯಾವ ಹಂತದಲ್ಲಿದೆ ;

(ಊ) ಬಸವ ಅಂತರಾಷ್ಟ್ರೀಯ ಮ್ಯೂಸಿಯಂ ನಿರ್ಮಾಣ ಮಾಡುವ ಕಾಮಗಾರಿಯನ್ನು ಯಾವ ತಜ್ಞರಿಂದ ವರದಿ ಪಡೆಯಲಾಗಿದೆ ; ಅದು ಯಾವ ಹಂತದಲ್ಲಿದೆ ; ಈ ಬಗ್ಗೆ ಯಾವ ಕ್ರಮವಹಿಸಲಾಗಿದೆ ? (ವಿವರವಾಗಿ ವರದಿ ನೀಡುವುದು)

## ಕ್ರೈಸ್‌ನಿಂದ ಖರೀದಿಸಿರುವ ಪುಸ್ತಕಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೧೨೩ (೨೪೫೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್ ನಿಂದ ೨೦೧೫ ರಿಂದ ನೋಟ್ ಪುಸ್ತಕ ಮತ್ತು ಪಠ್ಯಪುಸ್ತಕಗಳನ್ನು ಹೊರತುಪಡಿಸಿ ಯಾವ ಯಾವ ಪುಸ್ತಕಗಳನ್ನು ಖರೀದಿಸಲಾಗಿದೆ ; ಯಾವ ವರ್ಷದಲ್ಲಿ ಖರೀದಿಸಲಾಗಿದೆ ಸಂಬಂದಿಸಿದ ಆದೇಶದ ಪ್ರತಿಗಳನ್ನು ಒದಗಿಸುವುದು ;

(ಆ) ಕೆರಿಯರ್ ಗೈಡೆನ್ಸ್ ಪುಸ್ತಕವನ್ನು ಎಷ್ಟು ಮೊತ್ತಕ್ಕೆ ಖರೀದಿಸಲಾಗಿದೆ ;

(ಇ) ಹಲವಾರು ವಸತಿ ಶಾಲೆಗಳಲ್ಲಿ ಬಿಸಿ ನೀರು ಕುಡಿಯುವ ನೀರು ಮತ್ತು ಇತ್ಯಾದಿ ಮೂಲಭೂತ ಸೌಲಭ್ಯಗಳ ಕೊರತೆ ಇರುವಾಗ ಕ್ರೈಸ್ ನಿಂದ ಅನಗತ್ಯ ಖರ್ಚು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕ್ರೈಸ್ ಸಂಸ್ಥೆಯಿಂದ ಸಾಫ್ಟ್‌ವೇರ್ ಖರೀದಿಸಿರುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೨೧೨೪ (೨೪೫೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್ ಸಂಸ್ಥೆಯಿಂದ ಯಾವ ಸಾಫ್ಟ್‌ವೇರ್ (ತಂತ್ರಾಂಶ) ಯಾವ ಕಂಪನಿಯಿಂದ ಖರೀದಿಸಲಾಗಿದೆ ;

(ಆ) ಯಾವ ಸಾಫ್ಟ್‌ವೇರ್ ಅನ್ನು ಎಷ್ಟು ಮೊತ್ತಕ್ಕೆ ಖರೀದಿಸಲಾಗಿದೆ ; ಯಾವಾಗ ಖರೀದಿಸಲಾಗಿದೆ ; ಯಾವ ಉದ್ದೇಶಕ್ಕಾಗಿ ಯಾವ

ಸಾಫ್ಟ್‌ವೇರ್ ಖರೀದಿಸಲಾಗಿದೆ ; ಸರ್ಕಾರಿ ಆದೇಶದ ಸಂಖ್ಯೆ ಮತ್ತು ಪ್ರತಿಗಳನ್ನು ಒದಗಿಸುವುದು ;

(ಇ) ಖಾಸಗಿ ಕಂಪನಿಗಳಿಂದ ಸಾಫ್ಟ್‌ವೇರ್ ಖರೀದಿಸಿರುವ ಅಗತ್ಯವೇನಿದೆ ?

## ಬಾಗಲಕೋಟೆಯಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯ ಕೇಂದ್ರ ಕಛೇರಿಯನ್ನು ಸ್ಥಾಪಿಸಿ ಪೂರ್ಣ ಪ್ರಮಾಣ ಸಿಬ್ಬಂದಿಗಳನ್ನು ನಿಯೋಜನೆ ಮಾಡದೆ ಇರುವ ಕುರಿತು

**ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೨೫ (೨೩೫೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಉತ್ತರ ಕರ್ನಾಟಕದ ಭಾಗದಲ್ಲಿ ದೊಡ್ಡಾಟ ಮತ್ತು ಸಣ್ಣಾಟ, ಸುತ್ತುಗೊಂಬೆ ಹಾಗೂ ತೊಗಲುಗೊಂಬೆಯಂತಹ ಜನಪದ ಕಲೆಗಳಲ್ಲಿ ತೊಡಗಿಸಿಕೊಂಡ ಕಲಾವಿದರ ಅನುಕೂಲದ ದೃಷ್ಟಿಯಿಂದ ಕರ್ನಾಟಕ ಬಯಲಾಟ ಅಕಾಡೆಮಿಯನ್ನು ಬಾಗಲಕೋಟೆಯಲ್ಲಿ ಸ್ಥಾಪಿಸಲು ತೀರ್ಮಾನಿಸಲಾಗಿದ್ದು ಆದರೆ ಇಲ್ಲಿಯವರೆಗೂ ಸದರಿ ಅಕಾಡೆಮಿಗೆ ಸ್ವಂತ ಕಛೇರಿ ಗುರುತಿಸದೇ ಅಧಿಕಾರಿಗಳು, ಸಿಬ್ಬಂದಿಗಳನ್ನು ನೇಮಿಸದೇ ಇರುವ ಕಾರಣದಿಂದಾಗಿ ಕಲಾವಿದರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಪರದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಾಗಲಕೋಟೆಯಲ್ಲಿ ಕರ್ನಾಟಕ ಬಯಲಾಟ ಅಕಾಡೆಮಿಯ ಕೇಂದ್ರ ಕಛೇರಿಯನ್ನು ಸ್ಥಾಪಿಸಿ, ಪೂರ್ಣ ಪ್ರಮಾಣ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದೇ ; ನಿಯೋಜಿಸಲು ಯಾವಾಗ ಕ್ರಮಕೈಗೊಳ್ಳಲಾಗುವುದು ?

## ರಾಜ್ಯದ ದೇವದಾಸಿಯರ ಮಕ್ಕಳ ವಿವಾಹಕ್ಕೆ ಸರ್ಕಾರದ ಪ್ರೋತ್ಸಾಹ ಧನಕ್ಕಾಗಿ ಪರದಾಡುತ್ತಿರುವ ಕುರಿತು

**ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೨೬ (೨೩೫೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಗುರುತಿಸಲ್ಪಟ್ಟ ದೇವದಾಸಿಯರ ಮಕ್ಕಳ ವಿವಾಹಕ್ಕೆ ಸರ್ಕಾರ ಪ್ರೋತ್ಸಾಹ ಧನ ನೀಡುತ್ತಾ ಬಂದಿದ್ದು, ಪ್ರಸ್ತುತ ಇರುವ ದೇವದಾಸಿಯರ ಸಂಖ್ಯೆ ಎಷ್ಟು ; ಮಾಹಿತಿಯನ್ನು ಜಿಲ್ಲಾವಾರು ನೀಡುವುದು ;

(ಆ) ಆದರೆ ಸರ್ಕಾರಕ್ಕೆ ಜಿಲ್ಲಾ ಕಛೇರಿಯಿಂದ ಬೇಡಿಕೆಯ ಅನುಗುಣವಾಗಿ ಪ್ರೋತ್ಸಾಹ ಧನ ಬಿಡುಗಡೆ ಮಾಡಲು ಕೋರಿದ್ದರೂ ಪ್ರೋತ್ಸಾಹ ಧನ ಬಿಡುಗಡೆಯಾಗದೆ ವಿವಾಹವಾದ ದೇವದಾಸಿಯರ ಮಕ್ಕಳು ಪ್ರೋತ್ಸಾಹ ಧನವನ್ನು ಪಡೆಯಲು ತಾಲ್ಲೂಕು ಕಛೇರಿಗಳಿಗೆ ಹಾಗೂ ಜಿಲ್ಲಾ ಕಛೇರಿಗಳಿಗೆ ಅಲೆದಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಅರ್ಜಿ ಸಲ್ಲಿಸಿದ ಫಲಾನುಭವಿಗಳು ಎಷ್ಟು ; ಬಿಡುಗಡೆಯಾದ ಪ್ರೋತ್ಸಾಹ ಧನದ ಮೊತ್ತವೆಷ್ಟು ; ಬಿಡುಗಡೆಗೆ ಬಾಕಿ ಇರುವ ಮೊತ್ತವೆಷ್ಟು ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಬಾಗಲಕೋಟೆ ಜಿಲ್ಲೆಯ ಫಲಾನುಭವಿಗಳ ಸಂಖ್ಯೆ ಎಷ್ಟು ; ಬೇಡಿಕೆ ಸಲ್ಲಿಸಿದ ಅನುದಾನದ ಮೊತ್ತವೆಷ್ಟು ; ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; ಬಿಡುಗಡೆಗೆ ಬಾಕಿ ಇರುವ ಅನುದಾನದ ಮೊತ್ತವೆಷ್ಟು ? (ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು)

## ಮಕ್ಕಳು ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗುತ್ತಿರುವ ಆಘಾತಕಾರಿ ಹಾಗೂ ಆತಂಕ ತಡೆಗಟ್ಟುವ ಬಗ್ಗೆ

**ಶ್ರೀ ಪಿ.ಹೆಚ್ ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೨೭ (೨೩೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ಆರು ಮಕ್ಕಳಲ್ಲಿ ಓರ್ವ ಮಗು ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗುತ್ತಿರುವ ಆಘಾತಕಾರಿ ಅಂಶ ಪಾಲಕರ ಆತಂಕ ಮತ್ತು ಕಳವಳಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಮಕ್ಕಳು ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆಗೆ ಒಳಗಾಗಿರುವ ಎಷ್ಟು ಪ್ರಕರಣಗಳು ವರದಿಯಾಗಿವೆ ; ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಹೆಚ್ಚಾದ ಡಿಜಿಟಲ್ ತೊಡಗಿಸಿಕೊಳ್ಳುವಿಕೆ ಮಕ್ಕಳನ್ನು ಲೈಂಗಿಕ ಶೋಷಣೆ ಮತ್ತು ನಿಂದನೆ ಸೇರಿ ಗಮನಾರ್ಹ ಅಪಾಯಗಳಿಗೆ ಒಡ್ಡುತ್ತಿದ್ದು, ಮಕ್ಕಳನ್ನು ಹಾನಿಯಿಂದ ರಕ್ಷಿಸುವ ನಿಟ್ಟಿನಲ್ಲಿ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಮಕ್ಕಳು ಬಳಸುವ ಮೊಬೈಲ್‌ಗಳಲ್ಲಿ ಅಸುರಕ್ಷಿತ, ಅಶ್ಲೀಲ APP ಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲೇಬೇಕಾದ ತುರ್ತು ಅನಿವಾರ್ಯತೆ ಸೃಷ್ಟಿಯಾಗಿದ್ದು, ಈ ಕುರಿತು ಸರ್ಕಾರ ವಹಿಸಲಿರುವ ಕ್ರಮಗಳೇನು ;

(ಉ) ಮಕ್ಕಳ ಆನ್‌ಲೈನ್ ಗೇಮ್‌ಗಳ ಮೂಲಕ ಶೋಷಣೆ ತಡೆಗೆ ಕಾರ್ಯಪಡೆ ರಚನೆ, ಮಕ್ಕಳ ಸುರಕ್ಷತೆಯನ್ನು ಆನ್‌ಲೈನ್‌ನಲ್ಲಿ ಖಚಿತಪಡಿಸಿಕೊಳ್ಳಲು ಜಾಗೃತಿ ಮೂಡಿಸುವುದು, ಡಿಜಿಟಲ್ ಸಾಕ್ಷರತೆ ಸೇರಿದಂತೆ ಮಕ್ಕಳಿಗೆ ಅತ್ಯಂತ ಸುರಕ್ಷಿತ ಡಿಜಿಟಲ್ ಪರಿಸರವನ್ನು ಸೃಷ್ಟಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಅಗತ್ಯ ಹಾಗೂ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವುದು ?

## ಧಾರವಾಡ ನಗರ ಪ್ರದೇಶಕ್ಕೆ ಕಾರ್ಮಿಕ ಇಲಾಖೆಯಡಿ ಬಿಡುಗಡೆ ಮಾಡಲಾಗಿರುವ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೨೮ (೨೩೨೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಮಿಕ ಕಾರ್ಡ್ ಹೊಂದಿರುವ ಫಲಾನುಭವಿಗಳಿಗೆ ಕಾರ್ಮಿಕ ಇಲಾಖೆಯಿಂದ ನೀಡಲಾಗುತ್ತಿರುವ ಸೌಲಭ್ಯಗಳೇನು ಹಾಗೂ ಸೌಲಭ್ಯ ಪಡೆಯಲು ಬೇಕಾದ ಮಾನದಂಡಗಳೇನು ;

(ಆ) ಕಳೆದ ಮೂರು ವರ್ಷಗಳಿಂದ ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಕಾರ್ಮಿಕ ಇಲಾಖೆಯಿಂದ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ; ಹಾಗೂ ಸದರಿ ಅನುದಾನವನ್ನು ಯಾವ ಕಾರಣಕ್ಕಾಗಿ ವಿನಿಯೋಗಿಸಲಾಗುತ್ತಿದೆ ?

# ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಅಂಗನವಾಡಿ ಕೇಂದ್ರಗಳ ಮಂಜೂರಾತಿ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೨೯ (೨೩೨೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಎಲ್ಲೆಲ್ಲಿ, ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು ;

(ಆ) ಈ ಕೇಂದ್ರಗಳಿಗೆ ಮಂಜೂರಾದ ಅಂಗನವಾಡಿ ಶಿಕ್ಷಕಿ, ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳೆಷ್ಟು ; ಹಾಲಿ ಹುದ್ದೆವಾರು ಕರ್ತವ್ಯ ನಿರ್ವಹಿಸುತ್ತಿರುವವರು ಎಷ್ಟು ; ಹುದ್ದೆವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು ;

(ಇ) ಕಳೆದ ಮೂರು ವರ್ಷಗಳಿಂದ ಈ ಜಿಲ್ಲೆಗಳಿಗೆ ಈವರೆಗೆ ಯಾವ ಯಾವ ಹೊಸ ಅಂಗನವಾಡಿ ಕೇಂದ್ರಗಳಿಗೆ ಮಂಜೂರಾತಿ ನೀಡಿದೆ ; (ಜಿಲ್ಲಾವಾರು, ವರ್ಷವಾರು ಪೂರ್ಣ ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಈ ಜಿಲ್ಲೆಗಳಿಗೆ ಹೊಸ ಕೇಂದ್ರಗಳ ಸ್ಥಾಪನೆ ಕೋರಿ ಯಾವ ಸ್ಥಳಗಳಿಗೆ ಪ್ರಸ್ತಾವನೆಯು ಸರ್ಕಾರಕ್ಕೆ ಸಲ್ಲಿಕೆಯಾಗಿವೆ ; ಇವುಗಳಲ್ಲಿ ಬಾಕಿ ಇರುವ ಪ್ರಸ್ತಾವನೆಗೆ ಯಾವ ಕಾಲಮಿತಿಯೊಳಗೆ ಮಂಜೂರಾತಿ ನೀಡಲಾಗುವುದು ? (ವಿವರ ನೀಡುವುದು)

## ಹುಬ್ಬಳ್ಳಿ-ಧಾರವಾಡ ನಗರಕ್ಕೆ ತಂದಿರುವ ಐಟಿ-ಬಿಟಿ ಕಂಪನಿಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩೦ (೨೩೨೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿ-ಧಾರವಾಡ ನಗರ ಪ್ರದೇಶದಲ್ಲಿರುವ ಐಟಿ-ಬಿಟಿ ಕಂಪನಿಗಳೆಷ್ಟು ;

(ಆ) ಕಳೆದ ಮೂರು ವರ್ಷದಿಂದ ಹುಬ್ಬಳ್ಳಿ-ಧಾರವಾಡಕ್ಕೆ ಐಟಿ-ಬಿಟಿ ಇಲಾಖೆಯಡಿ ಬರುವ Karnatka Digital Economy Mission ಹಾಗೂ Beyond Bengaluru Initiative ಯೋಜನೆಯಡಿ ತಂದಿರುವ ಐಟಿ-ಬಿಟಿ ಕಂಪನಿಗಳೆಷ್ಟು ಹಾಗೂ ಅವು ಯಾವುವು ;

(ಇ) ಹಾಗೂ ಸದರಿ ಕಂಪನಿಗಳನ್ನು ಸಬಲೀಕರಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳೇನು ಹಾಗೂ ಸದರಿ ಕಂಪನಿಗಳಿಂದ ಸೃಷ್ಟಿಯಾಗಿರುವ ಉದ್ಯೋಗಗಳೆಷ್ಟು ?

## ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಿಗೆ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೩೧ (೨೩೨೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಿಗೆ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ನೀಡಿರುವ ಬೆಳೆ ಪರಿಹಾರದ ಅನುದಾನ ಎಷ್ಟು ;

(ಆ) ಸದರಿ ಯೋಜನೆಯಡಿ ಎಷ್ಟು ರೈತರಿಗೆ ಬೆಳೆ ಪರಿಹಾರದ ಅನುದಾನ ನೀಡಲಾಗಿದೆ ;

(ಇ) ಹಾಗೂ ನೀಡಲು ಬಾಕಿಯಿರುವ ಅನುದಾನ ಎಷ್ಟು ಮತ್ತು ಬಾಕಿಯಿರುವ ಅನುದಾನ ನೀಡಲು ಕಾರಣವೇನು ?

## ಗ್ರಾಮ ಪಂಚಾಯಿತಿಗಳ ಅಧಿಕಾರ ಹಸ್ತಾಂತರದ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೩೨ (೨೪೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಯಾಗಿ ಉನ್ನತೀಕರಿಸಲು (ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳನ್ನಾಗಿ) ಅಧಿಸೂಚನೆ ಹೊರಡಿಸಿದ ಎಷ್ಟು ದಿನಗಳಲ್ಲಿ ಗ್ರಾಮ ಪಂಚಾಯಿತಿ ಅಧಿಕಾರ ಹಸ್ತಾಂತರ ಮಾಡಬೇಕು ; (ಸುತ್ತೋಲೆ/ಕಾಯ್ದೆಯ ಪ್ರತಿ ನೀಡುವುದು)

(ಆ) ಹಲವು ಗ್ರಾಮ ಪಂಚಾಯಿತಿಗಳು ಅಧಿಸೂಚನೆ ಹೊರಡಿಸಿದ ನಂತರ ನಾಗರಿಕರಿಗೆ ಯಾವ ಸೇವೆಗಳನ್ನು ನೀಡಬಹುದು ಮತ್ತು ಯಾವ ಸೇವೆಗಳನ್ನು ನೀಡಲು ಅವಕಾಶವಿರುವುದಿಲ್ಲ ;

(ಇ) ಅಧಿಸೂಚನೆ ಹೊರಡಿಸಿ ಆರು ತಿಂಗಳುಗಳೇ ಕಳೆದರೂ ಹಲವು ಗ್ರಾಮ ಪಂಚಾಯಿತಿಗಳು ಅಧಿಕಾರ ಹಸ್ತಾಂತರ ಮಾಡದೆ ಇರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗುವುದಿಲ್ಲವೇ ; ಇದರ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಈ) ಈ ಕೆಳಗಿನ ಪಟ್ಟಣ ಪಂಚಾಯಿತಿಗಳು ಯಾವ ಗ್ರಾಮ ಪಂಚಾಯಿತಿಗಳನ್ನು ಸೇರಿ ರಚಿಸಲಾಯಿತು, ಈ ಕೆಳಗೆ ತಿಳಿಸಿದ ದಿನಾಂಕಗಳ ನಂತರ ಗ್ರಾಮ ಪಂಚಾಯಿತಿಗಳಿಂದ ವಿತರಿಸಿದ ಇ-ಖಾತಾಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

| ಜಿಲ್ಲೆ | ಪಟ್ಟಣ ಪಂಚಾಯಿತಿಗಳು |
|---|---|
| ಅ. ಮೈಸೂರು | ರಾಮನಹಳ್ಳಿ, ಕಡಕೊಳ ದಿನಾಂಕ :೨೬.೦೩.೨೦೨೧ ರ ನಂತರ ವಿತರಿಸಿದ ಇ-ಖಾತಾಗಳು. |
| ಆ. ಬೆಳಗಾವಿ | ಕಾಗವಾಡ, ಯರಗಟ್ಟಿ ದಿನಾಂಕ : ೧೯.೦೨.೨೦೨೧ರ ನಂತರ ವಿತರಿಸಿದ ಇ-ಖಾತಾಗಳ ವಿವರ. |
| ಇ. ಬೆಳಗಾವಿ | ಮಚ್ಚೆ, ಪೀರನವಾಡಿ ದಿನಾಂಕ : ೨೬.೦೩.೨೦೨೧ ರ ನಂತರ ವಿತರಿಸಿದ ಇ-ಖಾತಾಗಳ ವಿವರ. |
| ಈ. ಹಾಸನ | ಬಾಣಾವರ ದಿನಾಂಕ : ೩೦.೦೬.೨೦೨೫ ರ ನಂತರ ವಿತರಿಸಿದ ಇ-ಖಾತಾಗಳ ವಿವರ. |

(ಉ) ಹಲವು ಗ್ರಾಮ ಪಂಚಾಯಿತಿಗಳು ಅಧಿಸೂಚನೆ ಹೊರಡಿಸಿದ ನಂತರ ಅಧಿಕಾರ ಹಸ್ತಾಂತರಕ್ಕೆ ಮುನ್ನ ಇ-ಖಾತಾ ವಿತರಿಸಲಾಗಿದ್ದು, ಸದರಿ ಖಾತಾಗಳು ಮಾನ್ಯವೇ ; ಇವುಗಳು ಮಾನ್ಯವಿಲ್ಲದೆ ಇದ್ದರೆ, ಇವುಗಳನ್ನು ರದ್ದು ಮಾಡಲಾಗುವುದೇ ; ರದ್ದು ಮಾಡುವುದಾದರೆ ಅದಕ್ಕೆ ಅನುಸರಿಸುವ ಮಾನದಂಡವೇನು ?

# ಕಾರ್ಮಿಕರಿಗೆ ಸಹಾಯಧನ ಪಡೆಯುವಲ್ಲಿ ಅನ್ಯಾಯವಾಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೩೩ (೨೪೧೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನ ಪರಿಶೀಲನೆಯ ಸಂದರ್ಭದಲ್ಲಿ, ನೈಜ ಕಟ್ಟಡ ಕಾರ್ಮಿಕರಾಗಿದ್ದರೂ ಸಹ ಮಂಡಳಿ ಪರಿಶೀಲಿಸುವ ತಂತ್ರಾಂಶಗಳಿಂದ ಬೇರೆ ವೃತ್ತಿ ಕಂಡು ಬರುವ ಕಾರ್ಮಿಕರ ಮಕ್ಕಳ ಅರ್ಜಿಗಳನ್ನು ಅತಾರ್ತಿಕವಾಗಿ ತಿರಸ್ಕೃತಗೊಳಿಸುತ್ತಿರುವುದರಿಂದ ಹಲವಾರು ನೈಜ ಕಟ್ಟಡ ಕಾರ್ಮಿಕರ ಮಕ್ಕಳು ಸದರಿ ಸೌಲಭ್ಯ ಪಡೆಯುವುದರಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಂಡಳಿ ಪರಿಶೀಲಿಸುವ ತಂತ್ರಾಂಶಗಳಿಂದ ಬೇರೆ ವೃತ್ತಿ ಕಂಡು ಬರುವ ಕಾರ್ಮಿಕರ ಮಕ್ಕಳ ಅರ್ಜಿಯನ್ನು ತಿರಸ್ಕೃತಗೊಳಿಸುವ ಮೊದಲು ಕಾರ್ಮಿಕರ ನೈಜತೆಯ ಮರು ಪರಿಶೀಲನೆಗೆ ಆಯಾಯ ತಾಲ್ಲೂಕಿನ ಕಾರ್ಮಿಕ ಇಲಾಖಾ ಕಛೇರಿಗಳಿಗೆ ಸದರಿ ಅರ್ಜಿಗಳನ್ನು ಕಳುಹಿಸಿ, ಕೂಲಂಕುಷವಾಗಿ ಮರು ಪರಿಶೀಲನೆ ಮಾಡಿ, ನೈಜ ಕಟ್ಟಡ ಕಾರ್ಮಿಕರ ಮಕ್ಕಳು ಸದರಿ ಸೌಲಭ್ಯ ಪಡೆಯುವುದರಿಂದ ವಂಚಿತರಾಗುವುದನ್ನು ತಪ್ಪಿಸಲು ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸಲಾಗುವುದೇ ;

(ಇ) ಮಂಡಳಿಯು ನೂತನವಾಗಿ ಅಭಿವೃದ್ಧಿಪಡಿಸಿದ ತಂತ್ರಾಂಶದಲ್ಲಿ ತಾಂತ್ರಿಕ ದೋಷ ಇದ್ದ ಕಾರಣ, ದಿನಾಂಕ: ೧೭.೧೦.೨೦೨೩

ರಿಂದ ದಿನಾಂಕ: ೧೦.೦೬.೨೦೨೪ ರವರೆಗೆ ಕಾರ್ಮಿಕರಿಗೆ ತಮ್ಮ ಗುರುತಿನ ಚೀಟಿಯು ನವೀಕರಣ ಮಾಡಲು ಸಾಧ್ಯವಾಗಿರುವುದಿಲ್ಲ, ಆ ಕಾರಣದಿಂದಾಗಿ ಹಲವಾರು ಕಾರ್ಮಿಕರು ಮದುವೆಯ ಸಹಾಯಧನ ಸೇರಿದಂತೆ ವಿವಿಧ ಸಹಾಯಧನಗಳಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಲು ಸಾಧ್ಯವಾಗದೆ ಸೌಲಭ್ಯಗಳಿಂದ ವಂಚಿತರಾಗಿದ್ದು, ಆ ಸಂಬಂಧ ಹಲವಾರು ಕಾರ್ಮಿಕರಿಗೆ ಅನ್ಯಾಯವಾಗಿರುವುದನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ವಹಿಸಲಿದೆ ?

## ಸೆಂಟ್ರಲ್ ಐಡಿ ಸೃಷ್ಟಿಸಿಕೊಳ್ಳಲು ಸಮಸ್ಯೆ ಆಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೩೪ (೨೪೧೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ವರ್ ಸಮಸ್ಯೆಯಿಂದಾಗಿ ರಾಜ್ಯದ ರೈತರು ಫ್ರೂಟ್ಸ್ (ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ) ಐಡಿಯಲ್ಲಿ ಸೆಂಟ್ರಲ್ ಐಡಿ ಸೃಷ್ಟಿಸಿಕೊಳ್ಳಲು ಸತತವಾಗಿ ಅಡ್ಡಿ ಉಂಟಾಗುತ್ತಿದ್ದು, ಕಾಲಾವಕಾಶ ಮೊಟಕುಗೊಳಿಸಬಾರದು ಎಂಬ ಆಗ್ರಹ ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಾಂತ್ರಿಕ ಸಮಸ್ಯೆಯಿಂದಾಗಿ ಸೆಂಟ್ರಲ್ ಐಡಿ ಪಡೆಯಲು ಸಮಸ್ಯೆಯಾಗಿದ್ದು, ಗ್ರಾಮ ಒನ್, ರೈತ ಸಂಪರ್ಕ ಕೇಂದ್ರ ಮತ್ತಿತರ ಕಡೆಯಲ್ಲಿ ಸರ್ವರ್ ಸಮಸ್ಯೆಯಿಂದಾಗಿ ರಾಜ್ಯದ ಸಹಸ್ರಾರು ರೈತರು ಇದುವರೆವಿಗೂ ಸೆಂಟ್ರಲ್ ಐಡಿ ಪಡೆಯಲು ಸಾಧ್ಯವಾಗದೆ ಹೈರಾಣಾಗಿದ್ದು ಈ ಕುರಿತು ಸರ್ಕಾರ ಇದುವರೆಗೆ ವಹಿಸಿರುವ ಕ್ರಮಗಳೇನು ;

(ಇ) ಸರ್ವರ್ ಸಮಸ್ಯೆಯಿಂದಾಗಿ ರಾಜ್ಯದ ರೈತರು ಫ್ರೂಟ್ಸ್ (ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ) ಐಡಿಯಲ್ಲಿ ಸೆಂಟ್ರಲ್ ಐಡಿ ಸೃಷ್ಟಿಸಿಕೊಳ್ಳಲು ಸತತವಾಗಿ ವಿಳಂಬವಾಗುತ್ತಿರುವುದರಿಂದ, ಯಾವಾಗ ಬೇಕಾದರೂ ಈ ಆಯ್ಕೆ ರದ್ದು ಆಗಬಹುದು ಎಂದು ರೈತರು ಆತಂಕಗೊಂಡಿದ್ದು, ಈ ಆತಂಕವನ್ನು ದೂರ ಮಾಡಲು ಹಾಗೂ ತಮಗೆ ದೊರೆಯಬೇಕಾದ ಪ್ರಯೋಜನಗಳಿಂದ ಅನ್ನದಾತರು ಯಾವುದೇ ಕಾರಣಕ್ಕೂ ವಂಚಿತರಾಗದಂತೆ ನೋಡಿಕೊಳ್ಳಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು ?

## ಭಿಕ್ಷಾಟನೆ ಮುಕ್ತ ರಾಜ್ಯವನ್ನಾಗಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೩೫ (೨೪೧೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭಿಕ್ಷುಕರಿಗಾಗಿ ಆಶ್ರಯ ತಾಣವಿದ್ದರೂ, ಭಿಕ್ಷಾಟನೆ ಇನ್ನೂ ನಿಂತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಭಿಕ್ಷಾಟನೆ ನಡೆಸುವವರನ್ನು ಪತ್ತೆ ಹಚ್ಚಿ, ಮನಃಪರಿವರ್ತನೆಗೊಳಿಸಿ, ಅವರನ್ನು ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಎಷ್ಟು ಕಡೆ ನಿರಾಶ್ರಿತರ ಪುನರ್ವಸತಿ ಕೇಂದ್ರಗಳನ್ನು ಈಗಾಗಲೇ ನಿರ್ಮಾಣ ಮಾಡಲಾಗಿದೆ ;

(ಇ) ಸದರಿ ನಿರಾಶ್ರಿತರ ಪುನರ್ವಸತಿ ಕೇಂದ್ರಗಳಲ್ಲಿ ಎಷ್ಟು ಮಂದಿಗೆ ಆಶ್ರಯ ಕಲ್ಪಿಸಲಾಗಿದೆ ; ಹಾಗೂ ನಿರಾಶ್ರಿತರ ಪುನರ್ವಸತಿ ಕೇಂದ್ರಗಳಲ್ಲಿ ಅವರಿಗೆ ದೊರೆಯುತ್ತಿರುವ ಸೌಲಭ್ಯಗಳು ಯಾವುವು ;

(ಈ) ಭಿಕ್ಷಾಟನಾ ವೃತ್ತಿಗೆ ಅವರು ಪುನಃ ಮರಳದಂತೆ ತಡೆಯಲು ಸರ್ಕಾರ ಅವರಿಗೆ ನೀಡುತ್ತಿರುವ ವಿವಿಧ ರೀತಿಯ ಕೌಶಲ್ಯ ತರಬೇತಿಗಳು ಯಾವುವು ; ಇದಕ್ಕಾಗಿ ರೂಪಿಸಿರುವ ಕಾರ್ಯಕ್ರಮಗಳೇನು ;

(ಉ) ರಾಜ್ಯವನ್ನು ಸಂಪೂರ್ಣ ಭಿಕ್ಷಾಟನೆ ಮುಕ್ತವಾಗಿಸಲು ಸರ್ಕಾರ ರೂಪಿಸಿರುವ ಜಾಗೃತಿ ಕಾರ್ಯಕ್ರಮಗಳೇನು ?

## ಕೃಷಿ ಪ್ರವಾಸೋದ್ಯಮನ್ನು ಉತ್ತೇಜಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೩೬ (೨೩೩೫) ಮಾನ್ಯ ಕೃಷಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಹಲವಾರು ದೇಶಗಳಲ್ಲಿ ಕೃಷಿ ಪ್ರವಾಸೋದ್ಯಮವು ಒಂದು ಉದ್ಯಮವಾಗಿ ಬೆಳೆಯುತ್ತಿದ್ದು, ಕೃಷಿ ಪ್ರವಾಸೋದ್ಯಮವನ್ನು ರಾಜ್ಯದಲ್ಲಿ ಅಭಿವೃದ್ಧಿ ಪಡಿಸಲು ಸರ್ಕಾರವು ಯೋಜನೆಗಳನ್ನು ರೂಪಿಸಿದೆಯೇ ; ರೂಪಿಸಿದ್ದಲ್ಲಿ, ಈ ಯೋಜನೆಗಳ ಸಂಪೂರ್ಣ ಮಾಹಿತಿ ನೀಡುವುದು ?

## ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತದ ಯೋಜನೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೩೭ (೨೩೩೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಳೆದ 3 ವರ್ಷಗಳಲ್ಲಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಸರ್ಕಾರದಿಂದ ಒದಗಿಸಿರುವ ಅನುದಾನವೆಷ್ಟು ;

ಈ ಅನುದಾನದಲ್ಲಿ ಕೈಗೊಳ್ಳುತ್ತಿರುವ ಫಲಾನುಭವಿ ಆಧಾರಿತ ಕಾರ್ಯಕ್ರಮಗಳು/ಯೋಜನೆಗಳು ಯಾವುವು ; ಈ ಯೋಜನೆಗಳಿಗೆ ಖರ್ಚಾಗಿರುವ ಅನುದಾನವೆಷ್ಟು ? (ಫಲಾನುಭವಿವಾರು/ ಜಿಲ್ಲಾವಾರು ಮಾಹಿತಿ ನೀಡುವುದು)

## ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೩೮ (೨೩೩೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; ಹುದ್ದೆಗಳ ವಿವರಗಳೊಂದಿಗೆ ಇಲಾಖಾವಾರು ಮಾಹಿತಿ ನೀಡುವುದು ;

(ಆ) ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳು ಬಹಳ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸಂಪೂರ್ಣ ಮಾಹಿತಿ ನೀಡುವುದು ?

## ಗಂಗಾ ಕಲ್ಯಾಣ ಯೋಜನೆಗೆ ಅನುದಾನ ಬಿಡುಗಡೆ ಆಗದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೩೯ (೨೩೪೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ನಿಗಮ/ ಮಂಡಳಿಗಳು ಯಾವುವು ;

(ಆ) ಕಳೆದ ೩ ವರ್ಷದಿಂದ ಸದರಿ ನಿಗಮ/ಮಂಡಳಿಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಯಾವ ಯಾವ ಯೋಜನೆಗಳಿಗೆ/ಕಾರ್ಯಕ್ರಮಗಳಿಗೆ ಎಷ್ಟು ಹಣ ವೆಚ್ಚವಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಗಂಗಾ ಕಲ್ಯಾಣ ಯೋಜನೆಗೆ ಎಷ್ಟು ಹಣ ಬಿಡುಗಡೆ ಆಗಿದೆ; ಗಂಗಾ ಕಲ್ಯಾಣ ಯೋಜನೆಯಡಿ ರಾಜ್ಯಾದ್ಯಂತ ಒಟ್ಟು ಎಷ್ಟು ಫಲಾನುಭವಿಗಳಿಗೆ ಯೋಜನೆಯ ಲಾಭ ದೊರೆತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಅನುದಾನದ ಕೊರತೆಯಿಂದಾಗಿ ಗಂಗಾ ಕಲ್ಯಾಣ ಯೋಜನೆ ಪ್ರಗತಿ ಕಾಣದೆ ಯೋಜನೆಯೇ ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯೋಜನೆಗೆ ಅವಶ್ಯಕ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೪೦ (೨೩೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಲ ಜೀವನ್ ಮಿಷನ್ ಯೋಜನೆ ಪ್ರಾರಂಭವಾಗಿದ್ದು ಯಾವಾಗ ; ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಮತ್ತು ರಾಜ್ಯ ಸರ್ಕಾರದಿಂದ ಈವರೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಯೋಜನೆ ಪ್ರಸ್ತುತ ಪ್ರಗತಿಯ ಮಾಹಿತಿಯನ್ನು ಜಿಲ್ಲಾವಾರು ನೀಡುವುದು ; ಕೈಗೊಂಡಿರುವ ಕಾಮಗಾರಿಗಳಿಗೆ ಈವರೆಗೆ ಎಷ್ಟು

ವೆಚ್ಚವಾಗಿದೆ ; (ಕಾಮಗಾರಿವಾರು ವಿವರವನ್ನು ಜಿಲ್ಲಾವಾರು ನೀಡುವುದು)

(ಇ) ಕಳೆದ ೩ ವರ್ಷದಿಂದ ರಾಜ್ಯಾದ್ಯಂತ ಜಲ ಜೀವನ್ ಮಿಷನ್ ಮತ್ತು ಇತರೆ ಯೋಜನೆಯಡಿ ಸರ್ಕಾರ ಎಷ್ಟು ಕೊಳವೆ ಬಾವಿ ಕೊರೆಯಲು ಆದೇಶ ನೀಡಿತ್ತು ; ಕೊಳವೆ ಬಾವಿ ಕೊರೆಯಲು ಯಾವ ಏಜೆನ್ಸಿಗೆ ಗುತ್ತಿಗೆ ನೀಡಲಾಗಿದೆ ; (ಗುತ್ತಿಗೆದಾರರ ಸಂಪೂರ್ಣ ವಿವರವನ್ನು ಜಿಲ್ಲಾವಾರು ನೀಡುವುದು)

(ಈ) ಸರ್ಕಾರ ಆದೇಶ ನೀಡಿದಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆಯೇ ; ಕೊಳವೆ ಬಾವಿ ಕೊರೆಯಲು ಆಗಿರುವ ಒಟ್ಟು ವೆಚ್ಚ ಎಷ್ಟು ; ಯಾವ ಗುತ್ತಿಗೆದಾರರ ಹೆಸರಿಗೆ ಎಷ್ಟು ಹಣ ಬಿಡುಗಡೆ ಆಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಕೊಳವೆ ಬಾವಿಗಳನ್ನು ಕೊರೆದಿರುವ ಕುರಿತು ಪರಿಶೀಲನೆ ಆಗಿದೆಯೇ ; ಭೌತಿಕವಾಗಿ ಕೊಳವೆ ಬಾವಿಗಳನ್ನು ಕೊರೆಯದೆ, ಕೊರೆದಿರುವುದಾಗಿ ನಕಲಿ ದಾಖಲೆ ಸೃಷ್ಟಿಸಿ ಹಣ ಪಡೆದಿರುವುದು ನಿಜವೇ ; ಈ ಅಕ್ರಮದಲ್ಲಿ ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟ ಎಷ್ಟು ; ಹಾಗಿದ್ದಲ್ಲಿ, ಈ ಅಕ್ರಮಗಳ ಬಗ್ಗೆ ಸರ್ಕಾರ ತನಿಖೆಗೆ ಆದೇಶ ನೀಡಿದೆಯೇ ?

## ರಾಜ್ಯದಲ್ಲಿರುವ ಐ.ಟಿ/ ಬಿ.ಟಿ. ಕಂಪನಿಗಳಿಂದ ಸಂಗ್ರಹವಾಗುವ ಇ–ತ್ಯಾಜ್ಯ ವಿಲೇವಾರಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೪೧ (೩೩೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಐ.ಟಿ ಮತ್ತು ಬಿ.ಟಿ. ಕಂಪನಿಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷದಿಂದ ಎಷ್ಟು ಐ.ಟಿ ಮತ್ತು ಬಿ.ಟಿ ಕಂಪನಿಗಳು ಸ್ಥಾಪನೆ ಆಗಿವೆ ; ಒಟ್ಟು ಎಷ್ಟು ಉದ್ಯೋಗ ಸೃಷ್ಟಿ ಆಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಐ.ಟಿ. ಮತ್ತು ಬಿ.ಟಿ ಕಂಪನಿಗಳ ಸ್ಥಾಪನೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ರಾಜ್ಯಾದ್ಯಂತ ಪ್ರತೀ ದಿನ ಎಷ್ಟು ಟನ್ ಇ–ತ್ಯಾಜ್ಯ ಉತ್ಪಾದನೆ ಆಗುತ್ತಿದೆ ; ಸದರಿ ತ್ಯಾಜ್ಯಾವನ್ನು ಯಾವ ರೀತಿ ವಿಲೇವಾರಿ ಮಾಡಲಾಗುತ್ತಿದೆ ; ಪ್ರತೀ ದಿನ ಉತ್ಪಾದನೆ ಆಗುತ್ತಿರುವ ಇ–ತ್ಯಾಜ್ಯದ ಪೈಕಿ ಶೇಕಡ ಎಷ್ಟು ವೈಜ್ಞಾನಿಕವಾಗಿ ವಿಲೇವಾರಿ ಆಗುತ್ತಿದೆ ;

(ಉ) ರಾಜ್ಯಾದ್ಯಂತ ಈವರೆಗೆ ಎಷ್ಟು ಇ–ತ್ಯಾಜ್ಯ ವಿಲೇವಾರಿ ಘಟಕಗಳನ್ನು ಮತ್ತು ಮರು ಬಳಕೆ ಘಟಕಗಳನ್ನು ಸ್ಥಾಪಿಸಲಾಗಿದೆ ; ಈ ತ್ಯಾಜ್ಯ ವಿಲೇವಾರಿಗೆ ಜಾಗೃತಿ ಮೂಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಅಂಗನವಾಡಿ ಕೇಂದ್ರಗಳಿಗೆ ಟಿ.ವಿ ಖರೀದಿ ಮಾಡುತ್ತಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೪೨ (೨೩೪೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು ; ಇಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳಿಗೆ ಟಿ.ವಿ. ಪೂರೈಸಲು ಸರ್ಕಾರ ನಿರ್ಧರಿಸಿದೆಯೇ ; ಹಾಗಿದ್ದಲ್ಲಿ, ಈ ಉದ್ದೇಶಕ್ಕಾಗಿ ಮೀಸಲಿಟ್ಟಿರುವ ಅಥವಾ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಇ) ಪ್ರತಿ ಟಿ.ವಿ.ಗೆ ಸರ್ಕಾರ ನಿಗದಿಪಡಿಸಿದ್ದ ದರ ಎಷ್ಟು ; ಯಾವ ದರಕ್ಕೆ ಎಷ್ಟು ಟಿ.ವಿ. ಖರೀದಿ ಆಗಿದೆ ; (ವಿವರ ನೀಡುವುದು)

(ಈ) ಯಾವ ಕಂಪನಿಯ ಟಿ.ವಿ ಖರೀದಿಸಲಾಗಿದೆ ; ಟಿ.ವಿ ಪೂರೈಕೆ ಮಾಡಿದ ಸಂಸ್ಥೆಯ ಹೆಸರು ಮತ್ತು ವಿಳಾಸ ನೀಡುವುದು ; ಈ ಸಂಸ್ಥೆಗೆ ಈವರೆಗೆ ಎಷ್ಟು ಹಣ ಬಿಡುಗಡೆ ಆಗಿದೆ ;

(ಉ) ಟಿ.ವಿ.ಖರೀದಿಗೆ ಟೆಂಡರ್ ಆಹ್ವಾನಿಸಲಾಗಿತ್ತೇ ; ಟೆಂಡರ್‌ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ಯಾವುವು ; ಸದರಿ ಸಂಸ್ಥೆಗಳು ಟೆಂಡರ್‌ನಲ್ಲಿ ನಮೂದಿಸಿದ್ದ ದರ ಎಷ್ಟು ?

## ಶುದ್ಧ ಕುಡಿಯುವ ನೀರಿನ ಘಟಕಗಳು ಹಾಳಾಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೪೩ (೨೩೪೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ರಾಜ್ಯಾದ್ಯಂತ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಾಪನೆಯಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಘಟಕಗಳ ನಿರ್ವಹಣೆಗೆ ಎಷ್ಟು ಹಣ ವೆಚ್ಚವಾಗಿದೆ; (ವರ್ಷವಾರು ವಿವರ ನೀಡುವುದು) ಘಟಕಗಳ ನಿರ್ವಹಣೆಯ ಜವಾಬ್ದಾರಿ ಯಾವ ಸಂಸ್ಥೆಗೆ ನೀಡಲಾಗಿದೆ ; ಈ ಸಂಸ್ಥೆಗೆ ನೀಡಿರುವ ಹಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಬಹುತೇಕ ಘಟಕಗಳು ನಿರ್ವಹಣೆ ಇಲ್ಲದೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯಾದ್ಯಂತ ಎಷ್ಟು ಘಟಕಗಳು ಹಾಳಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಘಟಕಗಳು ಹಾಳಾಗಲು ಕಾರಣವಾದ ಅಂಶಗಳೇನು ; ಶುದ್ಧ

ಕುಡಿಯುವ ನೀರು ಒದಗಿಸಬೇಕಾಗಿರುವುದು ಸರ್ಕಾರದ ಆದ್ಯ ಕರ್ತವ್ಯವಾಗಿದ್ದು, ಹಾಳಾಗಿರುವ ಘಟಕಗಳ ಪುನರುಜ್ಜೀವನಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿಯ ಅನುದಾನದ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೨೧೪೪ (೨೪೩೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಶಾಸಕರಿಗೆ (MLA & MLC) ರಾಜ್ಯ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಬಿಡುಗಡೆ ಆದ ಅನುದಾನದಲ್ಲಿ ಶಾಸಕರ ಶಿಫಾರಸ್ಸಿನ ಮೇರೆಗೆ ಅಥವಾ ಸೂಚನೆಯ ಮೇರೆಗೆ ಬಿಡುಗಡೆಯಾದ ಅನುದಾನವೆಷ್ಟು ; ಉಳಿಕೆ ಇರುವ ಅನುದಾನವೆಷ್ಟು ; ಉಳಿಕೆ ಇದ್ದಲ್ಲಿ, ಯಾವ ಯಾವ ಕಾರಣಕ್ಕೆ ಅನುದಾನಗಳನ್ನು ಬಿಡುಗಡೆ ಮಾಡಿರುವುದಿಲ್ಲ ; (ವಿವರಗಳನ್ನು ನೀಡುವುದು)

(ಆ) ಶಾಸಕರು ತಮ್ಮ ಪ್ರದೇಶ ಅಭಿವೃದ್ಧಿ ಅನುದಾನ ಬಳಕೆಗೆ ಪತ್ರ ನೀಡಿದ ನಂತರ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಹಣ ಬಿಡುಗಡೆ ಮಾಡಲು ಎಷ್ಟು ಹಂತಗಳಲ್ಲಿ ಅನುಮೋದನೆ ಮಾಡಲಾಗುತ್ತದೆ ; ಶಾಸಕರ ಶಿಫಾರಸ್ಸಿನ ನಂತರವೂ ತಾಂತ್ರಿಕ ಕಾರಣ ನೆಪ ಒಡ್ಡಿ ಅಥವಾ ಆಡಿಟ್ ಕಾರಣದ ನೆಪ ನೀಡಿ ಎಷ್ಟು ಹಣ ತಡೆಹಿಡಿಯಲಾಗಿದೆ ; ಎಷ್ಟು ಹಣ ಹಿಂದಕ್ಕೆ ಕಳುಹಿಸಲಾಗಿದೆ ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ತುಮಕೂರು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಶಾಸಕರ ಅನುದಾನಗಳನ್ನು ಶಾಸಕರ ಶಿಫಾರಸ್ಸಿಗೆ ಅನುಗುಣವಾಗಿ ಬಿಡುಗಡೆ

ಮಾಡುವ ಸಂದರ್ಭದಲ್ಲಿ ಆಡಿಟ್ ಆಕ್ಷೇಪಣೆ ನೆಪವೊಡ್ಡಿ ಅನುದಾನಗಳನ್ನು ತಡೆಹಿಡಿಯದಿರುವುದು ಅಥವಾ ಬಿಡುಗಡೆ ಮೂಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ದುರುದ್ದೇಶದಿಂದ ಆಡಿಟ್ ಆಕ್ಷೇಪಣೆ ನೀಡಿ ಜಿಲ್ಲಾಧಿಕಾರಿಗಳ ಕಾರ್ಯಾಲಯಗಳಲ್ಲಿ ಅನುದಾನಗಳನ್ನು ಬಿಡುಗಡೆ ಮಾಡದೇ ಇರುವ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಶಾಸಕರು ತಮ್ಮ ಪ್ರದೇಶ ಅಭಿವೃದ್ಧಿ ಯೋಜನೆಯಡಿಯಲ್ಲಿ ಯಾವುದೇ ಕಾಮಗಾರಿಗೆ ಅಥವಾ ಯೋಜನೆಗೆ ಹಣ ನೀಡಿದ್ದಲ್ಲಿ, ಸದರಿ ಹಣ ಬಳಕೆ ಮಾಡದೆ ಹೋದಲ್ಲಿ, ಹಣವನ್ನು ಶಾಸಕರ ಪ್ರದೇಶ ಅಭಿವೃದ್ಧಿ ನಿಧಿಗೆ ವಾಪಸ್ಸು ನೀಡಬೇಕಾಗಿರುತ್ತದೆ, ಕೆಲವು ಪ್ರಕರಣಗಳಲ್ಲಿ ಶಾಸಕರ ಪ್ರದೇಶ ಅಭಿವೃದ್ಧಿ ಖಾತೆಗೆ ಬಳಕೆಯಾಗದ ಅನುದಾನವನ್ನು ಹಿಂದಿರುಗಿಸದೆ ತಪ್ಪನ್ನು ಎಸಗಿರುವ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ? (ವಿವರಗಳನ್ನು ಒದಗಿಸುವುದು)

## ಸಾಮಾಜಿಕ ಮತ್ತು ಶೈಕ್ಷಣಿಕ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೨೧೪೫ (೨೪೩೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಆಯೋಗದ ಮೂಲಕ ಪಡೆದಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಅನುಸರಿಸಿ ಹಿಂದುಳಿದ ವರ್ಗಗಳ ಮೀಸಲಾತಿಯ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಇದನ್ನು ಯಾವಾಗ ಜಾರಿಗೊಳಿಸಲಾಗುವುದು ;

(ಆ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವಾಗ ವರ್ಗವಾರು ಪ್ರವೇಶ ನೀಡುತ್ತಿಲ್ಲ, ಇದರಿಂದ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅನ್ಯಾಯ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಸ್ತುತ ಪ್ರವರ್ಗ–೧, ಪ್ರವರ್ಗ–೨ಎ ಮತ್ತು ಪ್ರವರ್ಗ–೨ಬಿ, ಸಮುದಾಯಗಳಿಗೆ ಹಿಂದುಳಿದ ವರ್ಗಗಳ ವಸತಿ ನಿಲಯದಲ್ಲಿ ಯಾವ ಪ್ರಮಾಣದಲ್ಲಿ ಪ್ರವೇಶ ನೀಡಲಾಗುತ್ತಿದೆ ; ಇನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇರುತ್ತದೆಯೇ ;

(ಇ) ಹಿಂದುಳಿದ ವರ್ಗಗಳ ವಸತಿ ನಿಲಯ ಮತ್ತು ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಭೋಜನ ವೆಚ್ಚಕ್ಕೆ ನೀಡುತ್ತಿರುವ ಅನುದಾನ/ ಸಹಾಯಧನ ಎಷ್ಟು ; ಇದನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವಾಗ ಜಾರಿಗೊಳಿಸಲಾಗುವುದು ;

(ಈ) ಹಿಂದುಳಿದ ವರ್ಗಗಳ ಮತ್ತು ಸಮುದಾಯಗಳ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯ ಕಟ್ಟಡಗಳಿಗೆ ಈ ಸಾಲಿನಲ್ಲಿ ಮಂಜೂರು ಮಾಡಿರುವ ಅನುದಾನವೆಷ್ಟು ; ಬಿಡುಗಡೆಯಾಗಿರುವ ಅನುದಾನವೆಷ್ಟು ; ಬಾಕಿ ಇರುವ ಅನುದಾನವೆಷ್ಟು ; ಯಾವ ಯಾವ ಪ್ರವರ್ಗಕ್ಕೆ ಯಾವ ಯಾವ ಅನುಪಾತದಲ್ಲಿ ಅನುದಾನ/ ಸಹಾಯಧನ ಬಿಡುಗಡೆ ಮಾಡಲಾಗುತ್ತದೆ ; (ವಿವರಗಳನ್ನು ಒದಗಿಸುವುದು)

(ಉ) ಹಿಂದುಳಿದ ವರ್ಗಗಳ ಮತ್ತು ಸಮುದಾಯಗಳ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹೆಣ್ಣು ಮಕ್ಕಳಿಗೆ ಹೈಟೆಕ್ ವಸತಿ ನಿಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮಹಿಳಾ ಹೈಟೆಕ್ ವಸತಿ ನಿಲಯಗಳ ನಿರ್ಮಾಣಕ್ಕೆ ಸರ್ಕಾರ ಯಾವುದಾದರೂ ಯೋಜನೆ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಅದರ ಮಾಹಿತಿಯನ್ನು ಒದಗಿಸುವುದು ;

(ಊ) ಸರ್ಕಾರಿ ಹುದ್ದೆಗಳನ್ನು ಪಡೆಯುವ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಾರ್ಷಿಕ ಆದಾಯ ಮಿತಿಯನ್ನು ೮ ಲಕ್ಷದಿಂದ ೧೫ ಲಕ್ಷ ರೂಪಾಯಿಗಳಿಗೆ ಏರಿಕೆ ಮಾಡಲು ಹಿಂದುಳಿದ ಸಮುದಾಯಗಳು ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ತುಮಕೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾಮಗಾರಿಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೨೧೪೬ (೨೪೩೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ವತಿಯಿಂದ ಜಲ ಜೀವನ್ ಮಿಷನ್ ಯೋಜನೆಯ ಅಡಿಯಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಇವುಗಳಲ್ಲಿ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; ಬಾಕಿ ಇರುವ ಕಾಮಗಾರಿಗಳು ಎಷ್ಟು ; ಇದುವರೆಗೂ ಎಷ್ಟು ಕೋಟಿ ರೂಪಾಯಿಗಳನ್ನು ಕುಡಿಯುವ ನೀರಿನ ವ್ಯವಸ್ಥೆಗೆ ಕಲ್ಪಿಸಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣ ಅಭಿವೃದ್ಧಿ ಇಲಾಖೆಯ ತುಮಕೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ೫೦೫೪ ಅಡಿಯಲ್ಲಿ ಅನುಮೋದನೆಯಾದ ಕಾಮಗಾರಿಗಳು ಎಷ್ಟು ;

ಪೂರ್ಣಗೊಂಡ ಕಾಮಗಾರಿಗಳು ಎಷ್ಟು ; (ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು ; ಬಾಕಿ ಇರುವ ಕಾಮಗಾರಿಗಳು ಎಷ್ಟು ; ಕಾಮಗಾರಿಗಳ ಅಂದಾಜು ಮೊತ್ತದ ಸಹಿತವಾಗಿ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ೩೦೫೪ ಮುಖ್ಯಮಂತ್ರಿ ರಸ್ತೆ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಗಳು ಎಷ್ಟು ; ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ; ಬಾಕಿ ಇರುವ ಕಾಮಗಾರಿಗಳು ಎಷ್ಟು ; (ಅಂದಾಜು ಮೊತ್ತದ ಸಹಿತವಾಗಿ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ಶಾಸನಬದ್ದ ಅಭಿವೃದ್ಧಿ ಅನುದಾನದ ಅಡಿಯಲ್ಲಿ ಅನುಮೋದನೆ ಗೊಂಡಿರುವ ಕಾಮಗಾರಿಗಳು ಎಷ್ಟು; ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು ; ಬಾಕಿ ಇರುವ ಕಾಮಗಾರಿಗಳು ಎಷ್ಟು ; (ಅನುದಾನ ಮೊತ್ತದ ಸಹಿತವಾಗಿ ತಾಲ್ಲೂಕುವಾರು ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಡಿಯಲ್ಲಿ ತುಮಕೂರು ಜಿಲ್ಲೆಯಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯ ಅಡಿಯಲ್ಲಿ ಅನುಮೋದನೆ ಗೊಂಡಿರುವ ಕಾಮಗಾರಿಗಳು ಎಷ್ಟು ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು ; ಬಾಕಿ ಇರುವ ಕಾಮಗಾರಿಗಳೆಷ್ಟು ? (ಅನುಮೋದನೆಗೊಂಡ ಅನುದಾನದ ಸಹಿತವಾಗಿ ತಾಲ್ಲೂಕುವಾರು ಪೂರ್ಣ ವಿವರಗಳನ್ನು ಒದಗಿಸುವುದು)

# ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಜಿಲ್ಲಾ ಸಾಂತ್ವನ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :-**

೨೧೪೭ (೨೪೩೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸುಮಾರು ೨೫ ವರ್ಷಗಳ ಹಿಂದೆ ಕರ್ನಾಟಕ ರಾಜ್ಯ ಸರ್ಕಾರ ಮಹಿಳೆಯರ ಸಬಲೀಕರಣದ ಹಿನ್ನಲೆಯಲ್ಲಿ ಮತ್ತು ಮಹಿಳೆಯರಿಗೆ ಸಹಾಯ ಒದಗಿಸುವ ಹಿನ್ನೆಲೆಯಲ್ಲಿ ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ರಚಿಸಿರುತ್ತದೆ, ಇಂತಹ ಸಾಂತ್ವನ ಕೇಂದ್ರಗಳನ್ನು ಮುಚ್ಚಲು ರಾಜ್ಯ ಸರ್ಕಾರದ ಆರ್ಥಿಕ ಇಲಾಖೆ ಅಭಿಪ್ರಾಯ ನೀಡಿದೆಯೇ ;

(ಆ) ಮಹಿಳೆಯರ ಸಬಲೀಕರಣದ ಹಿನ್ನೆಲೆಯಲ್ಲಿ ಸಾಂತ್ವನ ಕೇಂದ್ರಗಳನ್ನು ಮುಂದುವರಿಸುವ ಅವಶ್ಯಕತೆ ಸರ್ಕಾರ ಮನಗಂಡಿದೆಯೇ ; ಮನಗಂಡಿದ್ದಲ್ಲಿ, ಸಾಂತ್ವನ ಕೇಂದ್ರಗಳನ್ನು ಉಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತದೆ ;

(ಇ) ಜಿಲ್ಲಾ ಸಾಂತ್ವನ ಕೇಂದ್ರಗಳ ಮೂಲಕ ಮಹಿಳೆಯರಿಗೆ ಅಶಕ್ತ ಮಹಿಳೆಯರಿಗೆ ಸಹಾಯ ಹಸ್ತ ನೀಡುವ ನಿಟ್ಟಿನಲ್ಲಿ ಜಿಲ್ಲಾ ಸಾಂತ್ವಾನ ಕೇಂದ್ರಗಳನ್ನು ಮುಂದುವರೆಸಲು ದಿ:೦೬.೧೦.೨೦೨೫ ರಲ್ಲಿ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ನಿರ್ಣಯ ಅಂಗೀಕರಿಸಲಾಗಿದ್ದು, ಈ ನಿರ್ಣಯಕ್ಕೆ ಅನುಗುಣವಾಗಿ ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ಮುಂದುವರೆಸಲು ಯಾವಾಗ ಆದೇಶ ಹೊರಡಿಸಲಾಗುವುದು ;

(ಈ) ಮಹಿಳೆಯರ ಸಬಲೀಕರಣದ ಹಿನ್ನಲೆಯಲ್ಲಿ ಇಡೀ ರಾಜ್ಯದಲ್ಲಿ ಕೇವಲ ೧ ಕೋಟಿ ೫೦ ಲಕ್ಷ ಮೊತ್ತವನ್ನು ಜಿಲ್ಲಾ ಸಾಂತ್ವಾನ

ಕೇಂದ್ರಗಳ ನಿರ್ವಹಣೆಗೆ ವೆಚ್ಚ ಮಾಡುತ್ತಿದ್ದು ಇದು ಯಾವುದೇ ಆರ್ಥಿಕ ಹೊರೆ ಆಗುವುದಿಲ್ಲ ಎಂಬುದನ್ನು ಸರ್ಕಾರ ಮನಗಂಡಿದೆಯೇ ; ಮನಗಂಡಿದ್ದಲ್ಲಿ, ಸಾಂತ್ವನ ಕೇಂದ್ರಗಳನ್ನು ಮುಂದುವರಿಸಲು ರಾಜ್ಯ ಸರ್ಕಾರ ನಿರ್ದೇಶನ ನೀಡುವುದು ;

(ಉ) ರಾಜ್ಯದಲ್ಲಿ ಇರುವ ಜಿಲ್ಲಾ ಸಾಂತ್ವನ ಕೇಂದ್ರಗಳು ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಜಿಲ್ಲಾ ಸಾಂತ್ವನ ಕೇಂದ್ರಗಳಿಗೆ ನೀಡಿರುವ ಅನುದಾನವೆಷ್ಟು ; ಸಾಂತ್ವನ ಕೇಂದ್ರಗಳ ಸಹಿತವಾಗಿ ಸರ್ಕಾರ ನೀಡಿರುವ ಅನುದಾನಗಳ ಸಹಿತ ಮೂರು ವರ್ಷಗಳ ಅಂಕಿ–ಅಂಶಗಳನ್ನು ಒದಗಿಸುವುದು ?

## ಕಾರ್ಮಿಕ ಸಂಘಟನೆಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೨೧೪೮ (೨೪೩೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಮಿಕ ಇಲಾಖೆ ಅಡಿಯಲ್ಲಿ ನೋಂದಾವಣೆ ಆಗಿರುವ ಕಾರ್ಮಿಕ ಸಂಘಟನೆಗಳು ಎಷ್ಟು ; ನಿಯಮಾನುಸಾರ ಕಾರ್ಮಿಕ ಸಂಘಟನೆಗಳು ನವೀಕರಣವನ್ನು ಹೊಂದಿವೆಯೇ ; (ಹೊಂದಿದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು) ನೋಂದಾವಣೆ ಆಗದೆ ಇರುವ ಸಂಘಟನೆಗಳು ಎಷ್ಟು ; (ಅವುಗಳ ಮಾಹಿತಿಯನ್ನು ಒದಗಿಸುವುದು)

(ಆ) ಕಾರ್ಮಿಕ ಇಲಾಖೆಯ ಅಡಿಯಲ್ಲಿ ನೋಂದಾವಣೆ ಮಾಡಿಕೊಳ್ಳಲು ಕಾರ್ಮಿಕ ಸಂಘಟನೆಗಳಿಗೆ ಇರುವ ನಿಯಮಾವಳಿಗಳು ಏನು ; (ಈ ಸಂಬಂಧ ಸರ್ಕಾರದ ನಿಯಮ ಮತ್ತು ಸುತ್ತೋಲೆಗಳ ಪ್ರತಿಯನ್ನು ಒದಗಿಸುವುದು)

(ಇ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ ಅಡಿಯಲ್ಲಿ ನೋಂದಾವಣೆ ಆಗಿರುವ ಕಾರ್ಮಿಕ ಸಂಘಟನೆಗಳು ಎಷ್ಟು ; (ಇವುಗಳ ಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಸಂಘಟನೆಗಳಿಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಯೋಜನೆಯ ಅಡಿಯಲ್ಲಿ ಕಾರ್ಮಿಕರ ಕಿಟ್‌ಗಳನ್ನು ಯೋಜನೆಗಳ ಪ್ರಯೋಜನೆಗಳನ್ನು, ಸೌಲಭ್ಯಗಳನ್ನು, ಅನುದಾನಗಳನ್ನು ಮತ್ತು ಸಹಾಯಧನವನ್ನು ನೀಡಲಾಗಿದೆ ; (ಅವುಗಳ ಪೂರ್ಣ ವಿವರಗಳನ್ನು ಒದಗಿಸುವುದು)

(ಉ) ಕಾರ್ಮಿಕ ಇಲಾಖೆಯ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮತ್ತು ಕಟ್ಟಡ ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ರಚನೆ ಆಗಿದೆಯೇ ? (ಆಗಿದ್ದಲ್ಲಿ, ಮಂಡಳಿಯ ವಿವರಗಳನ್ನು ನೀಡುವುದು)

## ರಾಜ್ಯ ಯೋಜನಾ ಇಲಾಖೆಯಲ್ಲಿ ವಿವಿಧ ಹುದ್ದೆಗಳ ಮತ್ತು ನೇಮಕಾತಿಯ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೨೧೪೯ (೨೪೪೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಯೋಜನಾ ಇಲಾಖೆಯಲ್ಲಿ ವಿವಿಧ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ವೇಳಾಪಟ್ಟಿಯನ್ನು ನಿಗದಿಪಡಿಸಿದೆ ;

(ಆ) ಯೋಜನಾ ಇಲಾಖೆಯಲ್ಲಿನ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗುತ್ತಿರುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣವೇನು ಮತ್ತು ಶೀಘ್ರ ನೇಮಕಾತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಯೋಜನಾ ಇಲಾಖೆಯ ಹುದ್ದೆಗಳ ಮಂಜೂರಾತಿ, ಭರ್ತಿ ಹಾಗೂ ಖಾಲಿ ಹುದ್ದೆಗಳ ಜಿಲ್ಲಾವಾರು ವಿವರಗಳನ್ನು ನೀಡುವುದು ;

(ಈ) ಯೋಜನಾ ಇಲಾಖೆಯಲ್ಲಿ ಒಪ್ಪಂದ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ ಎಷ್ಟು ; ಅವರನ್ನು ನಿಯಮಗೊಳಿಸುವ ಕುರಿತು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇದೆಯೇ ? (ವಿವರ ನೀಡುವುದು)

## ಆನೇಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣ ರಸ್ತೆಗಳು ಹಾಳಾಗಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೨೧೫೦ (೨೪೪೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆನೇಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್ ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಎಷ್ಟು ಪ್ರಸ್ತಾವನೆಗಳು ಬಂದಿರುತ್ತವೆ ;

(ಇ) ಕಳೆದ ೩ ವರ್ಷಗಳಿಂದ ಗ್ರಾಮೀಣ ರಸ್ತೆ ಅಭಿವೃದ್ಧಿಗೆ ನೀಡಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಆನೇಕಲ್ ತಾಲ್ಲೂಕಿನ ಎಷ್ಟು ಗ್ರಾಮಗಳಿಗೆ ಇನ್ನೂ ಕುಡಿಯುವ ನೀರಿನ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ನರೇಗಾ ಯೋಜನೆಯಡಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೫೧ (೨೩೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರೇಗಾ ಯೋಜನೆಯಡಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು; ಅವರಿಗೆ ಪಾವತಿಸುತ್ತಿರುವ ಗೌರವ ಧನವೆಷ್ಟು ; ಗೌರವ ಧನ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪಾವತಿಗೆ ಬಾಕಿ ಇರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ;

(ಆ) ಸದರಿ ಸಿಬ್ಬಂದಿಗಳಿಗೆ ವೈದ್ಯಕೀಯ ಸೌಲಭ್ಯ, ಉದ್ಯೋಗ ಭದ್ರತೆ ಸೇರಿದಂತೆ ಇತರೆ ಸೌಲಭ್ಯಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) VBGRAM Gಯೋಜನೆಯಲ್ಲಿ ಸದರಿ ಸಿಬ್ಬಂದಿಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಹೇಗೆ ಮುಂದುವರೆಸಲಾಗುವುದು ; ಇಲ್ಲದಿದ್ದಲ್ಲಿ, ಕಾರಣಗಳೇನು ?

## ರಾಜ್ಯದಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೫೨ (೨೩೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಸುವ ಬಗ್ಗೆ ಸರ್ಕಾರದ ನಿಲುವೇನು; ಸದರಿ ಚುನಾವಣೆ ನಡೆಸುವ ಕುರಿತು ಇಲ್ಲಿಯವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳ ಸಂಪೂರ್ಣ ಮಾಹಿತಿ ನೀಡುವುದು; ಯಾವ ಕಾಲಮಿತಿಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಚುನಾವಣೆ ನಡೆಸಲಾಗುವುದು ;

(ಆ) ಹಲವು ಜಿಲ್ಲೆಗಳಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಗಡಿ ನಿರ್ಧರಿಸಿದ ಮೇಲೆ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ ; ಇದರಿಂದ ಎಷ್ಟು ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಗಡಿ ಪುನಃ ನಿರ್ಧರಿಸಬೇಕು ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರವಾರು ಪ್ರತ್ಯೇಕ ಮಾಹಿತಿ ನೀಡುವುದು ;

(ಇ) ಸದರಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಗಡಿ ನಿರ್ಧರಿಸಲಾಗಿದೆಯೇ ; ನಿರ್ಧರಿಸಿದ್ದರೆ ಯಾವಾಗ ಮಾಡಲಾಯಿತು ಮತ್ತು ಹೊಸದಾಗಿ ನಿರ್ಧರಿಸಿದ ಗಡಿಗಳ ಸಂಪೂರ್ಣ ಮಾಹಿತಿ ನೀಡುವುದು ; ನಿರ್ಧರಿಸದಿದ್ದರೆ ಯಾವ ಕಾಲಮಿತಿಯಲ್ಲಿ ನಿರ್ಧರಿಸಲಾಗುವುದು ?

## ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಅಭಿವೃದ್ಧಿಯ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೧೫೩ (೨೩೮೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಅಭಿವೃದ್ಧಿಗಾಗಿ ೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನ ಎಷ್ಟು ; ಬಿಡುಗಡೆಯಾದ ಹಣವೆಷ್ಟು ;

(ಆ) ಪೂರ್ಣ ಹಣವನ್ನು ಬಿಡುಗಡೆ ಮಾಡಲಾಗಿದೆಯೇ ; ಮಾಡದೇ ಇದ್ದಲ್ಲಿ, ಕಾರಣವೇನು ; ಮಾಹಿತಿ ಒದಗಿಸುವುದು ;

(ಇ) ನಿಗದಿತ ಉದ್ದೇಶಕ್ಕೆ ಬಿಡುಗಡೆಯಾದ ಹಣವನ್ನು ಬೇರೆ–ಬೇರೆ ಯೋಜನೆಗಳಿಗೆ ವಿನಿಯೋಗಿಸಲು ಅವಕಾಶವಿದೆಯೇ ; ವಿನಿಯೋಗಿಸಿದ್ದಲ್ಲಿ, ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ ; ವಿವರವಾದ ಮಾಹಿತಿ ನೀಡುವುದು ;

(ಈ) ಅನ್ಯ ಉದ್ದೇಶಕ್ಕೆ ಬಳಸಿದರೆ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಅನ್ಯಾಯವಾಗುವುದಿಲ್ಲವೇ ; ಈ ಅನ್ಯಾಯವನ್ನು ಸರ್ಕಾರದಿಂದ ಹೇಗೆ ಸರಿಪಡಿಸಲಾಗುವುದು ?

## ಹಿಂದುಳಿದ ಪ್ರವರ್ಗ–೧ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೨೧೫೪ (೨೩೮೯) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಅತ್ಯಂತ ಹಿಂದುಳಿದ ಪ್ರವರ್ಗ–೧ ರ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿ ಮತ್ತು ವೇತನಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಸರ್ಕಾರವು ವಿವಿಧ ಶಾಲಾ–ಕಾಲೇಜುಗಳಿಗೆ ನಿಗಧಿಪಡಿಸಿದ ಶುಲ್ಕ ಮರು ಪಾವತಿ ಮಾಡಲು ಕಡಿಮೆ ಹಣವನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರವರ್ಗ–೧ ರ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ಮರು ಪಾವತಿ ಮಾಡದಿದ್ದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೇ ; ಇದರಿಂದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುವುದಿಲ್ಲವೇ ;

(ಈ) ಸರ್ಕಾರದ ಆಧ್ಯತಾ ವಲಯದ ಶಿಕ್ಷಣದ ಅಡಿಯಲ್ಲಿ ಈ ರೀತಿಯಲ್ಲಿ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ, ಈ ಪ್ರವರ್ಗ–೧ರ ವಿದ್ಯಾರ್ಥಿಗಳು ಶಿಕ್ಷಣವನ್ನು ಮಧ್ಯದಲ್ಲಿಯೆ ಮೊಟಕುಗೊಳಿಸಿ, ನಿರುದ್ಯೋಗಿಗಳಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## IAS & KAS ಸ್ಪರ್ಧಾತ್ಮಕ ಪರೀಕ್ಷಾ ತಯಾರಿಗಾಗಿ ಕಲಬುರಗಿಯಲ್ಲಿ ಸ್ಥಾಪನೆಯಾದ ಪ್ರಭುದ್ಧ ಅಕಾಡೆಮಿಯಲ್ಲಿ ಇರುವ ಅವ್ಯವಸ್ಥೆಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೧೫೫ (೨೩೯೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಬಡ ಅಭ್ಯರ್ಥಿಗಳಿಗಾಗಿ IAS & KAS ಪರೀಕ್ಷಾ ತರಬೇತಿ ನೀಡಲು ಸ್ಥಾಪನೆಯಾದ "ಪ್ರಭುದ್ಧ ಅಕಾಡಮಿ" ಕೇಂದ್ರದ ಮುಖ್ಯ ಉದ್ದೇಶಗಳೇನು ; ಈ ಯೋಜನೆಗೆ ಮೀಸಲಿಟ್ಟಿರುವ ಅನುದಾನವೆಷ್ಟು ;

(ಆ) ಸದರಿ ವರ್ಷದಲ್ಲಿ ಈ ಕೇಂದ್ರದಲ್ಲಿ ತರಬೇತಿ ಪಡೆಯಲು ಆಯ್ಕೆಯಾದ ಹಾಗೂ ಪ್ರಸ್ತುತ ಹಾಜರಾಗುತ್ತಿರುವ ಅಭ್ಯರ್ಥಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಕೇಂದ್ರದಲ್ಲಿ ತರಬೇತಿಗೆ ಆಯ್ಕೆಯಾಗಿ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ನೀಡಲಾಗುವ ಸೌಲಭ್ಯಗಳು ಯಾವುವು ; ಪ್ರಸ್ತುತ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ಈ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಈ) ಸದರಿ ಕೇಂದ್ರದಲ್ಲಿ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ಶಿಷ್ಯವೇತನವನ್ನು ನೀಡಲಾಗುವುದು ಎಂದು ಅಧಿಸೂಚನೆಯಲ್ಲಿ ತಿಳಿಸಿದ್ದರೂ ಕೂಡ ಈಗ ಯಾವುದೇ ಅಭ್ಯರ್ಥಿಗಳಿಗೆ ವಸತಿ ಹಾಗೂ ಶಿಷ್ಯವೇತನ ಎರಡನ್ನೂ ನೀಡದೇ ಇರುವ ಕಾರಣವೇನು ;

(ಉ) ಸದರಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಎಷ್ಟು; ಹುದ್ದೆವಾರು ಮಾಹಿತಿ ನೀಡುವುದು ; ಸದರಿ ಕೇಂದ್ರದಲ್ಲಿರುವ ವಿಷಯ ಪರಿಣಿತ ತರಬೇತುದಾರರ ಮಾಹಿತಿ ನೀಡುವುದು ;

(ಊ) ಸದರಿ ಕೇಂದ್ರವು ಹಲವಾರು ಅವ್ಯವಸ್ಥೆಗಳಿಂದ ಕೂಡಿದೆ ಎಂದು ಅಭ್ಯರ್ಥಿಗಳು ಆರೋಪಿಸಿದ್ದರ ಬಗ್ಗೆ ಸರ್ಕಾರಕ್ಕೆ ನೀಡಿದ ದೂರುಗಳು, ಮನವಿಗಳು ಎಷ್ಟು ; ಹಾಗೂ ಇವುಗಳಿಗೆ ಸರ್ಕಾರ ನೀಡಿದ ಪ್ರತ್ಯುತ್ತರ ಹಾಗೂ ಸಲಹೆಗಳ ಸಂಪೂರ್ಣ ಮಾಹಿತಿ ನೀಡುವುದು ;

(ಋ) ಪ್ರಬುದ್ಧ ಅಕಾಡಮಿಯು ಕೆ.ಕೆ.ಆರ್.ಡಿ.ಬಿ ಯ ಏಳು ಜಿಲ್ಲೆಗಳಿಗೆ ಸಂಬಂಧಪಟ್ಟದ್ದಾಗಿದ್ದು ಆದರೆ ಕೇವಲ ಕಲಬುರಗಿ ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ಏಕಾತ್ಮಕವಾಗಿ ಹೊರಡಿಸಲಾದ ಶಿಷ್ಯವೇತನ ರದ್ಧತಿ ಆದೇಶದಿಂದ ಆ ವಿದ್ಯಾರ್ಥಿಗಳ ಶಿಷ್ಯವೇತನ ರದ್ದುಪಡಿಸಲಾಗಿದ, ಕನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಸೂಚನೆಯನ್ನು ಕಲಬರುಗಿ ಜಿಲ್ಲಾಧಿಕಾಗಳು ಸುತ್ತೋಲೆ ಹೊರಡಿಸುವುದರ ಮೂಲಕ ಶಿಷ್ಯವೇತನವನ್ನು ಹೇಗೆ ರದ್ದುಪಡಿಸಲು ಸಾಧ್ಯ ? (ಮಾಹಿತಿ ನೀಡುವುದು)

## ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೧೫೬ (೨೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳು ಎಷ್ಟು ಹಾಗೂ ಈ ಗ್ರಾಮ ಪಂಚಾಯಿತಿಗಳಿಗೆ ನೇಮಿಸಿರುವ ಆಡಳಿತಾಧಿಕಾರಿಗಳ ಪಟ್ಟಿಯನ್ನು ನೀಡುವುದು ;

(ಆ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಅವರ ಮೊಬೈಲ್ ಸಂಖ್ಯೆಗಳನ್ನು ನೀಡುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳ ಕೊರತೆಯನ್ನು ಎದುರಿಸುತ್ತಿವೆ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಆರ್ಥಿಕ ಅನುಮೋದನೆ ಪಡೆದಿರುವ ಖಾಲಿ ಹುದ್ದೆಗಳ ನೇಮಕ ಮಾಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೨೧೫೭ (೨೪೦೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಅಧಿಕೃತವಾಗಿ ನೀಡಿರುವ ದಾಖಲೆಯ ಪ್ರಕಾರ ಒಟ್ಟು ೫೬,೪೩೨ ಹುದ್ದೆಗಳಲ್ಲಿ ಆರ್ಥಿಕ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅನುಮೋದನೆ ಪಡೆದಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ೩೨,೧೩೨ ಹುದ್ದೆಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಗ್ರೂಪ್

'ಎ' , ಗ್ರೂಪ್ 'ಬಿ' ಮತ್ತು ಗ್ರೂಪ್ 'ಸಿ' ಹುದ್ದೆಗಳು ಯಾವುವು ; ಎಲ್ಲಾ ಹುದ್ದೆಗಳ ಹಾಗೂ ಪದನಾಮಗಳ ಸಮೇತ ಸಂಪೂರ್ಣ ವಿವರ ನೀಡುವುದು ;

(ಇ) ಇವುಗಳಲ್ಲಿ ಅರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ೨೪,೩೦೦ ಹುದ್ದೆಗಳಲ್ಲಿ ಉಳಿಕೆ ಮೂಲ ವೃಂದದ ಗ್ರೂಪ್ 'ಎ' ಗ್ರೂಪ್ 'ಬಿ' ಮತ್ತು ಗ್ರೂಪ್ 'ಸಿ' ಹುದ್ದೆಗಳು ಯಾವುವು ; ಎಲ್ಲಾ ಹುದ್ದೆಗಳ ಹಾಗೂ ಪದನಾಮಗಳ ಸಮೇತ ಸಂಪೂರ್ಣ ವಿವರ ನೀಡುವುದು ;

(ಈ) ಯಾವ ಕಾಲಮಿತಿಯಲ್ಲಿ ಈ ಮೇಲಿನ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಗಳನ್ನು ಹೊರಡಿಸಲಾಗುವುದು ?

## ಕಲಬುರಗಿಯಲ್ಲಿ ಆರಂಭಿಸಿರುವ ತೊಗರಿ ಮಂಡಳಿಯ ಕಾಯಕಲ್ಪ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೨೧೫೮ (೨೩೧೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಆರ್ಥಿಕತೆಯ ಬೆನ್ನೆಲುಬಾದ ತೊಗರಿ ಬೆಳೆಯನ್ನು ಜಿಲ್ಲೆಯಲ್ಲಿ ಪ್ರತಿ ವರ್ಷ ಎಷ್ಟು ಹೆಕ್ಟೇರ್‌ನಲ್ಲಿ ರೈತರು ಬೆಳೆಯುತ್ತಾರೆ ; (ಎರಡು ವರ್ಷಗಳ ವಿವರ ನೀಡುವುದು)

(ಆ) ಜಿಲ್ಲೆಯ ತೊಗರಿ ಬೆಳಗಾರರಿಗೆ ಉತ್ತೇಜನ ನೀಡಲು ಸ್ಥಾಪನೆಯಾದ ತೊಗರಿ ಮಂಡಳಿಗೆ ಒದಗಿಸಿದ ಸಿಬ್ಬಂದಿ ಮತ್ತು ಭೌತಿಕ ಸೌಕರ್ಯಗಳೇನು ;

(ಇ) ಜಿಲ್ಲೆಯ ತೊಗರಿ ಬೆಳಗಾರರಿಗೆ ಉತ್ತೇಜನ ಮತ್ತು ಬೆಂಬಲ ನೀಡಲು ಸ್ಥಾಪನೆಯಾದ ತೊಗರಿ ಮಂಡಳಿ ರೋಗಗ್ರಸ್ಥವಾಗಿದ್ದು ಅದನ್ನು ಸುಧಾರಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಉತ್ಕೃಷ್ಟ ತೊಗರಿ ಬೆಳೆಯುವ ಕಲಬುರಗಿ ಜಿಲ್ಲೆಗೆ ಒಂದು ಬ್ರಾಂಡಿಂಗ್ ಹಂತಕ್ಕೆ ಒಯ್ದು (GI Tag) ಅಲ್ಲಿನ ರೈತರ ಬದುಕಿಗೆ ಆಧಾರವಾಗಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ?

## ಧಾರವಾಡದಲ್ಲಿ ಡಾ: ಗಂಗೂಬಾಯಿ ಹಾನಗಲ್ ಹುಟ್ಟಿದ ಮನೆ ಪಾಳು ಬಿದ್ದಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೨೧೫೯ (೨೩೧೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಡೀ ವಿಶ್ವಕ್ಕೆ ಹಿಂದುಸ್ತಾನಿ ಸಂಗೀತದ ಇಂಪು ನೀಡಿದ ಹೆಮ್ಮೆಯ ಡಾ: ಗಂಗೂಬಾಯಿ ಹಾನಗಲ್ ಹುಟ್ಟಿದ ಧಾರವಾಡ ಮನೆ ಪಾಳು ಬಿದ್ದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೦೭ರಲ್ಲಿ ಕರ್ನಾಟಕ ಸರ್ಕಾರ ಆ ಮನೆಯನ್ನು ಖರೀದಿ ಮಾಡಿ ವಸ್ತು ಸಂಗ್ರಹಾಲಯವಾಗಿ ಪರಿವರ್ತಿಸಿ, ಈಗ ಅಧಿಕಾರಿಗಳು ನಿರ್ಲಕ್ಷ್ಯ ತೋರಲು ಕಾರಣವೇನು ;

(ಇ) ಮನೆ ತುಂಬೆಲ್ಲ ಜೇಡರ ಬಲೆ, ಹಾವು–ಚೇಳು, ಬೀದಿ ನಾಯಿಗಳು, ಮುರಿದು ಬಿದ್ದ ನಾಮಫಲಕ (ಬೋರ್ಡ್) ಇದೆಲ್ಲಾ ತುಂಬಿರುವ ಖ್ಯಾತ ಸಂಗೀತಗಾರ್ತಿ ಹುಟ್ಟಿದ ಮನೆಗೆ ಪುನರುಜ್ಜೀವನ ಮಾಡಲಾಗುವುದೇ ;

(ಈ) ಈ ವಸ್ತು ಸಂಗ್ರಹಾಲಯವನ್ನು ತಕ್ಷಣವೇ ದುರಸ್ಥಿಗೊಳಿಸಿ ಸಾರ್ವಜನಿಕರಿಗೆ ಮತ್ತು ಡಾ: ಗಂಗೂಬಾಯಿ ಹಾನಗಲ್ ಅಭಿಮಾನಿಗಳಿಗೆ ಅವರು ಹುಟ್ಟಿದ ಮನೆ ನೋಡಿ ಸಂತೋಷಪಡಲು ಬೇಕಾದ ಯಾವ ಕ್ರಮಗಳನ್ನು ಸರ್ಕಾರದಿಂದ ಕೈಗೊಳ್ಳಲಾಗುವುದು ?

# ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೨೧೬೦ (೨೩೭೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಸಂಖ್ಯೆ ಎಷ್ಟು: ಇದುವರೆಗೂ ಎಷ್ಟು ಕಾರ್ಮಿಕರು ಇಲಾಖೆಯಲ್ಲಿ ನೋಂದಾಯಿಸಿಕೊಂಡಿರುತ್ತಾರೆ ;

(ಆ) ನೋಂದಣಿ ಮಾಡಿಕೊಂಡಿರುವ ಕಾರ್ಮಿಕರು ಯಾವ ಯಾವ ರಾಜ್ಯದಿಂದ ಬಂದಿರುತ್ತಾರೆ ; ಇವರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು ;

(ಇ) ಅನ್ಯರಾಜ್ಯದ ಕಾರ್ಮಿಕರ ಎದುರು ಸ್ಥಳೀಯ ಕಾರ್ಮಿಕರಿಗೆ ಕೆಲಸವಿಲ್ಲದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೇ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ರಾಜ್ಯದಲ್ಲಿ ವಲಸೆ ಕಾರ್ಮಿಕರ ಸಂಖ್ಯೆ ಸುಮಾರು ೨೦ ಲಕ್ಷಕ್ಕೂ ಹೆಚ್ಚಿದ್ದು, ಇದರಲ್ಲಿ ಕೇವಲ ೫% ರಷ್ಟು ವಲಸಿಗರು ಮಾತ್ರ ನೊಂದಣಿ ಮಾಡಿಸಿಕೊಂಡಿರುವುದು ನಿಜವೇ ;

(ಉ) ವಲಸಿಗರಿಂದ ನಗರ ಮತ್ತು ಗ್ರಾಮೀಣ ಭಾಗದ ಸ್ಥಳೀಯ ಕಾರ್ಮಿಕರಿಗೆ ಅನ್ಯಾಯವಾಗುತ್ತಿದ್ದು ಇದಕ್ಕೆ ಕಾರಣ ಏನೆಂಬುದನ್ನು ಸರ್ಕಾರ ಚಿಂತಿಸಿದೆಯೇ ;

(ಊ) ವಲಸಿಗರು ನೇಕಾರಿಕೆ, ಕೃಷಿ, ಕಟಿಂಗ್ ಶಾಪ್, ಚಾಲನೆ ಮತ್ತು ಇನ್ನಿತರ ಎಲ್ಲಾ ಕೆಲಸಗಳನ್ನು ಮಾಡುತ್ತಿರುವುದರಿಂದ ರಾಜ್ಯದಲ್ಲಿರುವ ಕನ್ನಡಿಗರು ನಿರುದ್ಯೋಗಿಗಳಾಗುತ್ತಾರೆ ಎಂಬುದನ್ನು ಸರ್ಕಾರ ಗಮನಿಸಿದೆಯೇ ?

# ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆಂದು ನಿಗಧಿ ಮಾಡಿರುವ ಅನುದಾನದ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೨೧೬೧ (೨೩೬೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ಸಮಾಜ ಕಲ್ಯಾಣ ಇಲಾಖೆಯಲ್ಲಿ ಇಲ್ಲಿಯವರೆಗೂ ವಿದ್ಯಾರ್ಥಿಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆಂದು ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ;

(ಆ) ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ನೀಡಲಾಗುವ ಸಂಸ್ಥೆಗಳನ್ನು ಯಾವ ನಿಯಮದಡಿಯಲ್ಲಿ ಆಯ್ಕೆ ಮಾಡಿಕೊಳ್ಳಲಾಗುವುದು ; ಸರ್ಕಾರ ವಿಧಿಸಿರುವ ಮಾನದಂಡಗಳೇನು ;

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅರ್ಹ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಗೆಂದು ನಿಗಧಿಪಡಿಸಿರುವ ಕೋಟ್ಯಾಂತರ ರೂಪಾಯಿಗಳ ಟೆಂಡರನ್ನು ನುರಿತ ತರಬೇತಿ ಸಂಸ್ಥೆಗೆ ನೀಡದೆ, ಟೆಂಡರ್‌ನಲ್ಲಿ ಎಲ್–೧ ಆಗಿದ್ದ ಕಡಿಮೆ ಗುಣಮಟ್ಟದ ತರಬೇತಿ ಸಂಸ್ಥೆಗೆ ಟೆಂಡರ್ ನೀಡಲಾಗಿದೆಯೇ ;

(ಈ) ಡಾ: ಬಾಬು ಜಗಜೀವನರಾಮ್ ಭವನ (ಸುಮನಹಳ್ಳಿ) ಹಾಗೂ ಡಾ|| ಅಂಬೇಡ್ಕರ್ ಅಭಿವೃದ್ದಿ ನಿಗಮದಲ್ಲಿ ಸುಸಜ್ಜಿತ ತರಬೇತಿ ಕೇಂದ್ರಗಳ ಸೌಲಭ್ಯಗಳಿದ್ದರೂ ಸಹ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ, ಖಾಸಗಿ ಸಂಸ್ಥೆಗಳಿಗೆ ತರಬೇತಿ ಜಬಾಬ್ದಾರಿ ನೀಡುವ ಉದ್ದೇಶವೇನು ?

# ರಾಜ್ಯದ ಎಲ್ಲಾ ಪ್ರಮುಖ ನಗರಗಳಲ್ಲಿ ಭಿಕ್ಷಾಟನಾ ಮಾಡುವವರ ಕುರಿತು

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೨೧೬೨ (೨೩೯೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೂ ರಾಜ್ಯದ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಬಿಬಿಎಂಪಿ) ಸ್ಥಳೀಯ ಸಂಸ್ಥೆಗಳಿಂದ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ) ಇವುಗಳಿಂದ ಸಂಗ್ರಹಿಸಲಾಗಿರುವ ಭಿಕ್ಷಾಟನಾ ಉಪಕರಗಳ (ಸೆಸ್) ಹಣವೆಷ್ಟು ; (ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು)

(ಆ) ಸಂಗ್ರಹಿಸಲಾಗಿರುವ ಹಣವನ್ನು ಪೂರ್ಣ ಪ್ರಮಾಣದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ವರ್ಗಾಹಿಸಲಾಗಿದೆಯೇ ; ಅಥವಾ ಬಾಕಿ ಉಳಿಸಿಕೊಳ್ಳಲಾಗಿದೆಯೇ ;

(ಇ) ಬಾಕಿ ಉಳಿಸಿಕೊಂಡಿದ್ದಲ್ಲಿ ; ಯಾವ ಕಾರಣದಿಂದ ಬಾಕಿ ಉಳಿಸಿಕೊಳ್ಳಲಾಗಿದೆ: ಜವಾಬ್ದಾರಿ ಯಾವ ಅಧಿಕಾರಿಗೆ ವಹಿಸಲಾಗಿದೆ ; ಇದುವರೆಗೂ ಯಾವ ಕ್ರಮ ತೆಗೆದುಕೊಂಡಿದೆ (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದ ಎಲ್ಲಾ ಪ್ರಮುಖ ನಗರದಲ್ಲಿ ಭಿಕ್ಷಾಟನೆ ಮಾಡುವವರ ಸಂಖ್ಯೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುವವರನ್ನು ಹಿಡಿಯಲಾಗಿದೆಯೇ ; ಅವರಿಗೆ ಪರ್ಯಾಯವಾಗಿ ಯಾವ ಪರಿಹಾರವನ್ನು ನೀಡಲಾಗಿದೆ ;

(ಊ) ಕಳೆದ ೩ ವರ್ಷದಿಂದ ಕೇಂದ್ರ ಪರಿಹಾರ ಕೇಂದ್ರಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು: ಇವುಗಳನ್ನು ಯಾವ ಯಾವ ಕಾರ್ಯಗಳಿಗೆ ಬಳಸಿಕೊಳ್ಳಲಾಗಿದೆ ಹಾಗೂ ಸಂಗ್ರಹವಾಗುವ ಭಿಕ್ಷುಕರ ಸೆಸ್ ಹಣವನ್ನು ಭಿಕ್ಷುಕರ ಕ್ಷೇಮಾಭಿವೃದ್ಧಿ ಕಾರ್ಯಗಳನ್ನು ಹೊರತುಪಡಿಸಿ, ಬೇರೆ ಬೇರೆ ಕೆಲಸಗಳಿಗೆ ಬಳಸಿಕೊಳ್ಳಲು ನಿಯಮಗಳಲ್ಲಿ ಅವಕಾಶವಿದೆಯೇ ? (ನಿಯಮದ ಪ್ರತಿಯನ್ನು ಒದಗಿಸುವುದು)

## ಮೆಟ್ರಿಕ್ ನಂತರದ ಕೋರ್ಸ್ ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇತನದ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೨೧೬೩ (೨೩೯೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷದಿಂದ ಸರ್ಕಾರದ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್ ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇತನದ ಮೊತ್ತವೆಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ಇಲಾಖೆಯಲ್ಲಿ ಅನುದಾನದ ಕೊರತೆಯಿಂದ ಸುಮಾರು ೨೬೩.೫೯ ಕೋಟಿ ರೂ. ವಿದ್ಯಾರ್ಥಿ ವೇತನವನ್ನು ಬಾಕಿ ಉಳಿಸಿಕೊಂಡಿರುವುದು ನಿಜವೇ ;

(ಇ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೂ ವಿದ್ಯಾರ್ಥಿ ವೇತನಕ್ಕಾಗಿ ಬಂದಂತಹ ಅರ್ಜಿಗಳ ಸಂಖ್ಯೆಯೆಷ್ಟು; ಇದರಲ್ಲಿ ಅರ್ಹತೆವುಳ್ಳವರು ಹಾಗೂ ಅರ್ಹತೆ ಇಲ್ಲದವರ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸವುದು) ಹಾಗೂ ಅರ್ಹತೆವುಳ್ಳ ಎಲ್ಲಾ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ವೇತನ ನೀಡಲಾಗಿದೆಯೇ ;

(ಈ) ಮೆಟ್ರಿಕ್ ನಂತರದ ಕೋರ್ಸ್‌ಗಳ ವಿದ್ಯಾರ್ಥಿಗಳು ಯಾವ ಯಾವ ಯೋಜನೆಯಡಿಯಲ್ಲಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗಿರುತ್ತಾರೆ ?

## ಗ್ರಾಮೀಣ ರಸ್ತೆಗಳ ಕಾಮಗಾರಿ ಕುರಿತು

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೨೧೬೪ (೨೩೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೇರದಾಳ ಹಾಗೂ ಜಮಖಂಡಿ ವಿಧಾನಸಭಾ ಕ್ಷೇತ್ರದಲ್ಲಿರುವ ಗ್ರಾಮೀಣಾ ರಸ್ತೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಸಂಚಾರಕ್ಕೆ ಯೋಗ್ಯವಲ್ಲದ ರಸ್ತೆಗಳ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ಈ ಎರಡು ಕ್ಷೇತ್ರದ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಇಲ್ಲಿಯವರೆಗೂ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ನಡೆಯುತ್ತಿರುವ ಕಾಮಗಾರಿಗಳು ಯಾವುವು ; ಇದರಲ್ಲಿ ಪೂರ್ಣಗೊಂಡಿರುವ ಮತ್ತು ಚಾಲ್ತಿಯಲ್ಲಿರುವ ಕಾಮಗಾರಿಗಳ ಗ್ರಾಮಾವಾರು ವಿವರ ನೀಡುವುದು ?

## ಆರ್.ಡಿ.ಪಿ.ಆರ್. ಇಲಾಖೆ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೬೫ (೧೧೫೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಬಿಡುಗಡೆ ಆಗಿರುವ ಅನುದಾನದ ಮೊತ್ತವೆಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಬಿಡುಗಡೆಯಾದ ಅನುದಾನವೆಷ್ಟು ; ಬಾಕಿ ಬಿಡುಗಡೆಯಾಗಬೇಕಾಗಿರುವ ಅನುದಾನವೆಷ್ಟು ?

## ಜಿಲ್ಲಾ ವೃಂದದ ಜ್ಯೇಷ್ಠತಾ ಪಟ್ಟಿ ಸಿದ್ಧಪಡಿಸುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೧೬೬ (೨೪೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರಿ ನೌಕರರ ಜಿಲ್ಲಾ ವೃಂದದ ಜ್ಯೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಲು ಇರುವ ನಿಯಮಗಳು ಯಾವುವು ;

(ಆ) ಜಿಲ್ಲಾ ಜ್ಯೇಷ್ಠತಾ ಪಟ್ಟಿಗಳನ್ನು ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನಾಗಿ ಸಿದ್ದಪಡಿಸಲು ಇರುವ ನಿಯಮಗಳು ಯಾವುವು ;

(ಇ) ೨೦೧೦ರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಲು ಸದರಿ ನಿಯಮಗಳನ್ನು ಪಾಲಿಸಲಾಗಿದೆಯೇ ;

(ಈ) ಯಾವ ನಿಯಮಗಳಡಿ ಜಿಲ್ಲಾ ಜ್ಯೇಷ್ಠತಾ ಪಟ್ಟಿಯಲ್ಲಿಯ ಜ್ಯೇಷ್ಠತಾ ದಿನಾಂಕಗಳನ್ನು ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿಯಲ್ಲಿ ಬದಲಾಯಿಸಲು ಅವಕಾಶವಿದೆ ;

(ಉ) ಸದರಿ ಕ್ರಮಕ್ಕೆ ಅವಕಾಶ ಇಲ್ಲದಿದ್ದರೂ ಬದಲಾಯಿಸಿರುವುದು ಕಾನೂನು ಬಾಹಿರ ಕ್ರಮವಲ್ಲವೇ ?

## ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಬಡ್ತಿಯಲ್ಲಿ ಆಗಿರುವ ಗೊಂದಲಗಳ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೧೬೭ (೨೪೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಸರ್ಕಾರದಿಂದ ಸಲ್ಲಿಸಿದ ಅಫಿಡವಿಟ್ ಪ್ರತಿ ಒದಗಿಸುವುದು ;

(ಆ) ಸದರಿ ಅಫಿಡವಿಟ್‌ನಲ್ಲಿ ೨೦೧೦ರ ಎಲ್ಲಾ ನೇರ ನೇಮಕಾತಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಜ್ಯೇಷ್ಠತಾ ಅರ್ಹತಾ ದಿನಾಂಕ: ೧೯.೦೩.೨೦೧೦ ಎಂದು ಸರ್ಕಾರದ ಯಾವ ನಿಯಮಗಳಡಿ ನಿಗದಿಪಡಿಸಲಾಗಿದೆ ;

(ಇ) ಇದಕ್ಕೆ ಕಾನೂನು ಇಲಾಖೆ, ಸಿ.ಆ.ಸು.ಇಲಾಖೆಯ ಅಭಿಪ್ರಾಯ ಪಡೆದ ಪ್ರತಿ ಒದಗಿಸುವುದು ;

(ಈ) ಸದರಿ ಅಫಿಡವಿಟ್ ಯಾವ ಹಂತದಲ್ಲಿ ಅನುಮೋದನೆ ಪಡೆಯಲಾಗಿದೆ ; ಕಡತದ ಪ್ರತಿ ಒದಗಿಸುವುದು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಹಣ ದುರುಪಯೋಗವಾಗಿರುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೧೬೮ (೨೪೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಹಣ ದುರುಪಯೋಗ ಪ್ರಕರಣಗಳು ಕಂಡಿಕೆವಾರು ಹಾಗೂ ಲೆಕ್ಕ ಶೀರ್ಷಿಕೆವಾರು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು ;

(ಆ) ಈ ಕುರಿತು ವಸೂಲಾತಿ ಮಾಡಲಾದ ಮೊತ್ತ ಎಷ್ಟು ; ಹಾಗೂ ಬಾಕಿ ಉಳಿದಿರುವ ಮೊತ್ತ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಬಾಕಿ ಉಳಿದಿರುವ ಮೊತ್ತವು ಯಾವ ಕಾಲಮಿತಿಯೊಳಗೆ ವಸೂಲಾತಿ ಮಾಡಲಾಗುವುದು ?

## ತುಮಕೂರು ಜಿಲ್ಲೆಯಲ್ಲಿ ಕಾರ್ಮಿಕರ ನೋಂದಣಿ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೬೯ (೨೪೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಯಡಿ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು;

(ಆ) ತುಮಕೂರು ಜಿಲ್ಲೆ ವ್ಯಾಪ್ತಿಯಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಕೈಗಾರಿಕಾ ಪ್ರದೇಶವಿದ್ದು ಕೆಲಸ ಮಾಡುವ ಕಾರ್ಮಿಕರಿಗೆ

ಮಲ್ಟಿಸ್ಪೆಷಾಲಿಟಿ ಇ.ಎಸ್.ಐ ಆಸ್ಪತ್ರೆ ಇಲ್ಲದೆ ಸಾವಿರಾರು ಕಾರ್ಮಿಕರಿಗೆ ಬಹಳ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ತುಮಕೂರು ಜಿಲ್ಲೆಗೆ ಮಲ್ಟಿಸ್ಪೆಷಾಲಿಟಿ ಇ.ಎಸ್.ಐ ಆಸ್ಪತ್ರೆ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಚಿತ್ರಕಲಾ ಶಿಕ್ಷಕರ ವೇತನ ತಾರತಮ್ಯ ಕುರಿತು

**ಡಾ॥ ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :–**

೨೧೭೦ (೨೪೫೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಸತಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಚಿತ್ರಕಲಾ ಶಿಕ್ಷಕರುಗಳಿಗೆ ವೇತನ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಬಾಲ್ಯ ವಿವಾಹವನ್ನು ತಡೆಗಟ್ಟುವ ಬಗ್ಗೆ

**ಡಾ॥ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭೧ (೨೩೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೨೪–೨೫ ರಲ್ಲಿ ೭೦೦ ಬಾಲ್ಯ ವಿವಾಹಗಳಾಗಿವೆ ಎಂದು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದಕ್ಕೆ ಕಾರಣಗಳೇನು;

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ನಡೆದ ಬಾಲ್ಯ ವಿವಾಹಗಳ ಅಂಕಿ ಸಂಖ್ಯೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಾಲ್ಯ ವಿವಾಹವನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ಹಾಗೂ ಜಾಗೃತಿ ಕಾರ್ಯಕ್ರಮಗಳೇನು; (ವಿವರಗಳನ್ನು ನೀಡುವುದು)

(ಈ) ಈ ಸಾಮಾಜಿಕ ಪಿಡುಗನ್ನು ಸಮರ್ಥವಾಗಿ ತಡೆಗಟ್ಟಲು ಸರ್ಕಾರ ಈಗಾಗಲೇ ತೆಗೆದುಕೊಂಡಿರುವ ಕ್ರಮಗಳು ಪರಿಣಾಮಕಾರಿಯಾಗಿವೆ ಎಂದು ಸರ್ಕಾರಕ್ಕೆ ಮನವರಿಕೆಯಾಗಿದೆಯೇ; ಇವುಗಳನ್ನು ಮತ್ತಷ್ಟು ಬಿಗಿಗೊಳಿಸಲು ಹೆಚ್ಚುವರಿ ಕ್ರಮಗಳನ್ನು ಕೈಗೊಳ್ಳಲಾಗುವುದೇ?

## ವೈದ್ಯಕೀಯ ಉಪಕರಣ ಖರೀದಿಯಲ್ಲಿ ನಡೆದಿರುವ ಸಿ.ಎ.ಜಿ ವರದಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭೨ (೨೩೧೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಇ.ಎಸ್.ಐ (ESI) ಆಸ್ಪತ್ರೆಗಳಿಗೆ ಪೂರೈಕೆ ಮಾಡಿರುವ ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ ನಡೆದಿರುವ ಬೃಹತ್ ಅವ್ಯವಹಾರದ ಕುರಿತು ಸಿ.ಎ.ಜಿ (CAG) ವರದಿಯಲ್ಲಿ ಆಕ್ಷೇಪ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸಿ.ಎ.ಜಿ ವರದಿಯ ಅನ್ವಯ ಅಂದಾಜು ಎಷ್ಟು ಮೊತ್ತದ ಅವ್ಯವಹಾರ ನಡೆದಿದೆ; ಯಾವ ಯಾವ ಆಸ್ಪತ್ರೆಗಳಿಗೆ ಟೆಂಡರ್ ಪ್ರಕ್ರಿಯೆಯ ಯಾವೆಲ್ಲಾ ನಿಯಮಗಳನ್ನು ಉಲ್ಲಂಘಿಸಿ

ಉಪಕರಣಗಳನ್ನು ಖರೀದಿಸಲಾಗಿದೆ; (ಖರೀದಿಸಲಾದ ಉಪಕರಣಗಳ ಪಟ್ಟಿ, ಆಸ್ಪತ್ರೆಗಳ ಹೆಸರು ಮತ್ತು ಸರ್ಕಾರಕ್ಕೆ ಆಗಿರುವ ಆರ್ಥಿಕ ನಷ್ಟದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಇ) ಸಿ.ಎ.ಜಿ ವರದಿಯಲ್ಲಿನ ಈ ಗಂಭೀರ ಉಲ್ಲೇಖಗಳ ಹಿನ್ನೆಲೆಯಲ್ಲಿ ಸಾರ್ವಜನಿಕ ಹಣದ ಪೋಲು ಹಾಗೂ ಈ ಹಗರಣದ ಕುರಿತು ಸರ್ಕಾರದ ಯಾವುದಾದರೂ ಉನ್ನತ ಮಟ್ಟದ ತನಿಖೆಗೆ (ಸಿ.ಐ.ಡಿ/ ಲೋಕಾಯುಕ್ತ) ಆದೇಶಿಸಿದೆಯೇ; ಆದೇಶಿಸಿದ್ದಲ್ಲಿ, ಪ್ರಸ್ತುತ ತನಿಖೆಯು ಯಾವ ಹಂತದಲ್ಲಿದೆ; (ವಿವರ ಒದಗಿಸುವುದು)

(ಈ) ಸಾರ್ವಜನಿಕ ಹಣದ ದುರ್ಬಳಕೆ ಹಾಗೂ ಕರ್ತವ್ಯಲೋಪ ಎಸಗಿ ಸದರಿ ಭ್ರಷ್ಟಾಚಾರದಲ್ಲಿ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಭಾಗಿಯಾಗಿರುವ ಅಧಿಕಾರಿಗಳು, ಸಿಬ್ಬಂದಿವರ್ಗ ಹಾಗೂ ಪೂರೈಕೆದಾರರ (Suppliers) ವಿರುದ್ಧ ಸರ್ಕಾರ ಈವರೆಗೆ ಕೈಗೊಂಡಿರುವ ಕಾನೂನು ಹಾಗೂ ಶಿಸ್ತು ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕಟ್ಟಡ ಕಾರ್ಮಿಕರಿಗೆ ಒದಗಿಸಿರುವ ಸುರಕ್ಷತಾ ಕಿಟ್‌ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭೩ (೨೩೧೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಾರ್ಮಿಕ ಇಲಾಖೆಯು ಕಾರ್ಮಿಕರಿಗೆ ವಿತರಿಸಲಾಗುವ ಸುರಕ್ಷತಾ ಪರಿಕರಗಳನ್ನು ಒಳಗೊಂಡಿರುವ ಸುರಕ್ಷತಾ ಕಿಟ್‌ಗಳಿಗೆ

ಸಂಬಂಧಿಸಿದಂತೆ ಹಿಂದೆ ಖರೀದಿಸಿರುವ ಸುರಕ್ಷತಾ ಕಿಟ್‌ಗಳು ಇನ್ನೂ ಸಂಪೂರ್ಣವಾಗಿ ವಿತರಣೆ ಆಗದೇ ಇರುವ ಸಂದರ್ಭದಲ್ಲಿ ಸುಮಾರು ೪ ಲಕ್ಷ ಹೊಸ ಸುರಕ್ಷತಾ ಕಿಟ್‌ಗಳನ್ನು ಖರೀದಿಸಲಾಗಿದೆ ಎಂಬ ಮಾಹಿತಿ ಇದ್ದು, ಈ ಕುರಿತು ಸರ್ಕಾರದ ಉತ್ತರವೇನು;

(ಆ) ಈ ಹಿಂದೆ ಖರೀದಿಸಿರುವ ೭೫೦೦೦ ಸುರಕ್ಷತಾ ಕಿಟ್‌ಗಳನ್ನು ವಿತರಿಸದೇ ಇರುವಾಗ ೨೦೦ ಕೋಟಿ ರೂಪಾಯಿಗಳನ್ನು ಖರ್ಚು ಮಾಡಿ ಹೊಸದಾಗಿ ಸುರಕ್ಷತಾ ಕಿಟ್‌ಗಳನ್ನು ಖರೀದಿಸುವ ತುರ್ತು ಅಗತ್ಯವೇನು; (ವಿವರ ಒದಗಿಸುವುದು)

(ಇ) ಮಾನ್ಯ ಸರ್ವೋಚ್ಚ ನ್ಯಾಯಾಲಯವು ಕಾರ್ಮಿಕರಿಗೆ ಸೌಲಭ್ಯ ನೀಡುವಾಗ ಆಧಾರ್ ಕಾರ್ಡ್, ಕಾರ್ಮಿಕ ಗುರುತಿನ ಚೀಟಿಗಳ ಸಮಗ್ರ ಮಾಹಿತಿ ಪಡೆದು ಇವುಗಳ ಆಧಾರದ ಮೇಲೆ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಣೆ ಮಾಡುವ ಮೂಲಕ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಪಾಲನೆ ಮಾಡಿರುವ ಬಗ್ಗೆ ಸಮಗ್ರ ವಿವರ ನೀಡುವುದು;

(ಈ) ಸುರಕ್ಷತಾ ಕಿಟ್‌ಗಳನ್ನು ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ; ಕರೆದಿದ್ದಲ್ಲಿ, ಟೆಂಡರ್‌ನ ಮೊತ್ತ ಎಷ್ಟು; ಸುರಕ್ಷತಾ ಕಿಟ್‌ನ ಪರಿಕರಗಳ ಗುಣಮಟ್ಟ ಪರಿಶೀಲಿಸಲಾಗಿದೆಯೇ; ಸುರಕ್ಷತಾ ಕಿಟ್‌ನಲ್ಲಿ ಇರುವ ಪ್ರತಿಯೊಂದು ವಸ್ತುವನ್ನು ಎಷ್ಟು ಮೊತ್ತಕ್ಕೆ ಖರೀದಿಸಲಾಗಿದೆ? (ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶಿಷ್ಯ ವೇತನ ವಿಳಂಬ ಅನುದಾನ ವರ್ಗಾವಣೆ ಮತ್ತು ವಸತಿ ನಿಲಯಗಳ ಮೂಲಸೌಕರ್ಯಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭೪ (೨೩೧೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಿಂದುಳಿದ ವರ್ಗಗಳ (OBC) ವಿದ್ಯಾರ್ಥಿಗಳಿಗೆ ನೀಡಲಾಗುವ ಮೆಟ್ರಿಕ್ ಮತ್ತು ಪೂರ್ವ ಮೆಟ್ರಿಕ್ ನಂತರದ ಶಿಷ್ಯ ವೇತನವನ್ನು (Scholarship) ಕಳೆದ ಹಲವಾರು ತಿಂಗಳುಗಳಿಂದ ಸಕಾಲದಲ್ಲಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಶಿಷ್ಯವೇತನ ವಿಳಂಬದಿಂದಾಗಿ ಬಡ ವಿದ್ಯಾರ್ಥಿಗಳು ಕಾಲೇಜು ಶುಲ್ಕ ಪಾವತಿಸಲು ಮತ್ತು ಶೈಕ್ಷಣಿಕ ಚಟುವಟಿಕೆಗಳನ್ನು ಮುಂದುವರೆಸಲು ಅನುಭವಿಸುತ್ತಿರುವ ತೊಂದರೆಗಳನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು; (ಪ್ರಸ್ತುತ ಬಾಕಿ ಇರುವ ಒಟ್ಟು ಶಿಷ್ಯವೇತನದ ಮೊತ್ತದ ವಿವರ ನೀಡುವುದು)

(ಇ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಮತ್ತು ನಿಗಮಗಳಿಗೆ ವಿವಿಧ ಅಭಿವೃದ್ಧಿ ಯೋಜನೆಗಳಿಗಾಗಿ ಮೀಸಲಿಟ್ಟಿದ್ದ ಅನುದಾನವನ್ನು (OBC Funds) ಬೇರೆ ಯೋಜನೆಗಳಿಗೆ ಅಥವಾ ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಲಾಗಿದೆಯೇ; ಹಾಗಿದ್ದಲ್ಲಿ, ವರ್ಗಾವಣೆಗೊಂಡ ಒಟ್ಟು ಮೊತ್ತವೆಷ್ಟು ಮತ್ತು ಯಾವ ಉದ್ದೇಶಗಳಿಗಾಗಿ ಬಳಸಲಾಗಿದೆ;

(ಈ) ರಾಜ್ಯಾದ್ಯಂತ ಇರುವ ಬಿ.ಸಿ.ಎಂ (BCM) ವಸತಿ ನಿಲಯಗಳಲ್ಲಿ ಕುಡಿಯುವ ನೀರು, ಶೌಚಾಲಯ, ಸುಸಜ್ಜಿತ ಕಟ್ಟಡ ಮತ್ತು ಗುಣಮಟ್ಟದ ಆಹಾರದಂತಹ ಮೂಲಸೌಕರ್ಯಗಳ ತೀವ್ರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ವಸತಿ ನಿಲಯಗಳ ಅಭಿವೃದ್ಧಿಗೆ ಮತ್ತು ಮೂಲಸೌಕರ್ಯ ಸುಧಾರಣೆಗೆ ಕಳೆದ ಒಂದು ವರ್ಷದಲ್ಲಿ ಎಷ್ಟು ಅನುದಾನ

ಬಿಡುಗಡೆ ಮಾಡಲಾಗಿದೆ; ಹೊಸ ವಸತಿ ನಿಲಯುಗಳ ನಿರ್ಮಾಣಕ್ಕಾಗಿ ಸರ್ಕಾರ ಹೊಂದಿರುವ ಭವಿಷ್ಯದ ಯೋಜನೆಗಳೇನು? (ಜಿಲ್ಲಾವಾರು ವಿವರ ನೀಡುವುದು)

## Road Construction Tool Kit ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭೫ (೨೩೧೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ Road Construction Tool Kit ಖರೀದಿಸಲು ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ; ಸದರಿ ಮೊತ್ತವನ್ನು ಟೆಂಡರ್ ಪಡೆದಿರುವ ಯಾವ ಸಂಸ್ಥೆಯ ಹೆಸರಿನಲ್ಲಿ ನೀಡಲಾಗಿದೆ; ಸಂಸ್ಥೆಯ ಹೆಸರು, ವಿಳಾಸ, ಹಾಗೂ ಸದರಿ ಸಂಸ್ಥೆಗೆ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಪಾವತಿಸಲಾದ ಮೊತ್ತದ ಸಮಗ್ರ ವಿವರ ನೀಡುವುದು; (ಸದರಿ ಮೊತ್ತವನ್ನು ಡ್ರಾ ಮಾಡಲಾದ ದಿನಾಂಕ, ಎಷ್ಟು ಮೊತ್ತದ ಬಿಲ್ ಡ್ರಾ ಮಾಡಲಾಗಿದೆ, ಬಿಲ್ ಸಂಖ್ಯೆ, ಪಾವತಿದಾರರ ಹೆಸರು, ಯಾವ ಬ್ಯಾಂಕಿನ ಮೂಲಕ ಪಾವತಿಸಲಾಗಿದೆ)

(ಆ) ಕಳೆದ ಎರಡು ವರ್ಷದಲ್ಲಿ Road Construction Tool Kit ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ, ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್‌ನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು;

(ಇ) Road Construction Tool Kit ಬಳಕೆಯ ಕುರಿತು ಇದುವರೆಗೆ ಎಷ್ಟು ತರಬೇತಿ ಶಿಬಿರಗಳನ್ನು ಆಯೋಜಿಸಲಾಗಿದೆ; ತರಬೇತಿ ನೀಡಲು ಯಾವ ಸಂಸ್ಥೆಗಳನ್ನು ಆಯ್ಕೆ ಮಾಡಲಾಗಿದೆ; ತರಬೇತಿ ನೀಡಲು ಆ ಸಂಸ್ಥೆಗೆ ಇರಬೇಕಾದ ಅರ್ಹತೆಗಳೇನು; ತರಬೇತಿ ಪಡೆದ ಹಾಗೂ Road Construction Tool Kit ಪಡೆದ ಫಲಾನುಭವಿಗಳ ಆಧಾರ್ ಕಾರ್ಡ ಹಾಗೂ ಲೇಬರ್ ಕಾರ್ಡ ಜೋಡಣೆ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) Road Construction Tool Kit ನಲ್ಲಿ ಇರುವ ಪ್ರತಿಯೊಂದು ವಸ್ತುವಿನ ಬೆಲೆ ಎಷ್ಟು; ಒಟ್ಟಾರೆಯಾಗಿ Road Construction Tool Kit ನ ಬೆಲೆ ಎಷ್ಟು; ಎಲ್ಲಾ ವಸ್ತುಗಳು ISI ಗುಣಮಟ್ಟ ಹೊಂದಿರುವ ಬಗ್ಗೆ ಪ್ರಮಾಣೀಕರಿಸಿದವರ ಹೆಸರು ಮತ್ತು ಹುದ್ದೆಯೊಂದಿಗೆ ವಿವರ ನೀಡುವುದು?

## ಬಳ್ಳಾರಿ ಜಿಲ್ಲೆಯ ಶ್ರೀಧರಗಡ್ಡ, ಅಮರಪುರ, ಹಂದಿಹಾಳ್ ಪಂಚಾಯಿತಿಗಳಲ್ಲಿನ ಸಾಮಾಗ್ರಿಗಳ ಖರೀದಿಯಲ್ಲಿ ಟೆಂಡರ್‌ಗಳ ಬಗ್ಗೆ

**ಶ್ರೀ ವೈ. ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೬ (೨೩೪೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದೇಶ ಸಂಖ್ಯೆ; ಗ್ರಾಅಪಂರಾ/೧೭೪/ಜಿಪಸ/೨೦೨೪, ದಿನಾಂಕ:೧೦–೧೦–೨೦೨೪ರ ಮೇರೆಗೆ ಬಳ್ಳಾರಿ ಜಿಲ್ಲೆಯ ಯಾವ

ಯಾವ ಗ್ರಾಮ ಪಂಚಾಯಿತಿಗಳಿಗೆ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ ಯೋಜನೆಯಡಿಯಲ್ಲಿ ಯಾವ ಯಾವ ಕಾರ್ಯಗಳಿಗೆ ಎಷ್ಟು ಎಷ್ಟು ಅನುದಾನವನ್ನು ಯಾವ ಖಾತೆಗಳಿಗೆ ನೀಡಲಾಗಿದೆ; ಪೂರ್ಣ ವಿವರಗಳೊಂದಿಗೆ ಸರ್ಕಾರಿ ಆದೇಶ ಪ್ರತಿಗಳೊಂದಿಗೆ ಮಾಹಿತಿ ಒದಗಿಸುವುದು;

(ಆ) ಬಳ್ಳಾರಿ ಜಿಲ್ಲೆಯ ಶ್ರೀಧರಗಡ್ಡ, ಅಮರಪುರ, ಹಂದಿಹಾಳ್ ಗ್ರಾಮ ಪಂಚಾಯಿತಿಗಳಲ್ಲಿ ಯಾವ ಮಾರ್ಗಸೂಚಿಗಳನ್ನು ಅನುಸರಿಸಿ ಈ ಅನುದಾನದ ಹಣವನ್ನು ಬಳಸಲಾಗಿದೆ; ಈ ಹಣವನ್ನು ಬಳಸಲು ಸಾಮಾನ್ಯ ಸಭೆಯಲ್ಲಿ ಚರ್ಚಿಸಲಾಗಿದೆಯೇ; ಇದ್ದಲ್ಲಿ, ಅದರ ನಡವಳಿಯನ್ನು ಒದಗಿಸುವುದು;

(ಇ) ಬಳ್ಳಾರಿ ಜಿಲ್ಲೆಯ ಶ್ರೀಧರಗಡ್ಡ, ಅಮರಪುರ, ಹಂದಿಹಾಳ್ ಗ್ರಾಮ ಪಂಚಾಯಿತಿಗಳಲ್ಲಿ ಆದೇಶ ಸಂಖ್ಯೆ; ಗ್ರಾಅಪಂರಾ/೧೭೪/ಜಿಪಸ/ ೨೦೨೪, ದಿನಾಂಕ:೧೦-೧೦-೨೦೨೪ ರನ್ವಯ ಬಂದ ಅನುದಾನವನ್ನು ಬಳಸಿರುವ ಕುರಿತು ಹಾಗೂ ಈ ಕೆಲಸ ಕೈಗೊಂಡ ಸಂಸ್ಥೆ/ಸಾಮಾಗ್ರಿಗಳನ್ನು ಪೂರೈಸಿದವರು, ಯಾವ ಮಾರ್ಗಸೂಚಿಗಳನ್ನು ಬಳಸಿ ಸಾಮಾಗ್ರಿಗಳನ್ನು ಪೂರೈಸಲಾಗಿದೆ ಇದಕ್ಕೆ ಎಲೆಕ್ಟ್ರಾನಿಕ್ಸ್ ಸ್ಪೆಸಿಫಿಕೇಶನ್ ಪಡೆಯಲು ಯಾರ ಸಲಹೆ ಪಡೆಯಲಾಗಿದೆ; ಈ ಸಾಮಾಗ್ರಿಗಳ ಪೂರೈಕೆಯ ಎಲ್ಲಾ ದಾಖಲೆಗಳನ್ನು ಒದಗಿಸುವುದು;

(ಈ) ಬಳ್ಳಾರಿ ಜಿಲ್ಲೆಯ ಶ್ರೀಧರಗಡ್ಡ, ಅಮರಪುರ, ಹಂದಿಹಾಳ್ ಗ್ರಾಮ ಪಂಚಾಯಿತಿಗಳಲ್ಲಿ ಕಲಿಕಾ ಕೇಂದ್ರ ಹಣ ದುರ್ಬಳಕೆ ಆಗಿರುವ ಮಾಹಿತಿ ಇದ್ದು ಇದರ ಬಗ್ಗೆ ಸೂಕ್ತ ವಿಚಾರಣೆ ನಡೆಸಲು ಸರ್ಕಾರದ ನಿರ್ಧಾರಗಳೇನು ? (ವಿವರಗಳನ್ನು ಒದಗಿಸುವುದು)

## ೧೫ನೇ ಹಣಕಾಸಿನ ಅನುದಾನ ಹಂಚಿಕೆ ಮಾಡಿರುವ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೭ (೨೫೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧–೨೨ನೇ ಆರ್ಥಿಕ ವರ್ಷದಿಂದ ಇಲ್ಲಿಯವರೆಗೆ ೧೫ನೇ ಹಣಕಾಸಿನ ಯೋಜನೆಯಡಿಯಲ್ಲಿ ರಾಜ್ಯ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆಯಾದ ಸಾಮಾನ್ಯ (ನಿಗದಿತ) ಅನುದಾನ ಮತ್ತು ವಿಶೇಷ ಅನುದಾನ ಎಷ್ಟು; ಜಿಲ್ಲಾವಾರು ಮತ್ತು ಗ್ರಾಮ ಪಂಚಾಯಿತಿವಾರು ಅನುದಾನ ಬಿಡುಗಡೆಯಾದ ದಿನಾಂಕಗಳೊಂದಿಗೆ ವಿವರಗಳನ್ನು ಒದಗಿಸುವುದು;

(ಆ) ೧೫ನೇ ಹಣಕಾಸಿನ ಯೋಜನೆಯಲ್ಲಿ ರಾಜ್ಯದ ಯಾವ ಯಾವ ಗ್ರಾಮ ಪಂಚಾಯಿತಿಗಳಿಗೆ ನಿಗದಿತ (ಸಾಮಾನ್ಯ) ಅನುದಾನ ಹೊರತುಪಡಿಸಿ ವಿಶೇಷ ಅಥವಾ ಹೆಚ್ಚಿನ ಅನುದಾನವನ್ನು ನಿರ್ದಿಷ್ಟ ಗ್ರಾಮ ಪಂಚಾಯಿತಿಗಳಿಗೆ ನೀಡಿರುವ ಪಂಚಾಯಿತಿಗಳ ವಿವರಗಳನ್ನು ಜಿಲ್ಲಾವಾರು ಮತ್ತು ಪಂಚಾಯಿತಿವಾರು ವಿವರಗಳನ್ನು ಒದಗಿಸುವುದು;

(ಇ) ೧೫ನೇ ಹಣಕಾಸಿನ ಯೋಜನೆಯಲ್ಲಿ ಈ ರೀತಿ ವಿಶೇಷ ಮತ್ತು ಕೆಲವು ಪಂಚಾಯಿತಿಗೆ ಹೆಚ್ಚಿನ ಅನುದಾನ ನೀಡಲು ರಾಜ್ಯ ಸರ್ಕಾರಕ್ಕೆ ಅಧಿಕಾರ ಇದೆಯೇ ಇದ್ದಲ್ಲಿ, ಅದರ ಆದೇಶ ಪ್ರತಿಯನ್ನು ಮತ್ತು ಕೇಂದ್ರ ಸರ್ಕಾರದ ಆದೇಶಗಳನ್ನು ಒದಗಿಸುವುದು?

# T.P ಮತ್ತು Z.P ಗಳಿಗೆ ಮಂಜೂರಾಗಿರುವ ಹುದ್ದೆಗಳ ಕುರಿತು

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೮ (೨೩೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳಲ್ಲಿ ಗ್ರೂಪ್–ಸಿ ಮತ್ತು ಗ್ರೂಪ್–ಡಿ ವೃಂದದಲ್ಲಿ ಮಂಜೂರಾಗಿರುವ ಹುದ್ದೆಗಳಿಗೆ ಕರ್ನಾಟಕ ಸಿವಿಲ್ ಸೇವಾ ಅಧಿನಿಯಮ ೧೯೭೮ರಡಿ ವೃಂದ ಮತ್ತು ನೇಮಕಾತಿ ನಿಯಮ ದಿನಾಂಕ: ೨೦.೦೭.೨೦೨೧ ರಂದು ರಚಿಸಿ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳು ರಾಜ್ಯ ಸಿವಿಲ್ ಸೇವಾ ಹುದ್ದೆಗಳ ವ್ಯಾಪ್ತಿಗೆ ಬರುತ್ತವೆಯೇ ಅಥವಾ ಸ್ಥಳೀಯ ಸಂಸ್ಥೆಯ ಹುದ್ದೆಗಳ ವ್ಯಾಪ್ತಿಗೆ ಬರುತ್ತವೆಯೇ? (ಆದೇಶ ಮತ್ತು ದಾಖಲೆಗಳೊಂದಿಗೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

# ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಯೋಜನೆ VBGRAM-G ಕುರಿತು

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೯ (೨೩೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಕೇಂದ್ರದ VBGRAM-G ಯೋಜನೆಯನ್ನು ಒಪ್ಪಿರುತ್ತದೆಯೇ ಅಥವಾ ಇಲ್ಲವೆ; ಒಪ್ಪದಿದ್ದಲ್ಲಿ, ಏಪ್ರಿಲ್ ೧ ರಿಂದ ನರೇಗಾ ಕಾರ್ಮಿಕರಿಗೆ ಕೆಲಸ ಕೊಡಲು ಯಾವ ಕ್ರಮ ಕೈಗೊಳ್ಳಲು ಉದ್ದೇಶಿಸಿದೆ; ಕಾರ್ಮಿಕರ ಜೀವನೋಪಾಯಕ್ಕಾಗಿ ಯಾವ ವ್ಯವಸ್ಥೆ ಮಾಡಿದೆ ; (ಮಾಹಿತಿ ಒದಗಿಸುವುದು)

(ಆ) ರಾಜ್ಯ ಸರ್ಕಾರವೇ ಹೊಸ ಯೋಜನೆಯನ್ನು ರೂಪಿಸಲು ಯೋಜಿಸಿದ್ದಲ್ಲಿ, ಯೋಜನೆ ಯಾವ ಹಂತದಲ್ಲಿದೆ ಅದಕ್ಕೆ ಬೇಕಾಗುವ ತಾಂತ್ರಿಕ ವ್ಯವಸ್ಥೆಯನ್ನು (IT Infrastructure) ರೂಪಿಸಲಾಗುತ್ತಿದೆಯೇ; (ಮಾಹಿತಿ ಒದಗಿಸುವುದು)

(ಇ) ನರೇಗಾ ಯೋಜನೆಯ ಮೇಲೆ ಅವಲಂಬಿತರಾಗಿದ್ದ ಹೊರಗುತ್ತಿಗೆ ನರೇಗಾ ಸಿಬ್ಬಂದಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆಯೇ; (ಮಾಹಿತಿ ಒದಗಿಸುವುದು)

(ಈ) ರಾಜ್ಯದಲ್ಲಿ ನರೇಗಾ ಯೋಜನೆಯಡಿ ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೇ; ಇವುಗಳನ್ನು ಮುಕ್ತಾಯ ಮಾಡಲು ಪರ್ಯಾಯ ವ್ಯವಸ್ಥೆ ಏನು; ಅವುಗಳ ಹಣ ಪಾವತಿ ಹೇಗೆ? (ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ "ಅಲೆಮಾರಿ ಜಾತಿ ಪಟ್ಟಿ" ಸೇರ್ಪಡೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೨೧೮೦ (೨೪೨೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದೇಶ ಸಂಖ್ಯೆ:ಪಿ.ಎಚ್.ಎಸ್.೨೬೨ ಎಸ್.ಇ.ಡಬ್ಲ್ಯೂ ೬೫ ದಿನಾಂಕ:೦೧.೦೨.೧೯೬೬ರ ಪ್ರಕಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಈಗಾಗಲೇ ಸೇರ್ಪಡೆಗೊಂಡಿರುವ ೪೬ ಅಲೆಮಾರಿ, ಅರೆ-ಅಲೆಮಾರಿ ಜಾತಿ ಪಟ್ಟಿಯನ್ನು ಪರಿಷ್ಕರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಆ) ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಅಧಿನಿಯಮ,೧೯೯೫ (ಅಧ್ಯಾಯ-೩)ರ ಉಪ ಪ್ರಕರಣ ೯(೨)ರಲ್ಲಿ ಆಯೋಗವು ನೀಡಿದ ಶಿಫಾರಸ್ಸುಗಳನ್ವಯ ಜಯ ಪ್ರಕಾಶ್ ಹೆಗಡೆಯವರು ನೀಡಿದ ವಿಶೇಷ ವರದಿಯಲ್ಲಿ ಉಲ್ಲೇಖಿಸಿರುವ ಚಪ್ಪರದ, ಕಾಡುಗೊಲ್ಲ, ಗೌಳಿ, ಕುಡುಬಿ, ಖಂಜರ ಭಾಟ್ ಇಂತಹ ಅಲೆಮಾರಿ ಸಮುದಾಯಗಳನ್ನು ಅಲೆಮಾರಿ ಜಾತಿ ಪಟ್ಟಿಯನ್ನು ಪರಿಷ್ಕರಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು ?

## ಅಂಗವಿಕಲರಿಗೆ ಉಚಿತ ಬಸ್ ಪ್ರಯಾಣ ಮಾಡುವ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೮೧ (೨೪೪೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಮ್ಮ ಘನ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯ ಮಹಿಳೆಯರಿಗೆ ಉಚಿತವಾಗಿ ಸಾಮಾನ್ಯ ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದಾದ್ಯಂತ ಪ್ರಯಾಣ ಮಾಡಲು ಅವಕಾಶ ನೀಡಿರುತ್ತಾರೆ, ಪ್ರಸ್ತುತ ರಾಜ್ಯದಲ್ಲಿ ಅಂಗವಿಕಲರಿಗೆ ಸರ್ಕಾರವು ಪ್ರತಿ ವರ್ಷ ೬೬೦ ರೂ ಪಡೆದು ರಿಯಾಯಿತಿ

ನೀಡಿ ವಾಸಸ್ಥಳದಿಂದ ೧೦೦ ಕಿಮೀ ವರೆಗೆ ಪ್ರಯಾಣ ಮಾಡಲು ಅವಕಾಶ ನೀಡಿರುತ್ತದೆ; ಮಾನ್ಯ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಡಿ॥ ಎಸ್ ಎಂ ಕೃಷ್ಣ ರವರ ಅಧಿಕಾರವಧಿಯಲ್ಲಿ ಸದರಿ ಅಂಗವಿಕಲರಿಗೆ ಸಂಪೂರ್ಣ ಉಚಿತವಾಗಿ ರಾಜ್ಯಾದ್ಯಂತ ಪ್ರಯಾಣ ಮಾಡಲು ಅನುಮತಿ ಮಾಡಿಕೊಡಲಾಗಿತ್ತು, ಪ್ರಸ್ತುತ ಸರ್ಕಾರದಿಂದ ಈ ಯೋಜನೆಯ ಬಗ್ಗೆ ಯಾವ ನಿರ್ಣಯ ತೆಗೆದುಕೊಳ್ಳಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸ್ತುತ ಮಹಿಳೆಯರಿಗೆ ಉಚಿತವಾಗಿ ಎಲ್ಲಾ ಸಾರಿಗೆ ಇಲಾಖಾ ಬಸ್ಸುಗಳಿಗೆ ಉಚಿತ ಪ್ರಯಾಣ ಮಾಡಲು ಅವಕಾಶ ನೀಡಿದ್ದು ಅದೇ ರೀತಿಯಲ್ಲಿ ಅಂಗವಿಕಲರಿಗೆ ಯಾವುದೇ ಹಣ ಪಡೆಯದೇ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣ ಮಾಡಲು ಮಾನವೀಯತೆಯಿಂದ ಅವಕಾಶ ಕಲ್ಪಿಸಲಾಗುವುದೇ ;

(ಇ) ಅನ್ಯ ರಾಜ್ಯಗಳಲ್ಲಿ ಅಂಗವಿಕಲರಿಗೆ ಮಾಶಾಸನ ಹೆಚ್ಚಿಗೆ ಇದ್ದು ಕರ್ನಾಟಕದಲ್ಲಿ ಅದನ್ನು ವಿಸ್ತರಿಸಲಾಗುವುದೇ ?

## ರೈತರ ಉಪಕರಣಗಳ ಸಹಾಯಧನ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೮೨ (೨೪೪೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖಾ ವ್ಯಾಪ್ತಿಯಲ್ಲಿ ರೈತರಿಗೆ ಉಪಯುಕ್ತವಾಗುವಂತೆ ಯಾವ ಯಾವ ರೈತ ಉಪಕರಣಗಳಿಗೆ ಸಹಾಯಧನವನ್ನು ನೀಡಲಾಗುತ್ತಿದೆ; ಅಥವಾ ಉಚಿತವಾಗಿ ನೀಡಲಾಗುತ್ತಿದೆ ; ಅದರ ಉಪಯುಕ್ತತೆ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಜಿಲ್ಲಾವಾರು ಮಾಹಿತಿ ನೀಡುವುದು) (ಸಂಪೂರ್ಣ ಮಾಹಿತಿ ಫಲಾನುಭವಿಗಳ ಹೆಸರು, ವಿಳಾಸ ಮತ್ತು ಪಡಿತರ ಚೀಟಿ ನಕಲು ಪ್ರತಿ ನೀಡುವುದು)

(ಆ) ಜೇನು ಸಾಕಣಿಕೆ ಮಾಡುವ ರೈತರಿಗೆ ಕೃಷಿ ಇಲಾಖೆ ವ್ಯಾಪ್ತಿಯಿಂದ ಜೇನು ಪೆಟ್ಟಿಗೆಗೆ ಸಹಾಯಧನ ನೀಡಲಾಗುತ್ತಿದೆಯೇ; ಅದಕ್ಕೆ ಸರ್ಕಾರದಿಂದ ನಿಗದಿತ ಹಣ ರೈತರು ಪಾವತಿಸಬೇಕೆ ಮತ್ತು ಜೇನು ಸಾಕಾಣಿಕೆ ಮಾಡುವವರಿಗೆ ತರಬೇತಿಯನ್ನು ನೀಡಲಾಗುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಕೃಷಿ ಇಲಾಖಾ ವ್ಯಾಪ್ತಿಯಲ್ಲಿ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆಯೇ; ಮಾಡಿದ್ದಲ್ಲಿ, ನೇಮಕಗೊಂಡವರ ಹೆಸರು, ವಿಳಾಸ, ಪದನಾಮ, ದೂರವಾಣಿ ಸಂಖ್ಯೆ ಸಹಿತ ನೀಡುವುದು; ನೇಮಕವಾಗದಿದ್ದಲ್ಲಿ, ಖಾಲಿ ಇರುವ ಸ್ಥಳಗಳು ಯಾವುವು?

## ಕೆಕೆಆರ್‌ಡಿಬಿಯಲ್ಲಿ ಪ್ರಸ್ತುತ ಕಾಮಗಾರಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೮೩ (೨೪೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ೨೦೨೫–೨೬ನೇ ಸಾಲಿನಲ್ಲಿ ಕೆಕೆಆರ್‌ಡಿಬಿಯಲ್ಲಿ ಯಾವ ಯಾವ ಕಾಮಗಾರಿಯು ಪ್ರಗತಿಯಲ್ಲಿದೆ; ಮತ್ತು ಯಾವ ಹಂತದಲ್ಲಿದೆ; ಸಂಪೂರ್ಣ ಮಾಹಿತಿ ನೀಡುವುದು;

(ಆ) ಪ್ರಸ್ತುತ ೨೦೨೫–೨೬ನೇ ಸಾಲಿನಲ್ಲಿ ಕೆಕೆಆರ್‌ಡಿಬಿಯಲ್ಲಿ ಕಾಮಗಾರಿಗಾಗಿ ಉಳಿದಿರುವ ಮೊತ್ತ ಎಷ್ಟು; ಉಳಿದ ಮೊತ್ತದಲ್ಲಿ ಸರ್ಕಾರದಿಂದ ಯಾವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಯಾವ ಯಾವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ಜಿಲ್ಲಾವಾರು ಕಾಮಗಾರಿಯ ಹೆಸರು, ಪರವಾನಿಗೆ ಪಡೆದ ಗುತ್ತಿಗೆದಾರರ ಹೆಸರು, ದೂರವಾಣಿ ಸಂಖ್ಯೆ ಮತ್ತು ಬಿಡುಗಡೆಯಾದ ಅನುದಾನದ ಮೊತ್ತ ಸಹಿತ ಮಾಹಿತಿ ನೀಡುವುದು)

## ರಾಜ್ಯದ ಇ.ಎಸ್.ಐ ಆಸ್ಪತ್ರೆಗಳ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೨೧೮೪ (೨೪೬೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಇ.ಎಸ್.ಐ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸಕಾಲಕ್ಕೆ ಚಿಕಿತ್ಸೆ ನೀಡುತ್ತಿಲ್ಲವೆಂದು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರದ ಗಮನಕ್ಕೆ ಬಂದಿದ್ದರೆ, ದಿನನಿತ್ಯ ಆಗಮಿಸುವ ರೋಗಿಗಳಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಇ.ಎಸ್.ಐ ಆಸ್ಪತ್ರೆಗೆ ಬೇಕಾಗಿರುವ ಔಷಧಿ ಸರಬರಾಜು ಮತ್ತು ವೈದ್ಯಕೀಯ ಸಂಬಂಧಿತ ವಸ್ತುಗಳನ್ನು ಸರಬರಾಜು ಮಾಡುವ ಕಂಪನಿಗಳಿಗೆ ಸರ್ಕಾರ ಸಕಾಲಕ್ಕೆ ಸರಬರಾಜು ಹಣವನ್ನು ಪಾವತಿ ಮಾಡದೇ ಇರುವುದರಿಂದ ಈ ಕಂಪನಿಗಳು ಇ.ಎಸ್.ಐ ಆಸ್ಪತ್ರೆಗಳಿಗೆ ಔಷಧಿ ಸರಬರಾಜು ಸಕಾಲಕ್ಕೆ ಸರಬರಾಜು ಮಾಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಸರ್ಕಾರದ ಗಮನಕ್ಕೆ ಬಂದಿದ್ದರೆ, ಈ ರೀತಿಯ ಔಷಧಿ ಕಂಪನಿಗಳಿಗೆ ಸರ್ಕಾರ ನೀಡಬೇಕಾಗಿರುವ ಬಾಕಿ ಹಣದ ಮೊತ್ತ ಎಷ್ಟು ?

# ರಾಯಚೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಎ. ವಸಂತ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೮೫ (೨೪೬೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಒಟ್ಟು ಸಂಖ್ಯೆ ಎಷ್ಟು; ಅವುಗಳಲ್ಲಿ ವಿದ್ಯಾರ್ಥಿಗಳ ಅನುಮೋದಿತ ಸಾಮರ್ಥ್ಯ ಮತ್ತು ವಾಸ್ತವಿಕ ಹಾಜರಾತಿ ಎಷ್ಟು ;

(ಆ) ಹಾಸ್ಟೆಲ್‌ಗಳಲ್ಲಿ ಖಾಲಿ ಇರುವ ವಾರ್ಡನ್ ಹಾಗೂ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಕಳೆದ ಮೂರು ವರ್ಷಗಳಲ್ಲಿ ಹಾಸ್ಟೆಲ್‌ಗಳ ಜೀರ್ಣೋದ್ಧಾರ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಮಂಜೂರಾದ ಮತ್ತು ಖರ್ಚಾದ ಅನುದಾನ ಎಷ್ಟು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-225/500 ಪ್ರತಿಗಳು/10–03–2026